VOLUME: 16 | 29 MAY 2026 | ಶುಕ್ರವಾರ | RS: 2 | PAGE: 06 ISSUE: 108 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

47 ವರ್ಷದ ಬಾಲಿವುಡ್ ನಟಿ ಶಮಿತಾ ಶೆಟ್ಟಿ ಮದುವೆಯಾಗದ ಕಾರಣ ಟ್ರೋಲ್‌ಗೆ ಒಳಗಾಗಿದ್ದರು. ಸಮಾಜದ ನಿರೀಕ್ಷೆಗೆ ಬಗ್ಗದೆ, ತಮ್ಮ ವೈಯಕ್ತಿಕ ಆಯ್ಕೆಯನ್ನು ಸಮರ್ಥಿಸಿಕೊಂಡಿರುವ ಅವರು, ಇದೀಗ ಇನ್‌ಸ್ಟಾಗ್ರಾಮ್‌ನಲ್ಲಿ ವಯಸ್ಸು ಮತ್ತು ಮದುವೆಯ ಬಗ್ಗೆ ಟೀಕಿಸಿದ ಟ್ರೋಲರ್‌ಗಳಿಗೆ ಖಡಕ್ ಉತ್ತರ ನೀಡಿದ್ದಾರೆ.



BHARATHA SARATHI
KANNADA DAILY NEWS PAPER

# ಭಾರತ ಸಾರಥಿ

CALL 9740160669
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ
prabhavaa.com



ಸಂಪಾದಕ
ಗಂಡಸಿ ಸದಾನಂದಸ್ವಾಮಿ



# ಇರಾನ್ ಮೇಲೆ ಮತ್ತೆ ಅಮೆರಿಕಾ ದಾಳಿ

ಟೆಹ್ರಾನ್: ಹಾರ್ಮುಜ್ ಜಲಸಂಧಿಯಲ್ಲಿ ಅಮೆರಿಕ ಮತ್ತೆ ದಾಳಿ ನಡೆಸಿದೆ. ಇರಾನ್‌ನ ಮಿಲಿಟರಿ ತಾಣವನ್ನು ಗುರಿಯಾಗಿಸಿಕೊಂಡು ಅಮೆರಿಕ ಸೇನೆಯು ರಾತ್ರಿಯಿಡೀ ದಾಳಿ ನಡೆಸಿದೆ. ಈ ವೇಳೆ ಇರಾನ್ ಕೂಡ ಪ್ರತಿದಾಳಿ ಮಾಡಿದ್ದು, ಇರಾನಿನ ಡ್ರೋನ್‌ಗಳನ್ನು ಅಮೆರಿಕ ಹೊಡೆದುರುಳಿಸಿದೆ ಎಂದು ಅಮೆರಿಕ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಬಂದರ್ ಅಬ್ಬಾಸ್ ಬಳಿ ದಾಳಿಯ ಬಳಿಕ ಇರಾನ್ ಅಮೆರಿಕದ ಸೇನಾ ನೆಲೆ ಮೇಲೆ ಪ್ರತೀಕಾರದ ದಾಳಿ ನಡೆಸಿದೆ. ಅಮೆರಿಕದ ದಾಳಿಗೆ ಪ್ರತೀಕಾರವಾಗಿ ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ಇಂದು ಗುರುವಾರ ಅಮೆರಿಕದ ನೆಲೆಯನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿದೆ. ಬಂದರ್ ಅಬ್ಬಾಸ್ ವಿಮಾನ ನಿಲ್ದಾಣದ ಹೊರವಲಯದಲ್ಲಿರುವ ಸ್ಥಳದ ಮೇಲೆ ಇಂದು ಬೆಳಗ್ಗೆ ಅಮೆರಿಕ ಸೇನೆ ನಡೆಸಿದ ದಾಳಿ ಬಳಿಕ ಈ ದಾಳಿ ನಡೆದಿದೆ. ಹಾರ್ಮುಜ್ ಜಲಸಂಧಿಗೆ ಬೆದರಿಕೆ ಒಡ್ಡಲು ಯತ್ನಿಸುತ್ತಿದ್ದ ಇರಾನಿನ 4 ಡ್ರೋನ್‌ಗಳನ್ನು ಅಮೆರಿಕ ಹೊಡೆದುರುಳಿಸಿದೆ.



ಅಮೆರಿಕಾದ ರಕ್ಷಣಾ ಇಲಾಖೆ ಮೂಲಗಳ ಪ್ರಕಾರ, ಹಾರ್ಮುಜ್ ಜಲಸಂಧಿ ಸುತ್ತಮುತ್ತ ಅಮೆರಿಕ ಮತ್ತು ಮೈತ್ರಿ ರಾಷ್ಟ್ರಗಳ ಹಡಗುಗಳಿಗೆ ಅಪಾಯ ಉಂಟುಮಾಡುವ ರೀತಿಯಲ್ಲಿ ಇರಾನ್ ಡ್ರೋನ್ ಚಟುವಟಿಕೆಗಳು ಹೆಚ್ಚಾಗಿದ್ದವು.

ಇದನ್ನು ಗಮನಿಸಿದ ಅಮೆರಿಕದ ಸೆಂಟ್ರಲ್ ಕಮಾಂಡ್ ಪಡೆಗಳು ತಕ್ಷಣ ಕಾರ್ಯಾಚರಣೆ ನಡೆಸಿ ನಾಲ್ಕು 'ಒನ್-ವೇ ಅಟ್ಯಾಕ್ ಡ್ರೋನ್'ಗಳನ್ನು ಗುರಿಯಾಗಿಸಿ ಹೊಡೆದುರುಳಿಸಿವೆ. ಇವು ಆತ್ಮಹತ್ಯಾ ದಾಳಿ ನಡೆಸುವ ಉದ್ದೇಶ ಹೊಂದಿದ್ದ ಡ್ರೋನ್‌ಗಳಾಗಿವೆ ಎಂದು ಅಮೆರಿಕದ ಅಧಿಕಾರಿಗಳು ತಿಳಿಸಿದ್ದಾರೆ.

ಇದೇ ವೇಳೆ, ಐದನೇ ಡ್ರೋನ್ ಉಡಾವಣೆಗೆ ಸಿದ್ಧವಾಗಿದ್ದ ನಿಯಂತ್ರಣ ಕೇಂದ್ರವನ್ನು ಗುರುತಿಸಿದ ಅಮೆರಿಕ ಪಡೆಗಳು, ಬಂದರ್ ಅಬ್ಬಾಸ್ ಪ್ರದೇಶದಲ್ಲೇ ನಿಖರ ದಾಳಿ ನಡೆಸಿವೆ. ಈ ದಾಳಿಯಲ್ಲಿ ನಿಯಂತ್ರಣ ವ್ಯವಸ್ಥೆಗೆ ಹಾನಿಯಾಗಿರುವುದಾಗಿ ತಿಳಿದುಬಂದಿದೆ. ಆದರೆ, ದಾಳಿಯಿಂದ ಎಷ್ಟು ಮಂದಿ ಸಾವನ್ನಪ್ಪಿದ್ದಾರೆ ಅಥವಾ ಗಾಯಗೊಂಡಿದ್ದಾರೆ ಎಂಬುದರ ಬಗ್ಗೆ ಇನ್ನೂ ಅಧಿಕೃತ ಮಾಹಿತಿ ಹೊರಬಿದ್ದಿಲ್ಲ.

ಫೆಬ್ರವರಿ 28ರಂದು ಆರಂಭವಾಗಿದ್ದ ಅಮೆರಿಕ, ಇಸ್ರೇಲ್ ಹಾಗೂ ಇರಾನ್ ನಡುವಿನ ಯುದ್ಧಕ್ಕೆ ಬ್ರೇಕ್ ಬೀಳುವ ಯಾವುದೇ ಲಕ್ಷಣಗಳು ಸದ್ಯಕ್ಕೆ ಕಾಣುತ್ತಿಲ್ಲ. ಈ ಯುದ್ಧದ ಪರಿಣಾಮ ಸಾವಿರಾರು ಜನರು ಮೃತಪಟ್ಟಿದ್ದಾರೆ.

ಅದಲ್ಲದೆ, ಮಧ್ಯಪ್ರಾಚ್ಯದ ಬಿಕ್ಕಟ್ಟಿನ ನಡುವೆ ಜಾಗತಿಕವಾಗಿ ತೈಲ ಬೆಲೆ ಏರಿಕೆಯಾಗುತ್ತಿದೆ. ಈ ನಡುವೆ ಅಮೆರಿಕ ಹಾಗೂ ಇರಾನ್ ನಡುವೆ ಒಪ್ಪಂದದ ಮಾತುಕತೆ ನಡೆಯುತ್ತಿದೆ ಎನ್ನಲಾಗಿತ್ತು. ಇದೇ ವೇಳೆ ಪುನಃ ಅಮೆರಿಕ ದಾಳಿ ನಡೆಸಿರುವುದರಿಂದ ಜಾಗತಿಕವಾಗಿ ಮತ್ತಷ್ಟು ಆತಂಕ ಶುರುವಾಗಿದೆ.

ಶಾಂತಿ ಒಪ್ಪಂದದ ಭಾಗವಾಗಿ ಇರಾನ್ ಮತ್ತು ಓಮಾನ್ ಜಂಟಿಯಾಗಿ ಹಾರ್ಮುಜ್ ಜಲಸಂಧಿಯ ಮೂಲಕ ಸಾಗಾಣೆಯನ್ನು ನಿರ್ವಹಿಸುತ್ತವೆ ಎನ್ನುವ ಮಾಹಿತಿ ಇರಾನ್ ಮೂಲಗಳಿಂದ ಹೊರಬಿದ್ದಿದೆ. ಈ ಬೆನ್ನಲ್ಲೇ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಈ ಮಾಹಿತಿಯನ್ನು ತಳ್ಳಿ ಹಾಕಿದ್ದು, ಜಲಮಾರ್ಗ ಮುಕ್ತವಾಗಿರುತ್ತದೆ ಎಂದು ಹೇಳಿದ್ದಾರೆ.

## ರಾಜ್ಯಪಾಲರ ಭೇಟಿಗೆ ಸಮಯವನ್ನೇ ಕೇಳಿಲ್ಲ ಸಿದ್ದರಾಮಯ್ಯ

ಬೆಂಗಳೂರು: ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಕುರಿತ ಊಹಾಪೋಹಗಳು ತೀವ್ರಗೊಂಡಿರುವ ನಡುವೆಯೇ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯಪಾಲರನ್ನು ಭೇಟಿಯಾಗಲು ಸಮಯ ಕೋರಿದ್ದಾರೆ ಎಂಬ ಸುದ್ದಿಗೆ ಲೋಕಭವನ ಸ್ಪಷ್ಟನೆ ನೀಡಿದೆ.

ಮುಖ್ಯಮಂತ್ರಿ ಇದೂವರೆಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರನ್ನು ಭೇಟಿಯಾಗಲು ಯಾವುದೇ ಅಧಿಕೃತ ಮನವಿ ಸಲ್ಲಿಸಿಲ್ಲ ಎಂದು ಲೋಕಭವನ ಅಧಿಕಾರಿಗಳು ಇಂದು ಗುರುವಾರ ತಿಳಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡಿ, ಉಪ ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಅವರಿಗೆ ಮುಖ್ಯಮಂತ್ರಿ ಸ್ಥಾನ ಹಸ್ತಾಂತರಿಸುವ ಸಾಧ್ಯತೆ ಕುರಿತು ರಾಜಕೀಯ ವಲಯದಲ್ಲಿ ಭಾರೀ ಚರ್ಚೆ ನಡೆಯುತ್ತಿರುವ ಸಂದರ್ಭದಲ್ಲೇ ಈ ಸ್ಪಷ್ಟನೆ ಮಹತ್ವ ಪಡೆದುಕೊಂಡಿದೆ.

ಬುಧವಾರ ಮುಖ್ಯಮಂತ್ರಿ ಕಚೇರಿ ಮೂಲಗಳು, ಸಿದ್ದರಾಮಯ್ಯ ಅವರು ಗುರುವಾರ ರಾಜ್ಯಪಾಲರನ್ನು ಭೇಟಿಯಾಗಲು ಸಮಯ ಕೇಳಿದ್ದಾರೆ ಎಂದು ಮಾಹಿತಿ ನೀಡಿದ್ದವು. ಇದರಿಂದ ರಾಜ್ಯ ರಾಜಕೀಯದಲ್ಲಿ ರಾಜೀನಾಮೆ ಊಹಾಪೋಹಗಳು ಮತ್ತಷ್ಟು ಜೋರಾಗಿದ್ದವು.

ಆದರೆ, ಲೋಕಭವನದ ಹಿರಿಯ ಅಧಿಕಾರಿಯೊಬ್ಬರು, "ರಾಜ್ಯಪಾಲರು ಪ್ರಸ್ತುತ ಮಧ್ಯಪ್ರದೇಶದ ಇಂದೋರ್‌ನಲ್ಲಿ ತಮ್ಮ ಸ್ವಗ್ರಾಮದಲ್ಲಿದ್ದಾರೆ. ಮುಖ್ಯಮಂತ್ರಿ ಭೇಟಿಗೆ ಸಮಯ ಕೇಳಿದ್ದಾರೆ ಎಂಬ ಯಾವುದೇ ಅಧಿಕೃತ ಮಾಹಿತಿ ನಮ್ಮ ಬಳಿ ಇಲ್ಲ" ಎಂದು ತಿಳಿಸಿದ್ದಾರೆ.

"ಈ ಕ್ಷಣಕ್ಕೆ ಅಂತಹ ಯಾವುದೇ ಸಂದೇಶ ಅಥವಾ ಮಾಹಿತಿ ಬಂದಿಲ್ಲ. ರಾಜ್ಯಪಾಲರು ಬೆಂಗಳೂರಿಗೆ ಮರಳಿದ ಬಳಿಕವೇ ಮುಖ್ಯಮಂತ್ರಿ ಅವರನ್ನು ಭೇಟಿಯಾಗಬಹುದು" ಎಂದೂ ಅವರು ಸ್ಪಷ್ಟಪಡಿಸಿದರು.

ಮುಖ್ಯಮಂತ್ರಿ ನೇರವಾಗಿ ರಾಜ್ಯಪಾಲರನ್ನು ಭೇಟಿಯಾಗದೇ ಲೋಕಭವನ ಕಾರ್ಯದರ್ಶಿಗೆ ರಾಜೀನಾಮೆ ಸಲ್ಲಿಸಬಹುದೇ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅಧಿಕಾರಿಗಳು, "ಅವರು ಬಯಸಿದರೆ ಕಾರ್ಯದರ್ಶಿಗೆ ರಾಜೀನಾಮೆ ಪತ್ರ ಸಲ್ಲಿಸಬಹುದು" ಎಂದು ಹೇಳಿದ್ದಾರೆ.

ಅದೇ ವೇಳೆ, "ಆ ರಾಜೀನಾಮೆ ರಾಜ್ಯಪಾಲರಿಗೆ ನೇರವಾಗಿ ಸಲ್ಲಿಸಿದಂತೆಯೇ ಮಾನ್ಯವಾಗುತ್ತದೆ. ಆದರೆ ರಾಜ್ಯಪಾಲರು ಮರಳಿದ ಬಳಿಕ ಮತ್ತೊಮ್ಮೆ ಮುಖ್ಯಮಂತ್ರಿ ಅವರನ್ನು ಖುದ್ದಾಗಿ ಭೇಟಿ ಮಾಡಿ ರಾಜೀನಾಮೆ ಸಲ್ಲಿಸುವಂತೆ ಕೇಳುವ ಸಾಧ್ಯತೆಯೂ ಇದೆ" ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಸಿದ್ದು ರಾಜೀನಾಮೆ

**ಇದೇ ವೇಳೆ ದಿವಂಗತ ನಟ ಡಾ.ರಾಜ್ ಕುಮಾರ್ ಅವರನ್ನು ನೆನೆಸಿಕೊಂಡ ಸಿದ್ದರಾಮಯ್ಯ, ರಾಜ್ ಕುಮಾರ್ ಅವರು ಅಭಿಮಾನಿಗಳನ್ನೇ ದೇವರು ಎಂದು ಕರದೆರು. ನಾನು ರಾಜಕಾರಣಿ ನಮಗೆ ಮತದಾರರೇ ನಮ್ಮ ಅಭಿಮಾನಿ ದೇವರುಗಳು. ಕನ್ನಡನಾಡಿನ 7 ಕೋಟಿ ಜನರ ಸೇವೆ ಮಾಡುವ ಅವಕಾಶ ಸಿಕ್ಕಿತ್ತು. 2 ಬಾರಿ ಮುಖ್ಯಮಂತ್ರಿಯಾಗಿದ್ದೆ, 2 ಬಾರಿ ವಿರೋಧ ಪಕ್ಷದ ನಾಯಕನಾಗಿದ್ದೆ. ನನಗೆ ಈ ಅವಕಾಶ ಕೊಟ್ಟ ಸೋನಿಯಾಗಾಂಧಿ, ರಾಹುಲ್ ಗಾಂಧಿ ಮತ್ತು ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಈ ಸಂದರ್ಭದಲ್ಲಿ ಅಪಾರ ಧನ್ಯವಾದ ತಿಳಿಸುತ್ತೇನೆ.**

ಬೆಂಗಳೂರು: ಮುಖ್ಯಮಂತ್ರಿ ಸ್ಥಾನಕ್ಕೆ ತಾವು ರಾಜೀನಾಮೆ ನೀಡಿರುವುದಾಗಿ ಸಿದ್ದರಾಮಯ್ಯ ಅವರು ಗುರುವಾರ ಅಧಿಕೃತವಾಗಿ ಪ್ರಕಟಿಸಿದ್ದಾರೆ.

ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತ ನಾಡಿದ ಸಿದ್ದರಾಮಯ್ಯ, ತಮ್ಮ ಮುಖ್ಯ ಮಂತ್ರಿ ಸ್ಥಾನಕ್ಕೆ ರಾಜಿನಾಮೆ ನೀಡಿದ್ದಾಗಿ ಹೇಳಿದರು. ಆದರೆ ರಾಜ್ಯಪಾಲರು ಬೆಂಗಳೂರಿನಲ್ಲಿ ಇಲ್ಲದ ಕಾರಣ, ರಾಜೀನಾಮೆ ಪತ್ರವನ್ನು ಅವರ ಕಚೇರಿಯ ಕಾರ್ಯ ದರ್ಶಿಗೆ ಹಸ್ತಾಂತರಿಸಲಾಗಿದೆ ಎಂದು ತಿಳಿಸಿದರು.

ರಾಜೀನಾಮೆ ನೀಡಿದ ನಂತರ ಗೃಹ ಕಚೇರಿ ಕೃಷ್ಣಾದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತ ನಾಡಿದ ಸಿದ್ದರಾಮಯ್ಯ, ತಾವು ಯಾವಾಗಲೂ ಹೈಕಮಾಂಡ್ ತೀರ್ಮಾನಕ್ಕೆ ಬದ್ಧರಾಗಿದ್ದು, ನಾಯಕರು ಸೂಚಿಸಿದಂತೆ ಗುರುವಾರವೇ ರಾಜೀನಾಮೆ ಸಲ್ಲಿಸಿರುವುದಾಗಿ ಸ್ಪಷ್ಟಪಡಿಸಿದರು.

'ಹೈಕಮಾಂಡ್ ಯಾವಾಗ ಸೂಚಿಸುತ್ತಾರೋ ಆಗ ರಾಜಿನಾಮೆ ನೀಡುತ್ತೇನೆ ಎಂದು ಹೇಳಿದ್ದೆ. ಅದರ ಪ್ರಕಾರ ಮೊನ್ನೆ ಹೈಕಮಾಂಡ್ ರಾಜಿ ನಾಮೆ ನೀಡಿ ಎಂದು ಹೇಳಿದರು. ಹೀಗಾಗಿ ನಾನು ನಾಡಿದ್ದು ರಾಜಿನಾಮೆ ನೀಡುತ್ತೇನೆ ಎಂದು ಹೇಳಿದ್ದೆ. ಇಂದು ನನ್ನ ರಾಜಿನಾಮೆ ನೀಡಿದ್ದೇನೆ.



ರಾಜ್ಯಪಾಲರು ನನ್ನ ರಾಜಿನಾಮೆ ಪತ್ರವನ್ನು ಅವರು ಆಗಮಿಸಿದ ಬಳಿಕ ಅಂಗೀಕಾರ ಮಾಡುತ್ತಾರೆ ಎಂಬ ಸಂಪೂರ್ಣ ವಿಶ್ವಾಸವಿದೆ. ಅಲ್ಲದೆ ಸಂವಿಧಾನದ ಪ್ರಕಾರ ಮಾಡಲೇಬೇಕು ಕೂಡ.

ಒಂದು ಸಾರಿ ಮುಖ್ಯಮಂತ್ರಿಗಳು ರಾಜಿನಾಮೆ ಕೊಟ್ಟ ಮೇಲೆ ಅಂಗೀಕಾರ ಮಾಡಿ, ಮುಂದಿನ ಮುಖ್ಯಮಂತ್ರಿಗಳಿಗೆ ಅವಕಾಶ ಮಾಡಿಕೊಡುವುದು ಅವರ ಕರ್ತವ್ಯ ಎಂದರು. ಇದೇ ವೇಳೆ ನಮ್ಮ ಪಕ್ಷ 135 ಮತ್ತು 1 ಸ್ಥಾನಗಳನ್ನು ನಾವು ಪಡೆದಿದ್ದೇವೆ. ಜೊತೆಯಲ್ಲಿ ಇಬ್ಬರು ಸ್ವತಂತ್ರ್ಯ ಅಭ್ಯರ್ಥಿಗಳೂ ಕೂಡ ಬೆಂಬಲ ಘೋಷಿಸಿದ್ದಾರೆ. ಹೀಗಾಗಿ ನಾವು ಸಂಪೂರ್ಣ ಬಹುಮತದಲ್ಲಿದ್ದೇವೆ. ಹೀಗಾಗಿ ಮುಂದಿನ ಮುಖ್ಯಮಂತ್ರಿಗೆ ಅವಕಾಶ ನೀಡಬೇಕು. ಸಂವಿಧಾನ ಬದ್ಧವಾಗಿ ನಡೆದುಕೊಳ್ಳಬೇಕು ಎಂದು ಮನವಿ ಮಾಡುತ್ತೇನೆ ಎಂದರು.

ಇದೇ ವೇಳೆ ದಿವಂಗತ ನಟ ಡಾ.ರಾಜ್ ಕುಮಾರ್ ಅವರನ್ನು ನೆನೆಸಿಕೊಂಡ ಸಿದ್ದರಾಮಯ್ಯ, ರಾಜ್ ಕುಮಾರ್ ಅವರು ಅಭಿಮಾನಿಗಳನ್ನೇ ದೇವರು ಎಂದು ಕರದೆರು. ನಾನು ರಾಜಕಾರಣಿ ನಮಗೆ ಮತದಾರರೇ ನಮ್ಮ ಅಭಿಮಾನಿ ದೇವರುಗಳು.

ಕನ್ನಡನಾಡಿನ 7 ಕೋಟಿ ಜನರ ಸೇವೆ ಮಾಡುವ ಅವಕಾಶ ಸಿಕ್ಕಿತ್ತು. 2 ಬಾರಿ ಮುಖ್ಯಮಂತ್ರಿಯಾಗಿದ್ದೆ, 2 ಬಾರಿ ವಿರೋಧ ಪಕ್ಷದ ನಾಯಕನಾಗಿದ್ದೆ. ನನಗೆ ಈ ಅವಕಾಶ ಕೊಟ್ಟ ಸೋನಿಯಾಗಾಂಧಿ, ರಾಹುಲ್ ಗಾಂಧಿ ಮತ್ತು ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಈ ಸಂದರ್ಭದಲ್ಲಿ ಅಪಾರ ಧನ್ಯವಾದ ತಿಳಿಸುತ್ತೇನೆ.

ನಾನು ಕಾಂಗ್ರೆಸ್ ಸೇರಿದ್ದು 2006ರಲ್ಲಿ. ಅಲ್ಲಿಂದ ಕಾಂಗ್ರೆಸ್ ಕಾರ್ಯಕರ್ತರಿಗೆ ಶಾಸಕರಿಗೆ ಮತ್ತು ಸಂಸದರಿಗೆ ಈ ಸಂದರ್ಭದಲ್ಲಿ ಧನ್ಯವಾದ ಹೇಳುತ್ತೇನೆ. 2013ರಿಂದ 2018ರವೆರಗೆ, 2023ರಿಂದ ಇಲ್ಲಿಯವರೆಗೂ ಸಿಎಂ ಆಗಿದ್ದೇ. ಈ ಸಂದರ್ಭದಲ್ಲಿ ನನ್ ಜೊತೆ ಕೆಲಸ ಮಾಡಿದ ನನ್ನ ಸಹೋದ್ಯೋಗಿಗಳಿಗೆ ಧನ್ಯವಾದ ಅರ್ಪಿಸುತ್ತೇನೆ. ನಾನು ಹಳ್ಳಿಗಾಡಿನಿಂದ ಪಂದವನು, ನಮ್ಮ ಕುಟುಂಬದವರು ಯಾರು ರಾಜಕೀಯದಲ್ಲಿರಲಿಲ್ಲ. ಆದಾಗ್ಯೂ ರಾಜಕೀಯದಲ್ಲಿ ಹಲವು ಉನ್ನತ ಮಟ್ಟಕ್ಕೇರಿದ್ದೆ ಎಂದರು.

ಅಂತೆಯೇ ರಾಜ್ಯಪಾಲರು ರಾತ್ರಿ ಮರಳಿದ ಬಳಿಕ ಸಂವಿಧಾನದ ನಿಯಮಾವಳಿಗಳ ಪ್ರಕಾರ ನನ್ನ ರಾಜೀನಾಮೆಯನ್ನು ಅಂಗೀಕರಿಸಲಿದ್ದಾರೆ ಎಂಬ ಸಂಪೂರ್ಣ ವಿಶ್ವಾಸವಿದೆ ಮತ್ತು ಅದು ಅವರ ಜವಾಬ್ದಾರಿಯಾಗಿದೆ.

## ಸಿದ್ದರಾಮಯ್ಯ ಪ್ರಯಾಣಿಸುತ್ತಿದ್ದ ವಿಮಾನ ಬೇರೆಡೆ ಲ್ಯಾಂಡಿಂಗ್

ಬೆಂಗಳೂರು: ದೆಹಲಿಗೆ ಪ್ರಯಾಣಿಸುತ್ತಿದ್ದ ಸಿದ್ದರಾಮಯ್ಯ ಇದ್ದ ವಿಮಾನ ಜೈಪುರದಲ್ಲಿ ತುರ್ತು ಲ್ಯಾಂಡ್ ಆಗಿರುವ ಘಟನೆ ನಡೆದಿದೆ. ಮಧ್ಯಾಹ್ನ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿ ಸುದ್ದಿಗೋಷ್ಠಿ ಬಳಿಕ ಸಂಜೆ ಬೆಂಗಳೂರಿನ ಎಚ್‌ಎಎಲ್ ಏರ್‌ಪೋರ್ಟ್‌ನಿಂದ ವಿಶೇಷ ವಿಮಾನದ ಮೂಲಕ ದೆಹಲಿಗೆ ತೆರಳುತ್ತಿದ್ದರು. ಆದ್ರೆ, ಮಾರ್ಗಮಧ್ಯೆ ಹವಾಮಾನ ವೈಪರೀತ್ಯ ಹಿನ್ನೆಲೆಯಲ್ಲಿ ವಿಶೇಷ ವಿಮಾನ, ದೆಹಲಿ ಬದಲು ಜೈಪುರದಲ್ಲಿ ಲ್ಯಾಂಡ್ ಆಗಿದೆ. ಇದರಿಂದ ಕೆಲವೊತ್ತು ಆತಂಕಕ್ಕೆ ಕಾರಣವಾಯ್ತು.

ಸಿಎಂ ಸಿದ್ದರಾಮಯ್ಯ ಜೊತೆ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ, ಸಚಿವರಾದ ಕೆ.ಜೆ.ಜಾರ್ಜ್, ಭೈರತಿ ಸುರೇಶ್, ಶಾಸಕ ಎ.ಎಸ್.ಪೊನ್ನಣ್ಣ, ಎಐಸಿಸಿ ಕಾರ್ಯದರ್ಶಿ ಅಭಿಷೇಕ್ ದತ್, ಯತೀಂದ್ರ ವಿಮಾನದಲ್ಲಿದ್ದರು. ಸದ್ಯ ಯಾವುದೇ ಅವಘಡ ಸಂಭವಿಸಿಲ್ಲ. ವಿಮಾನದಲ್ಲಿದ್ದವರು ಎಲ್ಲರೂ ಸುರಕ್ಷಿತವಾಗಿದ್ದಾರೆ.

ಸಿದ್ದರಾಮಯ್ಯ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ ಬಳಿಕ ಗೃಹ ಕಚೇರಿ ಕೃಷ್ಣದಲ್ಲಿ ಸುದ್ದಿಗೋಷ್ಠಿ ನಡೆಸಿದರು. ಬಳಿಕ ಹೈಕಮಾಂಡ್ ಸೂಚನೆಯಂತೆ ಸಿದ್ದರಾಮಯ್ಯ ಇಂದು (ಮೇ 28) ಸಂಜೆ ತಮ್ಮ ಆಪ್ತರ ಜೊತೆ ಬೆಂಗಳೂರಿನ ಎಚ್‌ಎಎಲ್ ನಿಲ್ದಾಣದಿಂದ ವಿಶೇಷ ವಿಮಾನದ ಮೂಲಕ ದೆಹಲಿಯತ್ತ ಹೊರಟರು. ಆದ್ರೆ, ಹವಾಮಾನ ವೈಪರಿತ್ಯ ಹಿನ್ನೆಲೆಯಲ್ಲಿ ಪೈಲೆಟ್, ವಿಮಾನವನ್ನು ಜೈಪುರ ವಿಮಾನ ನಿಲ್ದಾಣದಲ್ಲಿ ಲ್ಯಾಂಡ್ ಮಾಡಿದ್ದಾನೆ ಎಂದು ತಿಳಿದು ಬಂದಿದೆ.

## ಮಂತ್ರಿಗಳ ಜೊತೆ ಸಹಕಾರ ಕೇಳಿದ ಡಿಕೆಶಿ

ಬೆಂಗಳೂರು: ಬ್ರೇಕ್‌ಫಾಸ್ಟ್ ಸಭೆಯಲ್ಲಿ ಡಿಸಿಎಂ ಡಿಕೆ ಶಿವಕುಮಾರ್ ಮಂತ್ರಿಗಳ ಜೊತೆ ಸಹಕಾರವನ್ನು ಕೇಳಿದ್ದಾರೆ.

ಮುಖ್ಯಮಂತ್ರಿ ಹುದ್ದೆಗೆ ಇಂದು ರಾಜೀನಾಮೆ ನೀಡುವ ಹಿನ್ನೆಲೆಯಲ್ಲಿ ಸಿದ್ದರಾಮಯ್ಯನವರು ಇಂದು ಬೆಳಗ್ಗೆ ಕಾವೇರಿ ನಿವಾಸದಲ್ಲಿ ಮಂತ್ರಿಗಳ ಜೊತೆ ಉಪಹಾರ ಸಭೆಯನ್ನು ಆಯೋಜಿಸಿದ್ದರು.

ಈ ಸಭೆಯ ಆರಂಭದಲ್ಲಿ ಸಿದ್ದರಾಮಯ್ಯನವರು ಮಂತ್ರಿಗಳನ್ನು ಉದ್ದೇಶಿಸಿ ಮಾತನಾಡಿದರು. ಸಿಎಂ ಬಳಿಕ ಮಾತನಾಡಿದ ಡಿಕೆಶಿ, ನಾನು ಅಧ್ಯಕ್ಷನಾಗಿ ಇಲ್ಲಿವರೆಗೆ ಬಂದಿದ್ದೇನೆ. ಇದುವರೆಗೆ ನೀವೆಲ್ಲರೂ ಉತ್ತಮವಾಗಿ ಸಹಕರಿಸಿದ್ದೀರಿ. ಮುಂದೆಯೂ ಇದೇ ರೀತಿಯ ಸಹಕಾರ ನೀಡಬೇಕು ಎಂದು ಡಿಕೆಶಿ ಮನವಿ ಮಾಡಿಕೊಂಡರು.

ಬೇರೆ ಯಾವ ವಿಚಾರವೂ ಪ್ರಸ್ತಾಪಿಸದ ಡಿಕೆಶಿ ಎಲ್ಲರ ಸಹಕಾರ ಮುಂದೆಯು ಹೀಗೆ ಇರಲಿ ಎಂದು ವಿನಂತಿಸಿಕೊಂಡರು. ಈ ವೇಳೆ ಡಿಕೆಶಿ ಸಿದ್ದರಾಮಯ್ಯನವರ ಆಡಳಿತವನ್ನು ಕೊಂಡಾಡಿದರು ಎಂಬ ವಿಚಾರ ತಿಳಿದುಬಂದಿದೆ.


ಡಿಕೆ ಶಿವಕುಮಾರ್ ಅವರು 2020ರ ಮಾರ್ಚ್ 11ರಂದು ಅಧಿಕೃತವಾಗಿ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾಗಿ ನೇಮಕಗೊಂಡರು. ಡಿಕೆಶಿ, ಸಿದ್ದರಾಮಯ್ಯ ಜೋಡೆತ್ತಿನಂತೆ ಕೆಲಸ ಮಾಡಿದ್ದರಿಂದ ಕಾಂಗ್ರೆಸ್ ಪಕ್ಷವು 2023ರ ಕರ್ನಾಟಕ ವಿಧಾನಸಭಾ ಚುನಾವಣೆಯಲ್ಲಿ 136 ಸ್ಥಾನಗಳನ್ನು ಗೆದ್ದು ಭರ್ಜರಿ ಬಹುಮತದೊಂದಿಗೆ ಅಧಿಕಾರಕ್ಕೆ ಬಂದಿದೆ.

# 'ಖುರ್ಚಿಗೆ ಕಂಟಕ ಬಂದಾಗ ಸಿದ್ದರಾಮಯ್ಯ ಜಾತಿ, ಜನಗಣತಿ ಅಸ್ತ್ರ ಬಳಕೆ'

ಬೆಂಗಳೂರು: ಸಂಕಟ ಬಂದಾಗ ವೆಂಕಟರಮಣ ಎನ್ನುವಂತೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ತಮ್ಮ ಕುರ್ಚಿಗೆ ಕಂಟಕ ಬಂದಾಗಲೆಲ್ಲಾ ಜಾತಿ ಜನಗಣತಿ ವರದಿ ಎಂಬ ಮಂಕುಬೂದಿ ಎರಚಿ ಜನರ ಅನುಕಂಪ ಗಳಿಸುವ ಕುತಂತ್ರ ಈಗ ಯಾರಿಗೂ ಗುಟ್ಟಾಗಿ ಉಳಿದಿಲ್ಲ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ವಾಗ್ದಾಳಿ ನಡೆಸಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ನಿರ್ಗಮಿತ ಸಿ.ಎಂ.ಸಿದ್ದರಾಮಯ್ಯ ವಿರುದ್ಧ ಪೋಸ್ಟ್ ಮಾಡಿರುವ ಅವರು, ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕಾದ ಪರಿಸ್ಥಿತಿ ಎದುರಾದ ಕ್ಷಣದಲ್ಲಿ, ಅಧಿಕಾರದ ಕೊನೆಯ ದಿನಗಳಲ್ಲಿ ತರಾತುರಿಯಲ್ಲಿ ಜಾತಿ ಜನಗಣತಿ ವರದಿ ಸ್ವೀಕರಿಸುವುದು, ಅದರ ಮಾಹಿತಿಯನ್ನು ಮಾಧ್ಯಮಗಳಿಗೆ ಸೋರಿಕೆ ಮಾಡುವುದು ಇದನ್ನು ಆಷಾಢಭೂತಿತನ, ರಾಜಕೀಯ ಬೂಟಾಟಿಕೆ ಅನ್ನದೇ ಇನ್ನೇನು ಹೇಳಲು ಸಾಧ್ಯ?ಎಂದು ಪ್ರಶ್ನಿಸಿದ್ದಾರೆ.

ನಿಮ ಆಡಳಿತ ವಿಫಲವಾಗಿದೆ. ಕರ್ನಾಟಕದಲ್ಲಿ ಕಾಂಗ್ರೆಸ್ ಪರವಾದ ವಾತಾವರಣ ಇಲ್ಲ. ಸರ್ಕಾರದ ವಿರುದ್ಧ ಸ್ಪಷ್ಟ ಆಡಳಿತ ವಿರೋಧಿ ಅಲೆ ಇದೆ. ಹೈಕಮಾಂಡ್ ಬಳಿ ಛೀಮಾರಿ ಹಾಕಿಸಿಕೊಂಡು ಒಲ್ಲದ ಮನಸ್ಸಿನಿಂದ ರಾಜೀನಾಮೆ ಕಡೆಗೆ ಸಾಗುತ್ತಿರುವ ಸಿದ್ದರಾಮಯ್ಯನವರು, ಕನಿಷ್ಠ ಈಗಲಾದರೂ ತಮ ತುಷ್ಟೀಕರಣ ರಾಜಕಾರಣ ಮತ್ತು ಢೋಂಗಿ ಸಮಾಜವಾದದ ಬಗ್ಗೆ ಆತಾವಲೋಕನ ಮಾಡಿಕೊಳ್ಳುತ್ತಾರೆ, ಪಶ್ಚಾತಾಪ ಪಡುತ್ತಾರೆ ಎಂದು ಭಾವಿಸಿದ್ದೆ. ಆದರೆ ಕುರ್ಚಿ ಬಿಡುವ ಕೊನೆಯ ಕ್ಷಣದಲ್ಲೂ ಕೂಡ ಓಲೈಕೆ ರಾಜಕಾರಣ ಮುಂದುವರಿಸಿ ತಮ ಭಂಡತನವನ್ನು ಮತ್ತೊಮೆ ಪ್ರದರ್ಶಿಸಿದ್ದಾರೆ ಎಂದು ಕಿಡಿಕಾರಿದ್ದಾರೆ. ಮೊದಲನೆಯದಾಗಿ, ಇಷ್ಟು ದೊಡ್ಡ ಪ್ರಮಾಣದ ದತ್ತಾಂಶವನ್ನು ಕೇವಲ ಕೆಲ ಗಂಟೆಗಳಲ್ಲಿ ಸಂಸ್ಕರಿಸಿ ಅಂತಿಮ ವರದಿ ರೂಪಿಸುವುದು ಅಸಾಧ್ಯ. ಇದಕ್ಕಾಗಿಯೇ ದೆಹಲಿ ಭೇಟಿಯಲ್ಲಿ ಹೈಕಮಾಂಡ್ ಮುಂದೆ ಸ್ವತಃ ಮುಖ್ಯಮಂತ್ರಿಗಳೇ 15 ದಿನಗಳ ಕಾಲಾವಕಾಶ ಕೇಳಿದ್ದಾರೆ ಎಂಬ ಸುದ್ದಿಗಳಿದ್ದವು. ಹಾಗಿದ್ದಾಗ ಕೇವಲ 24 ಗಂಟೆಗಳಲ್ಲಿ ವರದಿ ಸ್ವೀಕಾರ ಸಾಧ್ಯವೇ ? ಎಂದು ಆಶ್ಚರ್ಯ ವ್ಯಕ್ತಪಡಿಸಿದ್ದಾರೆ.



ಎರಡನೆಯದಾಗಿ, ಕೇಂದ್ರ ಸರ್ಕಾರ ಈಗಾಗಲೇ ದಶವಾರ್ಷಿಕ ಜನಗಣತಿಯಲ್ಲಿ ದೇಶವ್ಯಾಪಿ ಜಾತಿ ಜನಗಣತಿ ನಡೆಸುವುದಾಗಿ ಘೋಷಿಸಿದ್ದು, ಅದರ ಪ್ರಕ್ರಿಯೆಯೂ ಆರಂಭವಾಗಿದೆ. ಆದರೂ ತಮ ಸ್ವಾರ್ಥ ರಾಜಕಾರಣಕ್ಕಾಗಿ ಕನ್ನಡಿಗರ ತೆರಿಗೆ ಹಣವನ್ನು ಮಾಡಿ, ತರಾತುರಿಯಲ್ಲಿ ವರದಿ ಸ್ವೀಕರಿಸಿ ಅದನ್ನು ಸೋರಿಕೆ ಮಾಡುವ ಮೂಲಕ ಸಮಾಜದಲ್ಲಿ ಜಾತಿಜಾತಿಗಳ ನಡುವೆ ಬೆಂಕಿ ಹಚ್ಚುವ ಅಪಾಯಕಾರಿ ರಾಜಕಾರಣಕ್ಕೆ ಕೈ ಹಾಕಿದ್ದಾರೆ ಎಂದು ವಾಗ್ದಾಳಿ ನಡೆಸಿದ್ದಾರೆ. ರಾಜೀನಾಮೆ ಕೊಡುವ ಹೊಸ್ತಿಲಲ್ಲೂ ತಮ ಒಣ ಪ್ರತಿಷ್ಠೆ ಮತ್ತು ಸ್ವಹಿತಾಸಕ್ತಿ ಬಿಡದ ಸಿದ್ದರಾಮಯ್ಯನವರ ಸಣ್ಣತನ ಹಾಗೂ ಕೀಳು ಮಟ್ಟದ ರಾಜಕಾರಣ ಕರ್ನಾಟಕದ ರಾಜಕೀಯ ಇತಿಹಾಸದಲ್ಲಿ ಕಪ್ಪುಚುಕ್ಕೆಯಾಗಿ ಉಳಿಯುವುದರಲ್ಲಿ ಯಾವುದೇ ಸಂದೇಹವಿಲ್ಲ ಎಂದು ಅಶೋಕ್ ಎಚ್ಚರಿಸಿದ್ದಾರೆ.

## ಮತ್ತೆ ದಿಲ್ಲಿಗೆ ಹಾರಿದ ಸಿದ್ದು-ಡಿಕೆಶಿ

ಬೆಂಗಳೂರು: ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ ಕೆಲವೇ ಗಂಟೆಗಳ ನಂತರ, ಸಿದ್ದರಾಮಯ್ಯ ಮತ್ತು ಅವರ ಸಂಭಾವ್ಯ ಉತ್ತರಾಧಿಕಾರಿ ಎಂದು ವ್ಯಾಪಕವಾಗಿ ಪರಿಗಣಿಸಲ್ಪಟ್ಟ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಗುರುವಾರ ನವದೆಹಲಿಗೆ ಪ್ರತ್ಯೇಕವಾಗಿ ತೆರಳಿದರು.

ರಾಷ್ಟ್ರ ರಾಜಧಾನಿಯಲ್ಲಿ, ರಾಜ್ಯದ ಹೊಸ ಸಚಿವ ಸಂಪುಟ ರಚನೆ ವಿಧಾನಗಳ ಕುರಿತು ಚರ್ಚಿಸಲು ಇಬ್ಬರು ನಾಯಕರು ಕಾಂಗ್ರೆಸ್ ಹೈಕಮಾಂಡ್ ನ್ನು ಭೇಟಿ ಮಾಡುವ ನಿರೀಕ್ಷೆಯಿದೆ.

ಪಕ್ಷದ ಮೂಲಗಳ ಪ್ರಕಾರ, ಹೊಸ ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕನ ಆಯ್ಕೆ, ಸಚಿವಾಲಯದ ಸಂಯೋಜನೆ ಮತ್ತು ಶಿವಕುಮಾರ್ ಅವರು ಪ್ರಸ್ತುತ ಹೊಂದಿರುವ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಸ್ಥಾನ ಸೇರಿದಂತೆ ಇತರ ಸಾಂಸ್ಥಿಕ ವಿಷಯಗಳಿಗೆ ಸಂಬಂಧಿಸಿದ ಚರ್ಚೆಗಳು ದೆಹಲಿ ಭೇಟಿಯ ಸಮಯದಲ್ಲಿ ನಡೆಯುವ ಸಾಧ್ಯತೆಯಿದೆ.

ಈ ವಿಷಯಗಳ ಬಗ್ಗೆ ಒಂದು ಅಥವಾ ಎರಡು ದಿನಗಳಲ್ಲಿ ಸ್ಪಷ್ಟತೆ ಹೊರಬರಬಹುದು. ಕಾಂಗ್ರೆಸ್ ಶಾಸಕಾಂಗ ಪಕ್ಷ ತನ್ನ ನಾಯಕನನ್ನು ಆಯ್ಕೆ ಮಾಡುತ್ತದೆ, ನಂತರ ಮುಖ್ಯಮಂತ್ರಿಯ ಪದಗ್ರಹಣ ಕಾರ್ಯಕ್ರಮ ನಡೆಯಲಿದೆ.

ಸಿದ್ದರಾಮಯ್ಯ ಗುರುವಾರ ಮಧ್ಯಾಹ್ನ ಲೋಕಭವನದಲ್ಲಿ ರಾಜ್ಯಪಾಲರ ವಿಶೇಷ ಕಾರ್ಯದರ್ಶಿಗೆ ರಾಜೀನಾಮೆ ಸಲ್ಲಿಸಿದರು. ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅನುಪಸ್ಥಿತಿಯಲ್ಲಿ ವಿಶೇಷ ಕಾರ್ಯದರ್ಶಿ ಪ್ರಭುಶಂಕರ್ ರಾಜೀನಾಮೆಯನ್ನು ಸ್ವೀಕರಿಸಿದರು. ಆದಾಗ್ಯೂ, ನಂತರ ಪತ್ರಿಕಾಗೋಷ್ಠಿಯಲ್ಲಿ ಮುಂದಿನ ಮುಖ್ಯಮಂತ್ರಿಯ ಬಗ್ಗೆ ಕೇಳಿದಾಗ, ಸಿದ್ದರಾಮಯ್ಯ ಅವರು, "ಶಾಸಕಾಂಗ ಪಕ್ಷ ಮತ್ತು ಹೈಕಮಾಂಡ್ ನಿರ್ಧರಿಸುವ ಯಾರೇ ಆಗಲಿ ರಾಜ್ಯದ ಮುಖ್ಯಮಂತ್ರಿಯಾಗುತ್ತಾರೆ" ಎಂದು ಹೇಳಿದರು.

ಶಿವಕುಮಾರ್ ಮುಖ್ಯಮಂತ್ರಿಯಾಗುವ ಬಗ್ಗೆ ಕೇಳಿದಾಗ, ಅವರ ಸಹೋದರ ಮತ್ತು ಮಾಜಿ ಕಾಂಗ್ರೆಸ್ ಸಂಸದ ಡಿ.ಕೆ. ಸುರೇಶ್, "ಪಕ್ಷದ ನಿರ್ಧಾರಕ್ಕಾಗಿ ಕಾಯೋಣ" ಎಂದಷ್ಟೇ ಹೇಳಿದ್ದಾರೆ. ರಾಜ್ಯದಲ್ಲಿ ನಾಯಕತ್ವ ಬದಲಾವಣೆಗೆ ದಾರಿ ಮಾಡಿಕೊಡುವಂತೆ ಮತ್ತು ರಾಜ್ಯಸಭಾ ಸ್ಥಾನದ ಜೊತೆಗೆ ಪಕ್ಷದಲ್ಲಿ ರಾಷ್ಟ್ರಮಟ್ಟದಲ್ಲಿ ಪಾತ್ರವೊಂದನ್ನು ನೀಡುವ ಪ್ರಸ್ತಾಪವನ್ನು ಕಾಂಗ್ರೆಸ್ ಹೈಕಮಾಂಡ್ ಸಿದ್ದರಾಮಯ್ಯ ಅವರನ್ನು ಕೇಳಿದ ನಂತರ ರಾಜೀನಾಮೆಗೆ ಕಾರಣವಾದ ಬೆಳವಣಿಗೆಗಳು ನಡೆದಿವೆ.

ಭಾರತ ಸಾರಥಿ
29/05/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಕೋವಿಡ್ ಬಳಿಕ ಭಾರತೀಯ ಸಣ್ಣ ಉದ್ಯಮಗಳಿಂದ ಭರ್ಜರಿ ಬೆಳವಣಿಗೆ

ನವದೆಹಲಿ

ಕೋವಿಡ್ ನಂತರದ ಆರ್ಥಿಕ ಪುನಶ್ಚೇತನದಲ್ಲಿ ಭಾರತೀಯ ಸಣ್ಣ ಉದ್ಯಮಗಳು ಗಮನಾರ್ಹ ಸಾಧನೆ ಮಾಡಿವೆ ಎಂಬ ಅಂಶ ಸಿಪಿಎ ಆಸ್ಟ್ರೇಲಿಯಾದ ಏಷ್ಯಾ–ಪೆಸಿಫಿಕ್ ಸಣ್ಣ ಉದ್ಯಮಗಳ ಸಮೀಕ್ಷೆ 2025–26ರಲ್ಲಿ ಬಹಿರಂಗವಾಗಿದೆ. 2019ರ ಬಳಿಕ 2025ರಲ್ಲಿ ಭಾರತೀಯ ಸಣ್ಣ ಉದ್ಯಮಗಳು ಅತ್ಯುತ್ತಮ ಸಾಧನೆ ದಾಖಲಿಸಿದ್ದು, 2026ರ ಬೆಳವಣಿಗೆಯ ಮೇಲೂ ಉದ್ಯಮಿಗಳು ಭಾರೀ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಸಮೀಕ್ಷೆಯ ಪ್ರಕಾರ ಕಳೆದ ವರ್ಷ ಭಾರತದಲ್ಲಿ ಶೇಕಡಾ 80ರಷ್ಟು ಸಣ್ಣ ಉದ್ಯಮಗಳು ಬೆಳವಣಿಗೆ ಕಂಡಿವೆ. ಇದು ಏಷ್ಯಾ–ಪೆಸಿಫಿಕ್ ವಲಯದ ಸರಾಸರಿ ಶೇಕಡಾ 63ಕ್ಕಿಂತ ಬಹಳ ಹೆಚ್ಚಾಗಿದೆ. ಇದರೊಂದಿಗೆ ಭಾರತವು ಏಷ್ಯಾ–ಪೆಸಿಫಿಕ್ ಪ್ರದೇಶದಲ್ಲಿನ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಸಣ್ಣ ಉದ್ಯಮ ಮಾರುಕಟ್ಟೆಗಳಲ್ಲಿ ಒಂದಾಗಿ ಹೊರಹೊಮ್ಮಿದೆ.

ಮುಂದಿನ ವರ್ಷಗಳ ಬಗ್ಗೆ ಕೂಡ ಭಾರತೀಯ ಉದ್ಯಮಿಗಳಲ್ಲಿ ಹೆಚ್ಚಿನ ಆತ್ಮವಿಶ್ವಾಸ ಕಂಡುಬಂದಿದೆ. ಶೇಕಡಾ 87ರಷ್ಟು ಉದ್ಯಮಿಗಳು 2026ರಲ್ಲಿ ತಮ್ಮ ವ್ಯವಹಾರ ಮತ್ತಷ್ಟು ಬೆಳೆಯಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಅದೇ ವೇಳೆ ಶೇಕಡಾ 84ರಷ್ಟು ಮಂದಿ ದೇಶೀಯ ಆರ್ಥಿಕತೆಯಲ್ಲೂ ಉತ್ತಮ ಬೆಳವಣಿಗೆ ಆಗಲಿದೆ ಎಂದು ನಿರೀಕ್ಷಿಸಿದ್ದಾರೆ.

ಗ್ರಾಹಕರ ಅನುಭವ ಸುಧಾರಣೆ, ಉತ್ತಮ ನಿರ್ವಹಣಾ ಕೌಶಲ್ಯಗಳು ಹಾಗೂ ತಂತ್ರಜ್ಞಾನ ಅಳವಡಿಕೆ 2025ರಲ್ಲಿ ವ್ಯವಹಾರಗಳ ಬೆಳವಣಿಗೆಗೆ ಪ್ರಮುಖ ಕಾರಣಗಳಾಗಿವೆ ಎಂದು ಸಮೀಕ್ಷೆ ಹೇಳಿದೆ. ಡಿಜಿಟಲ್ ತಂತ್ರಜ್ಞಾನ ಬಳಕೆ, ಆನ್ಲೈನ್ ವ್ಯವಹಾರ ಮಾದರಿಗಳು ಹಾಗೂ ಹೊಸ ತಲೆಮಾರಿನ ಉದ್ಯಮ ನಿರ್ವಹಣಾ ವಿಧಾನಗಳು ಭಾರತೀಯ ಸಣ್ಣ ಉದ್ಯಮಗಳಿಗೆ ಹೊಸ ಬಲ ತುಂಬಿವೆ.

# ‘ಡಿಕೆಶಿ ರೈತರ ಮರಣ ಶಾಸನ ಬರೆಯಲು ಹೊರಟಿದ್ದಾರೆ’

ರಾಮನಗರ

ಜಿಲ್ಲೆಯಲ್ಲಿ ಜಿಬಿಎ ಭೂಸ್ವಾಧೀನ ವಿರೋಧಿ ಹೋರಾಟ ತೀವ್ರಗೊಂಡಿರುವ ನಡುವೆ, ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು.

ಬೈರಮಂಗಲ ಗ್ರಾಮದಲ್ಲಿ ನಡೆಯುತ್ತಿರುವ ಜಿಬಿಎ ಭೂಸ್ವಾಧೀನ ವಿರೋಧಿ ಹೋರಾಟದಲ್ಲಿ ಭಾಗವಹಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, “ನಾನೂ ಈ ಜಿಲ್ಲೆಯ ಮಗ, ನನಗೂ ಒಂದು ಅವಕಾಶ ನೀಡಿ ಎಂದು ಜನರ ಬಳಿ ಪೆನ್ನು ಪೇಪರ್ ಹಿಡಿದು ಮತ ಕೇಳಿದ ಡಿ.ಕೆ. ಶಿವಕುಮಾರ್ ಈಗ ರೈತರ ಮರಣ ಶಾಸನ ಬರೆಯಲು ಹೊರಟಿದ್ದಾರೆ. ಇದು ಎಷ್ಟು ಸರಿ?” ಎಂದು ಪ್ರಶ್ನಿಸಿದರು.

“ರೈತರು ಎರಡೇಟು ಹೊಡೆದರೂ ಯೋಜನೆ ಜಾರಿಗೆ ತರುತ್ತೇವೆ ಎಂದು ಹೇಳುತ್ತಾರೆ. ಆದರೆ 435 ದಿನಗಳಿಂದ ರೈತರು ಪ್ರತಿಭಟನೆ ನಡೆಸುತ್ತಿದ್ದರೂ, ಒಂದು ದಿನವಾದರೂ ಸ್ಥಳಕ್ಕೆ ಬಂದು ಅವರ ನೋವು ಕೇಳಲಿಲ್ಲ. ಜನರಿಂದ ಮತ ಪಡೆದು ಗೆದ್ದ ಸ್ಥಳೀಯ ಶಾಸಕರು ಕೂಡ ರೈತರ ಪರ ನಿಲ್ಲದೆ ಮೌನವಾಗಿದ್ದಾರೆ” ಎಂದು ಟೀಕಿಸಿದರು.



“ನಾವು ಈ ಜಿಲ್ಲೆಯಲ್ಲಿ ಹುಟ್ಟದೇ ಇರಬಹುದು. ಆದರೆ ಈಗ ಈ ಜಿಲ್ಲೆಯವರೇ ಆಗಿದ್ದೇವೆ. ಈ ಮಣ್ಣಿನಲ್ಲಿ ನಮ್ಮ ಭಾವನೆ ಅಡಗಿದೆ” ಎಂದು ಅವರು ಭಾವುಕರಾಗಿ ಹೇಳಿದರು.

ಅರಳಾಳುಸಂದ್ರ ಗ್ರಾಮದಲ್ಲಿ ರೈತ ಹೊನ್ನಪ್ಪ ಅವರ ಜಮೀನಿಗೆ ಭೇಟಿ ನೀಡಿದ ನಿಖಿಲ್ ಕುಮಾರಸ್ವಾಮಿ ಟ್ರ್ಯಾಕ್ಟರ್ ಓಡಿಸಿ ರೈತರೊಂದಿಗೆ ಆತ್ಮೀಯವಾಗಿ ಮಾತನಾಡಿದರು. “ಈ ಮಣ್ಣಿನಲ್ಲಿ ನಮ್ಮ ಭಾವನೆ ಅಡಗಿದೆ” ಎಂದು ಹೇಳಿ ರೈತರಿಗೆ ಧೈರ್ಯ ತುಂಬಿದರು.

“ನಮ್ಮ ಭೂಮಿ, ನಮ್ಮ ಹಕ್ಕು” ಎಂಬ ಘೋಷಣೆಯಡಿ ಕಳೆದ 440 ದಿನಗಳಿಂದ ಹೋರಾಟ ನಡೆಸುತ್ತಿರುವ ಬಿಡದಿ ಹೋಬಳಿಯ ಬೈರಮಂಗಲ, ಕಂಚುಗಾರನಹಳ್ಳಿ ಸೇರಿದಂತೆ 26 ಗ್ರಾಮಗಳ ರೈತರ ಸ್ಥಿತಿಗತಿಗಳನ್ನು ಅವರು ಪರಿಶೀಲಿಸಿದರು.

ಬೈರಮಂಗಲ ವೃತ್ತದ ಬಳಿ ರೈತರು ನಡೆಸುತ್ತಿರುವ ಹೋರಾಟಕ್ಕೆ ಬೆಂಬಲ ಸೂಚಿಸಿದ ವೇಳೆ ಹಲವಾರು ರೈತ ಮಹಿಳೆಯರು “ನಮ್ಮ ಭೂಮಿ ಉಳಿಸಿಕೊಡಿ” ಎಂದು ಮನವಿ ಮಾಡಿಕೊಂಡರು. ಇದಕ್ಕೆ ಪ್ರತಿಕ್ರಿಯಿಸಿದ ನಿಖಿಲ್, “ಇಂದಿನಿಂದ ಇದು ನಿಮ್ಮ ಹೋರಾಟವಲ್ಲ, ನನ್ನ ಹೋರಾಟ” ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಬೈರಮಂಗಲ–ಕಂಚುಗಾರನಹಳ್ಳಿ ಭಾಗದ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ, “ಈ ಭಾಗದಲ್ಲಿ ರೈತರೇ ಇಲ್ಲ ಎಂದು ಹೇಳುವವರು ಒಮ್ಮೆ ಇಲ್ಲಿ ಬಂದು ಜನರ ನೋವು ನೋಡಲಿ” ಎಂದು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಕೆಂಪಶೆಟ್ಟಿದೊಡ್ಡಿ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘಕ್ಕೂ ಭೇಟಿ ನೀಡಿದ ಅವರು, ಹೈನುಗಾರಿಕೆ ಮತ್ತು ಕೃಷಿ ಚಟುವಟಿಕೆಗಳ ಬಗ್ಗೆ ಮಾಹಿತಿ ಪಡೆದರು.

ಬೈರಮಂಗಲ, ಬನ್ನಿಗಿರಿ, ಮಂಡಲಹಳ್ಳಿ, ಅಂಚೀಪುರ, ಕೆಂಪಯ್ಯನಪಾಳ್ಯ, ಕರಿಕಲ್ಲುದೊಡ್ಡಿ, ಗೊಲ್ಲಹಳ್ಳಿ ಸೇರಿದಂತೆ ಅನೇಕ ಗ್ರಾಮಗಳಲ್ಲಿ ಪ್ರವಾಸ ನಡೆಸಿ ರೈತರ ಅಹವಾಲು ಆಲಿಸಿದರು.

## ಸಾಲಸೇವೆ ವಿಸ್ತರಣೆ

ಬೆಂಗಳೂರು

ಮೈಸೂರು ಮತ್ತು ಮಂಡ್ಯ ಜಿಲ್ಲೆಗಳಲ್ಲಿ ಆರಂಭಿಕ ಹಂತದಲ್ಲೇ ಉತ್ತಮ ಪ್ರತಿಕ್ರಿಯೆ ಪಡೆದಿರುವ ನಿವಾಸ ಫೈನಾನ್ಸ್ ಸಂಸ್ಥೆಯು ಈಗ ಕರ್ನಾಟಕದ 13 ಪ್ರಮುಖ ಜಿಲ್ಲೆಗಳಿಗೆ ತನ್ನ ಮನೆ ಸಾಲ ಸೇವೆಯನ್ನು ವಿಸ್ತರಿಸಿದೆ.

ಸಣ್ಣ ಪಟ್ಟಣಗಳು ಮತ್ತು ಗ್ರಾಮೀಣ ಪ್ರದೇಶದ ಜನರಿಗೆ ಮನೆ ನಿರ್ಮಾಣ ಮತ್ತು ಮನೆ ಮೇಲಿನ ಸಾಲ (ಎಲ್ಎಪಿ) ಸೌಲಭ್ಯಗಳನ್ನು ಸುಲಭವಾಗಿ ತಲುಪಿಸುವುದು ಇದರ ಪ್ರಮುಖ ಉದ್ದೇಶವಾಗಿದೆ.




2025ರಲ್ಲಿ ಕಾರ್ಯಾರಂಭ ಮಾಡಿದ ನಂತರ ಮೈಸೂರು ಹಾಗೂ ಮಂಡ್ಯದ ಗ್ರಾಮೀಣ ಭಾಗಗಳಲ್ಲಿ 20 ಕೋಟಿಗೂ ಹೆಚ್ಚು ಮೊತ್ತದ ನೂರಾರು ಸಾಲಗಳನ್ನು ನೀಡುವ ಮೂಲಕ ಸಂಸ್ಥೆ ಗಮನಾರ್ಹ ಸಾಧನೆ ಮಾಡಿದೆ. ಆನ್‌ಲೈನ್ ಮತ್ತು ನೇರ ಸಂಪರ್ಕವನ್ನು ಸಂಯೋಜಿಸಿದ ಹೈಬ್ರಿಡ್ ಮಾದರಿಯನ್ನು ಬಳಸಿ ಸಂಸ್ಥೆ ಸ್ಥಳೀಯ ಜನರ ವಿಶ್ವಾಸ ಗಳಿಸಿದೆ. ಈಗ ಇದೇ ಮಾದರಿಯನ್ನು ಹಳೇ ಮೈಸೂರು ಭಾಗ, ಕಲ್ಯಾಣ ಕರ್ನಾಟಕ ಮತ್ತು ಮಧ್ಯ ಕರ್ನಾಟಕದ ಇತರೆ ಜಿಲ್ಲೆಗಳಿಗೂ ವಿಸ್ತರಿಸಲಾಗುತ್ತಿದೆ. 25 ಲಕ್ಷಕ್ಕಿಂತ ಕಡಿಮೆ ಮೊತ್ತದ ಮನೆ ಸಾಲಗಳಿಗೆ ದೇಶದಲ್ಲಿ ಭಾರಿ ಬೇಡಿಕೆ ಇದ್ದರೂ, ಇಂತಹ ಸಾಲಗಳು ಗ್ರಾಮೀಣ ಮತ್ತು ಅಸಂಘಟಿತ ಆದಾಯ ಹೊಂದಿರುವ ಕುಟುಂಬಗಳಿಗೆ ಸುಲಭವಾಗಿ ಲಭ್ಯವಾಗುತ್ತಿಲ್ಲ. ಈ ಹಿನ್ನೆಲೆಯಲ್ಲಿ ನಿವಾಸ ಫೈನಾನ್ಸ್ ವಿಶೇಷವಾಗಿ ರೈತರು, ಸಣ್ಣ ವ್ಯಾಪಾರಿಗಳು, ದಿನಗೂಲಿ ಕಾರ್ಮಿಕರು ಮತ್ತು ಸ್ವಯಂ ಉದ್ಯೋಗಿಗಳಿಗೆ ಅನುಕೂಲವಾಗಲಿದೆ.

# ಜಾತಿ ಗಣತಿ ವರದಿ ಸ್ವೀಕರಿಸಿದ ಸಿದ್ದು

ಬೆಂಗಳೂರು

ರಾಜ್ಯ ರಾಜಕೀಯದಲ್ಲಿ ಮತ್ತೊಂದು ಬೆಳವಣಿಗೆ ನಡೆದಿದೆ. ಸಿಎಂ ಸಿದ್ದರಾಮಯ್ಯ ಅವರು ಇಂದೇ ಜಾತಿಗಣತಿ ವರದಿ ಸ್ವೀಕರಿಸಿದ್ದಾರೆ.

ವಿಧಾನಸೌಧಕ್ಕೆ ಆಗಮಿಸಿದ ಸಿಎಂ ಸಿದ್ದರಾಮಯ್ಯ ಅವರು ಸಿಎಂ ಕೊಠಡಿಯಲ್ಲಿ ವರದಿ ಸ್ವೀಕರಿಸಿದರು. ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಮಧುಸೂದನ್ ಆರ್ ನಾಯ್ಕ್, ಆಯೋಗದ ಸದಸ್ಯ ಕಾರ್ಯದರ್ಶಿ ಹಾಗೂ ಅಧಿಕಾರಿಗಳು ಸಿಎಂಗೆ ವರದಿ ಸಲ್ಲಿಸಿದರು.



ವರದಿ ಸ್ವೀಕಾರ ವೇಳೆ ಸಚಿವರಾದ ಶಿವರಾಜ್ ತಂಗಡಗಿ, ಹೆಚ್.ಸಿ.ಮಹದೇವಪ್ಪ, ಎಂ.ಸಿ.ಸುಧಾಕರ್, ಸತೀಶ್ ಜಾರಕಿಹೊಳಿ, ಚಲುರಾಯಸ್ವಾಮಿ, ಶಾಸಕರಾದ ಕೋನರೆಡ್ಡಿ, ನರೇಂದ್ರಸ್ವಾಮಿ, ಮುಖ್ಯಮಂತ್ರಿಗಳ ಕಾನೂನು ಸಲಹೆಗಾರ ಪೊನ್ನಣ್ಣ ಹಾಗೂ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಮಧುಸೂಧನ್ ಆರ್ ನಾಯ್ಕ್, ಸದಸ್ಯರಾದ ಶಿವಣ್ಣಗೌಡ, ಚಂದ್ರಪ್ಪ ಯಾದವ, ಪ್ರತಿಭಾ ಕುಳಾಯಿ, ಡಾ. ಸಿ.ಎಂ.ಕುಂದಗೋಳ, ಡಾ. ಜಿ.ಎನ್.ಶ್ರೀಕಂಠಯ್ಯ ಹಾಗೂ ಸದಸ್ಯ ಕಾರ್ಯದರ್ಶಿ ದಯಾನಂದ್, ಆಡಳಿತಾತ್ಮಕ ಕಾರ್ಯದರ್ಶಿ ಊರ್ಮಿಳಾ ಬಿ, ಡಿ.ಎನ್.ನಾಯಕ್ ಆಯೋಗದ ವಿಶೇಷ ಸಲಹೆಗಾರರು ಮತ್ತು ಇತರೆ ತಜ್ಞರು ಉಪಸ್ಥಿತರಿದ್ದರು.

ವರದಿ ಸಲ್ಲಿಕೆಗೂ ಮುನ್ನ ಮಾತನಾಡಿದ ಆಯೋಗದ ಅಧ್ಯಕ್ಷ ಮಧುಸೂದನ್ ನಾಯ್ಕ್, ಸರ್ವೇ ಮುಗಿದು 6 ತಿಂಗಳು ಆಗ್ತಾ ಬಂತು. ಸರ್ವೇ ಅನಾಲಿಸಿಸ್ ಮಾಡಿ ರೆಡಿ ಮಾಡ್ತಾ ಇದ್ವಿ. ರೆಡಿಯಾಗಿ ಒಂದು ತಿಂಗಳು ಆಯ್ತು. ಆದರೆ, ಇಂಗ್ಲಿಷ್‌ನಲ್ಲಿತ್ತು. ಇಂಗ್ಲಿಷ್‌ನಿಂದ ಕನ್ನಡಕ್ಕೆ ತರ್ಜುಮೆ ಮಾಡಬೇಕಿತ್ತು. ಸಾಮಾನ್ಯ ಜನರಿಗೆ ಅರ್ಥ ಆಗುವ ಹಾಗೇ ತರ್ಜುಮೆ ಮಾಡಿದ್ವಿ. ಹಾಗಾಗಿ, ಸಮಯ ತೆಗೆದು ಕೊಂಡಿದ್ದೇವೆ.

ಒಂದು ತಿಂಗಳಿಂದ ರಿಪೋರ್ಟ್ ರೆಡಿ ಇತ್ತು. ಮೆಂಬರ್ಸ್ ಕೆಲವರು ಹೊರಗಡೆ ಇದ್ರು. ಇದೇ ತಿಂಗಳು 29 ಕ್ಕೆ ನಾವು ಮೀಟಿಂಗ್ ಕರೆದಿದ್ದೇವೆ. ಕೆಲವು ಮೆಂಬರ್ಸ್ ಆ ದಿನ ಬರೋಕೆ ಆಗಲ್ಲ ಅಂದ್ರು. ಹಾಗಾಗಿ, ಇವತ್ತೇ ತುರ್ತು ಸಭೆ ಮಾಡಿದ್ದೇವೆ ಎಂದು ತಿಳಿಸಿದರು.

ಜಾತಿ ಜನಗಣತಿ ವರದಿ ಸಲ್ಲಿಕೆಗೆ ಸದಸ್ಯರ ಮಧ್ಯೆ ಯಾವುದೇ ಭಿನ್ನಾಭಿಪ್ರಾಯ ಇಲ್ಲ.

ತಕ್ಷಣಕ್ಕೆ ಜಾತಿ ಜನಗಣತಿ ಅನುಷ್ಠಾನಕ್ಕೆ ತರೋದಕ್ಕೆ ಕಷ್ಟಸಾಧ್ಯ. ರಿಪೋರ್ಟ್ ಸಿಕ್ಕ ತಕ್ಷಣ ಕ್ಯಾಬಿನೆಟ್ ಹೋಗೋ ಸಾಧ್ಯತೆ ಇದೆ. ಕ್ಯಾಬಿನೆಟ್ ಸ್ವೀಕಾರ ಮಾಡಿದ ಬಳಿಕ ಪ್ರಕ್ರಿಯೆ ನಡೆಯುತ್ತೆ ಎಂದರು.

## ಅಮೆಜಾನ್ ಬೆಡ್ರಾಕ್ ಬೆಂಬಲದಿಂದ ಸಿಆರ್‌ಇಡ್ಗೆ ಭಾರೀ ತಾಂತ್ರಿಕ ಮುನ್ನಡೆ

ಬೆಂಗಳೂರು

ಭಾರತದ ಪ್ರಮುಖ ಫಿನ್ಟೆಕ್ ವೇದಿಕೆಯಾದ ಸಿಆರ್‌ಇಡ್ ಇದೀಗ ಕೃತಕ ಬುದ್ಧಿಮತ್ತೆ ಕ್ಷೇತ್ರದಲ್ಲಿ ಮಹತ್ವದ ಸಾಧನೆ ಮಾಡಿದೆ. ಅಮೆಜಾನ್ ಬೆಡ್ರಾಕ್ ಸಹಾಯದಿಂದ ಅಭಿವೃದ್ಧಿಪಡಿಸಿರುವ “ಸಿಆರ್‌ಇಡ್ ಕೋಡ್ಲೆನ್ಸ್” ಎಂಬ ಜೀವಂತ ಇಂಟೆಲಿಜೆನ್ಸ್ ವ್ಯವಸ್ಥೆಯ ಮೂಲಕ ಕಂಪನಿ ನಾಲ್ಕು ಪಟ್ಟು ವೇಗವಾದ ಕೃತಕ ಬುದ್ಧಿಮತ್ತೆ ಕಾರ್ಯಕ್ಷಮತೆಯನ್ನು ಸಾಧಿಸಿದೆ ಎಂದು ಘೋಷಿಸಿದೆ.

ಸಿಆರ್‌ಇಡ್ ಕೋಡ್ಲೆನ್ಸ್ ಎನ್ನುವುದು ಕಂಪನಿಯ ಪ್ರತಿಯೊಂದು ಕೋಡ್ ಸಾಲಿನ ಬಗ್ಗೆ ಸಂಪೂರ್ಣ ಮಾಹಿತಿ ನೀಡುವ ಬುದ್ಧಿವಂತ ತಂತ್ರಜ್ಞಾನ ವ್ಯವಸ್ಥೆಯಾಗಿದೆ. ಇದರಿಂದ ಸಿಆರ್‌ಇಡ್ ಪ್ಲಾಟ್ಫಾರ್ಮ್, ಆರ್ಕಿಟೆಕ್ಚರ್, ಸೇವೆಗಳು ಹಾಗೂ ಸುರಕ್ಷತಾ ಮಾರ್ಗಸೂಚಿಗಳ ಮಾಹಿತಿಯನ್ನು ಒಂದೇ ಜಾಗದಲ್ಲಿ ಸುಲಭವಾಗಿ ಪಡೆಯಲು ಸಾಧ್ಯವಾಗುತ್ತಿದೆ. ಕಂಪನಿಯು ಇದನ್ನು “ಒಂದೇ ನಿಖರ ಮಾಹಿತಿಯ ಮೂಲ” ಎಂದು ವಿವರಿಸಿದೆ.

ಸಿಆರ್‌ಇಡ್ ಸಂಸ್ಥೆಯೊಳಗೆ 20ಕ್ಕೂ ಹೆಚ್ಚು ವ್ಯವಹಾರ ವಿಭಾಗಗಳು, 2,000ಕ್ಕೂ ಹೆಚ್ಚು ರೆಪೊಸಿಟರಿಗಳು ಹಾಗೂ 500ಕ್ಕೂ ಹೆಚ್ಚು ಮೈಕ್ರೋಸರ್ವಿಸ್ಗಳು ಕಾರ್ಯನಿರ್ವಹಿಸುತ್ತಿವೆ. ಇಂತಹ ದೊಡ್ಡ ತಾಂತ್ರಿಕ ವ್ಯವಸ್ಥೆಯಲ್ಲಿ ಡಾಕ್ಯುಮೆಂಟೇಶನ್ ಮತ್ತು ಪ್ರಕ್ರಿಯೆಗಳನ್ನು ನಿರ್ವಹಿಸುವುದು ದಿನದಿಂದ ದಿನಕ್ಕೆ ಸವಾಲಾಗುತ್ತಿತ್ತು. ಈ ಸಮಸ್ಯೆಗೆ ಪರಿಹಾರವಾಗಿ ಕೋಡ್ಲೆನ್ಸ್ ಅನ್ನು ರೂಪಿಸಲಾಗಿದೆ.

# ನಗರ ಸ್ವಚ್ಛತೆಗೆ ಸ್ಮಾರ್ಟ್ ತಂತ್ರಜ್ಞಾನ ಬಳಕೆ

ಬೆಂಗಳೂರು

ನಗರವನ್ನು ಮತ್ತಷ್ಟು ಸ್ವಚ್ಛ ಹಾಗೂ ಸುಂದರವಾಗಿಡುವ ಉದ್ದೇಶದಿಂದ ಸ್ಮಾರ್ಟ್ ತಂತ್ರಜ್ಞಾನ ಬಳಕೆಗೆ ಬೆಂಗಳೂರು ನಗರ ಪಾಲಿಕೆ ಮುಂದಾಗಿದ್ದು, ಪ್ರಮುಖ ರಸ್ತೆಗಳಲ್ಲಿ ‘ಗಾಬ್ಲರ್’ ಸ್ಮಾರ್ಟ್ ಲಿಟ್ಟರ್ ಪಿಕ್ಕರ್ ಯಂತ್ರವನ್ನು ಪ್ರಾಯೋಗಿಕವಾಗಿ ಬಳಸಿ ವರದಿ ಸಲ್ಲಿಸಲು ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಶಿವಾಜಿನಗರ ವಿಭಾಗದ ಕಮರ್ಷಿಯಲ್ ಸ್ಟ್ರೀಟ್ ರಸ್ತೆಯಲ್ಲಿ ಇಂದು ಗಾಬ್ಲರ್ ಯಂತ್ರದ ಪ್ರಾತ್ಯಕ್ಷಿಕೆ ಪರಿಶೀಲಿಸಿದ ಬಳಿಕ ಅವರು ಮಾತನಾಡಿದರು. ಉಪ ಮುಖ್ಯಮಂತ್ರಿ ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವ ಡಿ.ಕೆ. ಶಿವಕುಮಾರ್ ಅವರ ನಿರ್ದೇಶನದಂತೆ ನಗರ ಸ್ವಚ್ಛತೆಗೆ ಹೊಸ ಉಪಕ್ರಮಗಳನ್ನು ಜಾರಿಗೊಳಿಸಲಾಗುತ್ತಿದೆ ಎಂದು ತಿಳಿಸಿದರು.

“ಸ್ಮಾರ್ಟ್ ತಂತ್ರಜ್ಞಾನ ಬಳಸಿ ನಗರದ ರಸ್ತೆಗಳನ್ನು ಪರಿಣಾಮಕಾರಿಯಾಗಿ ಸ್ವಚ್ಛವಾಗಿಡಬೇಕು. ಗಾಬ್ಲರ್ ಯಂತ್ರದ ಕಾರ್ಯಕ್ಷಮತೆ ಕುರಿತು ಪ್ರಾಯೋಗಿಕ ವರದಿ ಆಧರಿಸಿ ಮುಂದಿನ ದಿನಗಳಲ್ಲಿ ಎಲ್ಲಾ ನಗರ ಪಾಲಿಕೆಗಳಲ್ಲಿ ಪೂರ್ಣ ಪ್ರಮಾಣದಲ್ಲಿ ಬಳಸುವ ಬಗ್ಗೆ ನಿರ್ಧಾರ ಕೈಗೊಳ್ಳಲಾಗುತ್ತದೆ” ಎಂದು ಹೇಳಿದರು.




ಗಾಬ್ಲರ್ ಯಂತ್ರವು ಆಧುನಿಕ ಸ್ಮಾರ್ಟ್ ತಂತ್ರಜ್ಞಾನ ಹೊಂದಿದ್ದು, ತರಬೇತಿ ಪಡೆದ ಚಾಲಕ ಯಂತ್ರದ ಮೇಲೆ ನಿಂತುಕೊಂಡೇ ಕಾರ್ಯನಿರ್ವಹಿಸಬಹುದು. ಜೊತೆಗೆ ನಡೆದುಕೊಂಡು ಹೋಗುತ್ತಲೇ ಯಂತ್ರವನ್ನು ನಿಯಂತ್ರಿಸುವ ವ್ಯವಸ್ಥೆಯೂ ಇದರಲ್ಲಿ ಅಳವಡಿಸಲಾಗಿದೆ. ಒಬ್ಬ ವ್ಯಕ್ತಿಯೇ ಸುಲಭವಾಗಿ ಯಂತ್ರವನ್ನು ನಿರ್ವಹಿಸಬಹುದಾಗಿದೆ.

ವಿದ್ಯುತ್ ಬ್ಯಾಟರಿ ಆಧಾರಿತ ಈ ಯಂತ್ರವು ಮೂರು ಗಂಟೆಗಳ ಚಾರ್ಜ್‌ನೊಂದಿಗೆ ಎಂಟು ಗಂಟೆಗಳ ಕಾಲ ನಿರಂತರವಾಗಿ ಕಾರ್ಯನಿರ್ವಹಿಸುವ ಸಾಮರ್ಥ್ಯ ಹೊಂದಿದೆ. ಜಿಪಿಎಸ್ ವ್ಯವಸ್ಥೆ ಅಳವಡಿಸಲಾಗಿರುವುದರಿಂದ ಯಂತ್ರದ ಮೇಲ್ವಿಚಾರಣೆ ಸುಲಭವಾಗಲಿದೆ. ಕಿರಿದಾದ ರಸ್ತೆ ಮತ್ತು ಸ್ಥಳಗಳಲ್ಲಿಯೂ ಸುಗಮವಾಗಿ ಬಳಸಬಹುದಾಗಿದೆ.

ಈ ಯಂತ್ರದಲ್ಲಿ 240 ಲೀಟರ್ ಸಾಮರ್ಥ್ಯದ ತ್ಯಾಜ್ಯ ಸಂಗ್ರಹಣಾ ಕಂಟೈನರ್, ಧೂಳು ಶೋಧಕ, ನಿಯಂತ್ರಣ ಬಟನ್‌ಗಳು, ಕಸ ಹೆಕ್ಕುವ ಜಾಯ್‌ಸ್ಟಿಕ್, ಫ್ಲಾಶಿಂಗ್ ಎಚ್ಚರಿಕೆ ದೀಪ, ರಾತ್ರಿ ಕಾರ್ಯಾಚರಣೆಗೆ ಎಲ್ಇಡಿ ದೀಪ, ಹಿಂಬದಿ ಚಲನೆಯ ಎಚ್ಚರಿಕಾ ಅಲಾರಂ ಹಾಗೂ ಅಗ್ನಿಶಾಮಕ ಸಾಧನಗಳನ್ನು ಅಳವಡಿಸಲಾಗಿದೆ.

ಸಂಗ್ರಹವಾದ ತ್ಯಾಜ್ಯವನ್ನು ಜೈವಿಕವಾಗಿ ಕರಗುವ ಬ್ಯಾಗ್‌ಗಳ ಮೂಲಕ ಸುರಕ್ಷಿತವಾಗಿ ವಿಲೇವಾರಿ ಮಾಡುವ ವ್ಯವಸ್ಥೆಯೂ ಯಂತ್ರದಲ್ಲಿದೆ. ನಗರ ಸ್ವಚ್ಛತೆಗೆ ತಂತ್ರಜ್ಞಾನವನ್ನು ಪರಿಣಾಮಕಾರಿಯಾಗಿ ಬಳಸುವ ನಿಟ್ಟಿನಲ್ಲಿ ಈ ಪ್ರಯೋಗ ಮಹತ್ವದ ಹೆಜ್ಜೆಯಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಸಿಡಿಲಿಗೆ ಟೆಕ್ಕಿ ಬಲಿ

ಮೈಸೂರು

ಮೈಸೂರು ಜಿಲ್ಲೆಯ ಯೆಲಿವಾಳ ಬಳಿ ಸಿಡಿಲು ಬಡಿದು ಬೆಂಗಳೂರಿನ 43 ವರ್ಷದ ಟೆಕ್ಕಿಯೊಬ್ಬರು ಮೃತಪಟ್ಟಿದ್ದಾರೆ. ಮೃತ ಟೆಕ್ಕಿಯನ್ನು ಹೊಸೊಕ್ಲು ರೋಷನ್ ಬಾಲಕೃಷ್ಣ ಎಂದು ಗುರುತಿಸಲಾಗಿದ್ದು, ಅವರು ಮೂಲತ ಕೊಡಗು ಜಿಲ್ಲೆಯವರು. ಆದರೆ ಬೆಂಗಳೂರಿನ ಜಾಲಹಳ್ಳಿಯಲ್ಲಿರುವ ಅಪಾರ್ಟ್ ಮೆಂಟ್‌ನಲ್ಲಿ ವಾಸಿಸುತ್ತಿದ್ದರು.

ರೋಷನ್ ಐಟಿ ಕಂಪನಿಯ ಉದ್ಯೋಗಿಯಾಗಿದ್ದು, ಮೈಸೂರಿನಲ್ಲಿರುವ ತಮ್ಮ ಕುಟುಂಬದ ಕಾಫಿ ತೋಟವನ್ನೂ ನಿರ್ವಹಿಸುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಸೋಮವಾರ ಸಂಜೆ 5 ಗಂಟೆಗೆ ರೋಷನ್ ಮತ್ತು ಅವರ ಕುಟುಂಬ ಯೆಲಿವಾಳ ಬಳಿ ತಮ್ಮ ತೋಟಕ್ಕೆ ಭೇಟಿ ನೀಡಿದಾಗ ಈ ಘಟನೆ ಸಂಭವಿಸಿದೆ. ರೋಷನ್ ಹಣ್ಣುಗಳನ್ನು ಕೀಳಲು ಮಾವಿನ ಮರದ ಬಳಿ ಹೋದಾಗ ಸಿಡಿಲು ಬಡಿದು ಸ್ಥಳದಲ್ಲೇ ಕುಸಿದು ಬಿದ್ದರು ಎಂದು ವರದಿಯಾಗಿದೆ. ಕುಟುಂಬ ಸದಸ್ಯರು ತಕ್ಷಣ ಅವರನ್ನು ಹತ್ತಿರದ ಎನ್‌ಜಿ ಆಸ್ಪತ್ರೆಗೆ ಮತ್ತು ನಂತರ ಜಯದೇವ ಆಸ್ಪತ್ರೆಗೆ ಕರೆದೊಯ್ದರು. ಆದರೆ ಅಲ್ಲಿ ವೈದ್ಯರು ಅವರು ಮೃತಪಟ್ಟಿದ್ದಾರೆ ಎಂದು ಘೋಷಿಸಿದರು.

## ಡಿಜಿಟಲ್ ಶಿಕ್ಷಣದಲ್ಲಿ ಹೊಸ ಮೈಲಿಗಲ್ಲು

ಬೆಂಗಳೂರು

ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಡಿಜಿಟಲ್ ಕ್ರಾಂತಿಗೆ ಮುನ್ನಡೆ ನೀಡುತ್ತಿರುವ ಜೈನ್ (ಪರಿಗಣಿತ ವಿಶ್ವವಿದ್ಯಾಲಯ)ದ ಆನ್ಲೈನ್ ಶಿಕ್ಷಣ ವೇದಿಕೆ ‘ಜೈನ್ ಆನ್ಲೈನ್’ ತನ್ನ 16ನೇ ವಾರ್ಷಿಕ ಘಟಿಕೋತ್ಸವ ಸಮಾರಂಭವನ್ನು ಭರ್ಜರಿಯಾಗಿ ಆಚರಿಸಿತು. “ರೀಇಮ್ಯಾಜಿನ್ಡ್, ರೀವೈರ್ಡ್” ಎಂಬ ಘೋಷವಾಕ್ಯದಡಿ ನಡೆದ ಈ ಸಮಾರಂಭವು ಶಿಕ್ಷಣ ಕ್ಷೇತ್ರದಲ್ಲಿ ತಂತ್ರಜ್ಞಾನ ಆಧಾರಿತ ಕಲಿಕೆಯ ಹೊಸ ದಿಕ್ಕನ್ನು ಅನಾವರಣಗೊಳಿಸಿತು.



ಮೇ 23ರಂದು ಎರಡು ಅವಧಿಗಳಲ್ಲಿ ಆಯೋಜಿಸಲಾಗಿದ್ದ ಘಟಿಕೋತ್ಸವ ಸಮಾರಂಭದಲ್ಲಿ ಸುಮಾರು 2,000ಕ್ಕೂ ಹೆಚ್ಚು ವಿದ್ಯಾರ್ಥಿಗಳು, ಪೋಷಕರು, ಅಧ್ಯಾಪಕರು ಹಾಗೂ ಗಣ್ಯರು ಭಾಗವಹಿಸಿ ಸಂಭ್ರಮಿಸಿದರು. ಜೈನ್ ಆನ್ಲೈನ್ ಹಾಗೂ ದೂರ ಮತ್ತು ಆನ್ಲೈನ್ ಶಿಕ್ಷಣ ಕೇಂದ್ರದ ಸಾಧಕ ವಿದ್ಯಾರ್ಥಿಗಳನ್ನು ಈ ವೇಳೆ ಗೌರವಿಸಲಾಯಿತು.

ಈ ವರ್ಷದ ವಿಶೇಷವೆಂದರೆ ಜೈನ್ ಆನ್ಲೈನ್ ಮತ್ತು ಸಿಡಿಓಇ ಸಂಸ್ಥೆಗಳ ಮೂಲಕ ಒಟ್ಟು 5,600ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪದವಿ ಪಡೆದಿರುವುದು. ಇದರೊಂದಿಗೆ ಡಿಜಿಟಲ್ ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಸಂಸ್ಥೆಯ ಬೆಳವಣಿಗೆ ಮತ್ತೊಮ್ಮೆ ಸಾಬೀತಾಗಿದೆ. ಈ ಪೈಕಿ ಸುಮಾರು 2,600 ವಿದ್ಯಾರ್ಥಿಗಳು ಜೈನ್ ಆನ್ಲೈನ್ ಕಾರ್ಯಕ್ರಮಗಳ ಮೂಲಕ ಪದವಿ ಪಡೆದಿದ್ದು, ತಂತ್ರಜ್ಞಾನ ಆಧಾರಿತ ಶಿಕ್ಷಣದಲ್ಲಿ ಸಂಸ್ಥೆಯ ಬಲಿಷ್ಠ ಸ್ಥಾನವನ್ನು ಮತ್ತಷ್ಟು ಗಟ್ಟಿಗೊಳಿಸಿದೆ. ಪ್ರಸ್ತುತ ಉದ್ಯಮ ಕ್ಷೇತ್ರದ ಅಗತ್ಯತೆಗಳಿಗೆ ತಕ್ಕಂತೆ ನಿರ್ವಹಣಾ ಮತ್ತು ತಂತ್ರಜ್ಞಾನ ಶಿಕ್ಷಣಕ್ಕೆ ವಿದ್ಯಾರ್ಥಿಗಳ ಆಸಕ್ತಿ ಹೆಚ್ಚುತ್ತಿರುವುದು ಈ ಘಟಿಕೋತ್ಸವದಲ್ಲಿ ಸ್ಪಷ್ಟವಾಗಿ ಗೋಚರಿಸಿತು. ಎಂ.ಬಿ.ಎ ಮತ್ತು ಎಂ.ಸಿ.ಎ ಕೋರ್ಸ್‌ಗಳು ಅತಿ ಹೆಚ್ಚು ವಿದ್ಯಾರ್ಥಿಗಳನ್ನು ಹೊಂದಿರುವ ಕಾರ್ಯಕ್ರಮಗಳಾಗಿ ಹೊರಹೊಮ್ಮಿವೆ.

ಉದ್ಯೋಗ ಮಾರುಕಟ್ಟೆಯಲ್ಲಿ ಹೆಚ್ಚುತ್ತಿರುವ ಸ್ಪರ್ಧೆಯನ್ನು ಗಮನದಲ್ಲಿಟ್ಟುಕೊಂಡು, ಜೈನ್ ವಿಶ್ವವಿದ್ಯಾಲಯ ಇದೀಗ ಕೃತಕ ಬುದ್ಧಿಮತ್ತೆ ಸಂಯೋಜಿತ ಎಂ.ಬಿ.ಎ ಮತ್ತು ಎಂ.ಸಿ.ಎ ಕಾರ್ಯಕ್ರಮಗಳನ್ನು ಪರಿಚಯಿಸಿದೆ.

ಈ ಹೊಸ ಕಾರ್ಯಕ್ರಮಗಳ ಮೂಲಕ ವಿದ್ಯಾರ್ಥಿಗಳಿಗೆ ಕೃತಕ ಬುದ್ಧಿಮತ್ತೆ ಕ್ಷೇತ್ರದ ಅತ್ಯಾಧುನಿಕ ತಂತ್ರಜ್ಞಾನ, ಪರಿಕರಗಳು ಹಾಗೂ ಭವಿಷ್ಯದ ಉದ್ಯೋಗ ಮಾರುಕಟ್ಟೆಗೆ ಅಗತ್ಯವಿರುವ ಕೌಶಲ್ಯಗಳನ್ನು ಕಲಿಸಲಾಗುತ್ತದೆ. ಡಿಜಿಟಲ್ ಯುಗದ ಸವಾಲುಗಳಿಗೆ ತಕ್ಕಂತೆ ವಿದ್ಯಾರ್ಥಿಗಳನ್ನು ಸಜ್ಜುಗೊಳಿಸುವತ್ತ ಸಂಸ್ಥೆ ಮಹತ್ವದ ಹೆಜ್ಜೆ ಇಟ್ಟಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಜೈನ್ (ಪರಿಗಣಿತ ವಿಶ್ವವಿದ್ಯಾಲಯ)ದ ನಿರ್ದೇಶಕರಾದ ಪ್ರೊ. ಧಿಮಂತ್ ಗಣಾತ್ರಾ ಅವರು, “2026ರ ಪದವೀಧರರ ಬ್ಯಾಚ್ ನಿರಂತರ ಕೌಶಲ್ಯ ವೃದ್ಧಿ ಮತ್ತು ಡಿಜಿಟಲ್ ಶಿಕ್ಷಣದ ಮಹತ್ವವನ್ನು ಅರಿತುಕೊಂಡ ಪೀಳಿಗೆಯನ್ನು ಪ್ರತಿನಿಧಿಸುತ್ತದೆ. ತಮ್ಮ ವೈಯಕ್ತಿಕ ಮತ್ತು ವೃತ್ತಿಪರ ಜವಾಬ್ದಾರಿಗಳ ನಡುವೆ ಸಮತೋಲನ ಕಾಯ್ದುಕೊಂಡು ಭವಿಷ್ಯದ ಉದ್ಯೋಗ ಮಾರುಕಟ್ಟೆಗೆ ಸಿದ್ಧರಾಗಿರುವ ನಮ್ಮ ವಿದ್ಯಾರ್ಥಿಗಳ ಸಾಧನೆ ನಮಗೆ ಹೆಮ್ಮೆ ತರುತ್ತದೆ,” ಎಂದು ಹೇಳಿದರು.

ಡಿಜಿಟಲ್ ಶಿಕ್ಷಣದ ಮೂಲಕ ಸಾವಿರಾರು ವಿದ್ಯಾರ್ಥಿಗಳಿಗೆ ಕೈಗೆಟುಕುವ ಮತ್ತು ಗುಣಮಟ್ಟದ ಉನ್ನತ ಶಿಕ್ಷಣ ಒದಗಿಸುವಲ್ಲಿ ಜೈನ್ ಆನ್ಲೈನ್ ಮಹತ್ವದ ಪಾತ್ರ ವಹಿಸುತ್ತಿದ್ದು, ಭವಿಷ್ಯಮುಖಿ ಶಿಕ್ಷಣ ವ್ಯವಸ್ಥೆಗೆ ಹೊಸ ಮಾನದಂಡಗಳನ್ನು ರೂಪಿಸುತ್ತಿದೆ.

# ‘ಎಐ ಮತ್ತು ಮಾನವ ಸಹಕಾರದ ಸಮನ್ವಯವೇ ಭವಿಷ್ಯದ ಯಶಸ್ಸು’

ಬೆಂಗಳೂರು

ಕೇವಲ ತಂತ್ರಜ್ಞಾನದಿಂದ ಮಾತ್ರ ಸಮಾಜದಲ್ಲಿ ದೊಡ್ಡ ಮಟ್ಟದ ಬದಲಾವಣೆ ಸಾಧ್ಯವಿಲ್ಲ. ತಂತ್ರಜ್ಞಾನದೊಂದಿಗೆ ಸರ್ಕಾರದ ವ್ಯವಸ್ಥೆ, ಸಂಸ್ಥೆಗಳು ಹಾಗೂ ಮಾನವ ಸಹಕಾರ ಬೆರೆತಾಗ ಮಾತ್ರ ಕೃತಕ ಬುದ್ಧಿಮತ್ತೆ (ಎಐ) ಆಧಾರಿತ ವ್ಯವಸ್ಥೆಗಳು ಸಂಪೂರ್ಣ ಯಶಸ್ಸು ಕಾಣಲು ಸಾಧ್ಯ ಎಂದು ನಗರಾಭಿವೃದ್ಧಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್ ಅಭಿಪ್ರಾಯಪಟ್ಟರು.

ನಗರದಲ್ಲಿ ಆಯೋಜಿಸಿದ್ದ ‘ರಾಷ್ಟ್ರೀಯ ಎಐ ಮತ್ತು ಡಿಜಿಟಲ್ ವಾಟರ್ ಶೃಂಗಸಭೆ 2026’ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಭವಿಷ್ಯದ ನಗರಾಡಳಿತದಲ್ಲಿ ತಂತ್ರಜ್ಞಾನ ಮತ್ತು ಮಾನವ ಸಂಪನ್ಮೂಲಗಳ ಒಗ್ಗಟ್ಟಿನ ಕಾರ್ಯಾಚರಣೆ ಅತ್ಯಂತ ಅಗತ್ಯ ಎಂದು ಹೇಳಿದರು.

ಜಲ ಸಂರಕ್ಷಣೆ ಮತ್ತು ಡಿಜಿಟಲ್ ನೀರು ನಿರ್ವಹಣೆಯಲ್ಲಿ ಇಸ್ರೇಲ್ ಸಾಧಿಸಿರುವ ಪ್ರಗತಿಯನ್ನು ಉಲ್ಲೇಖಿಸಿದ ಅವರು, ಸರ್ಕಾರ, ಶೈಕ್ಷಣಿಕ ಸಂಸ್ಥೆಗಳು, ಸ್ಟಾರ್ಟ್‌ಅಪ್‌ಗಳು ಮತ್ತು ಕೈಗಾರಿಕೆಗಳು ಒಟ್ಟಾಗಿ ಕೆಲಸ ಮಾಡಿದಾಗ ಮಾತ್ರ ನಾವೀನ್ಯತೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು.



ಈ ಸಂದರ್ಭದಲ್ಲಿ ವಿಶೇಷ ಅತಿಥಿಯಾಗಿ ಭಾಗವಹಿಸಿದ್ದ ಬೆಂಗಳೂರಿನಲ್ಲಿರುವ ಇಸ್ರೇಲ್‌ನ ಕಾನ್ಸುಲ್ ಜನರಲ್ ಓರ್ಲಿ ವೈಟ್ಜ್‌ಮ್ಯಾನ್ ಮಾತನಾಡಿ, ನೀರಿನ ನಿರ್ವಹಣೆಯಲ್ಲಿ ಇಸ್ರೇಲ್ ಅನುಸರಿಸಿದ ತಂತ್ರಜ್ಞಾನಾಧಾರಿತ ಕ್ರಮಗಳನ್ನು ವಿವರಿಸಿದರು.

“ಒಂದು ಕಾಲದಲ್ಲಿ ಇಸ್ರೇಲ್ ತೀವ್ರ ಜಲಕ್ಷಾಮ ಎದುರಿಸಿತ್ತು. ಆದರೆ ತಾಂತ್ರಿಕ ನಾವೀನ್ಯತೆ, ಸರ್ಕಾರದ ದಿಟ್ಟ ನೀತಿಗಳು ಮತ್ತು ಸಾರ್ವಜನಿಕರ ಸಹಕಾರದಿಂದ ನಾವು ಅದನ್ನು ಅವಕಾಶವನ್ನಾಗಿ ಪರಿವರ್ತಿಸಿದ್ದೇವೆ. ಇಂದು ದೇಶದಲ್ಲಿ ಶೇಕಡಾ 90ರಷ್ಟು ತ್ಯಾಜ್ಯ ನೀರನ್ನು ಮರುಬಳಕೆ ಮಾಡಲಾಗುತ್ತಿದೆ. ಎಐ ಮತ್ತು ಸ್ಮಾರ್ಟ್ ವಾಟರ್ ಗ್ರಿಡ್ ಬಳಕೆಯಿಂದ ನೀರಿನ ಸೋರಿಕೆ ಪ್ರಮಾಣವನ್ನು ಗಣನೀಯವಾಗಿ ಕಡಿಮೆ ಮಾಡಲಾಗಿದೆ” ಎಂದು ಹೇಳಿದರು.

ಬೆಂಗಳೂರು ಸೇರಿದಂತೆ ವೇಗವಾಗಿ ಬೆಳೆಯುತ್ತಿರುವ ನಗರಗಳಿಗೆ ಇಂತಹ ತಂತ್ರಜ್ಞಾನ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟ ಅವರು, ಕರ್ನಾಟಕ ಸರ್ಕಾರ ಮತ್ತು ಬೆಂಗಳೂರು ಜಲಮಂಡಳಿ ಜೊತೆ ಕೈಜೋಡಿಸಿ ತಂತ್ರಜ್ಞಾನ, ಅನುಭವ ಮತ್ತು ಎಐ ಪರಿಣತಿಯನ್ನು ಹಂಚಿಕೊಳ್ಳಲು ಇಸ್ರೇಲ್ ಸಿದ್ಧವಿದೆ ಎಂದು ಘೋಷಿಸಿದರು.

ಈ ಕುರಿತು ಪ್ರತಿಕ್ರಿಯಿಸಿದ ತುಷಾರ್ ಗಿರಿನಾಥ್, “ಜಲ ನಿರ್ವಹಣೆಯಂತಹ ಸೂಕ್ಷ್ಮ ಕ್ಷೇತ್ರಗಳಲ್ಲಿ ಎಐ ಬಳಕೆ ಈಗ ಅನಿವಾರ್ಯವಾಗಿದೆ. ಬೆಂಗಳೂರು ಜಲಮಂಡಳಿಯಲ್ಲಿ ಎಐ ತಂತ್ರಜ್ಞಾನವನ್ನು ಪರಿಣಾಮಕಾರಿಯಾಗಿ ಬಳಸುವಲ್ಲಿ ನಾವು ಯಶಸ್ವಿಯಾದರೆ, ಅದು ಜಾಗತಿಕ ಮಟ್ಟದಲ್ಲಿ ಮಾದರಿಯಾಗಲಿದೆ. ವಿಶ್ವದ ಅನೇಕ ನಗರಗಳು ಎದುರಿಸುತ್ತಿರುವ ನೀರಿನ ಸಮಸ್ಯೆಗಳಿಗೆ ಕರ್ನಾಟಕವೇ ಪರಿಹಾರ ಮಾದರಿಯನ್ನು ನೀಡುವ ಸಾಧ್ಯತೆ ಇದೆ” ಎಂದು ವಿಶ್ವಾಸ ವ್ಯಕ್ತಪಡಿಸಿದರು.

ನಗರಾಭಿವೃದ್ಧಿ ಮತ್ತು ಜಲ ನಿರ್ವಹಣೆಯಲ್ಲಿ ತಂತ್ರಜ್ಞಾನ ಬಳಕೆಯ ಹೊಸ ಅಧ್ಯಾಯಕ್ಕೆ ಈ ಶೃಂಗಸಭೆ ವೇದಿಕೆಯಾಗಿದ್ದು, ಎಐ ಆಧಾರಿತ ಜಲ ವ್ಯವಸ್ಥೆಗಳ ಕುರಿತು ಜಾಗತಿಕ ಮಟ್ಟದ ಚರ್ಚೆಗೆ ಚಾಲನೆ ನೀಡಿದೆ.

# ಡಿಪ್ಲೊಮಾ ಇನ್ ಕೋ ಆಪರೇಟಿವ್ ಮ್ಯಾನೇಜ್‌ಮೆಂಟ್ ಪ್ರವೇಶಕ್ಕೆ ಅರ್ಜಿ ಆಹ್ವಾನ

ರಾಮನಗರ

ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜ್ ಮೆಂಟ್, ಸಹಕಾರ ತರಬೇತಿ ಸಂಸ್ಥೆಯು ಜುಲೈ 01 ರಿಂದ 6 ತಿಂಗಳ ಅವಧಿಯ ಡಿಪ್ಲೊಮಾ ಇನ್ ಕೋ ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿಯನ್ನು ಪ್ರಾರಂಭಿಸಿದೆ. ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ತುಮಕೂರು, ಚಿಕ್ಕಬಳ್ಳಾಪುರ, ಕೋಲಾರ, ಮತ್ತು ಬೆಂಗಳೂರು ದಕ್ಷಿಣ ಜಿಲ್ಲೆಗಳ ಖಾಸಗಿ ಅಭ್ಯರ್ಥಿಗಳಿಂದ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿ ಅಭ್ಯರ್ಥಿಗಳಿಂದ ಮತ್ತು ಎಲ್ಲಾ ವಿವಿಧ ಸಹಕಾರ ಸಂಘ/ಬ್ಯಾಂಕ್‌ಗಳ ಉದ್ಯೋಗಿಗಳು ಅರ್ಜಿ ಸಲ್ಲಿಸಬಹುದು.

ತರಬೇತಿ ಪಡೆಯಲು ಕನಿಷ್ಠ ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಖಾಸಗಿ ಅಭ್ಯರ್ಥಿಗಳಿಗೂ ಸಹ ಪ್ರವೇಶ ಪಡೆಯಲು ಅವಕಾಶವಿರುತ್ತದೆ. ವಯೋಮಿತಿ 16 ವರ್ಷ ದಾಟಿದವರಾಗಿರಬೇಕು. ಅರ್ಜಿಯನ್ನು ಮೇ. 30 ರೊಳಗೆ ಸಲ್ಲಿಸಬೇಕು. ತರಬೇತಿ ಪಡೆಯುವ ಎಲ್ಲಾ ಅಭ್ಯರ್ಥಿಗಳಿಗೆ ಮಾಸಿಕ ರೂ. 500/– ಶಿಷ್ಯ ವೇತನ ನೀಡಲಾಗುವುದು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿ ಅಭ್ಯರ್ಥಿಗಳಿಗೆ ಮಾಸಿಕ ರೂ. 600/– ಶಿಷ್ಯ ವೇತನ ನೀಡಲಾಗುವುದು.

ಹೆಚ್ಚಿನ ವಿವರಗಳಿಗೆ ದೂ.080–35541407 ಅಥವಾ ಮೊ. 9036259781 ಸಂಪರ್ಕಿಸಬಹುದು ಅಥವಾ ಸಂಸ್ಥೆಯ ಕಚೇರಿ ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ ಆಪರೇಟಿವ್ ಮ್ಯಾನೇಜ್‌ಮೆಂಟ್, ಸಹಕಾರ ಭವನ,#1/3, 2ನೇ ಮಹಡಿ, 3ನೇ ಮುಖ್ಯ ರಸ್ತೆ, ಕನ್ನಡ ಸಾಹಿತ್ಯ ಪರಿಷತ್ ಹಿಂಭಾಗ, ಚಾಮರಾಜಪೇಟೆ, ಬೆಂಗಳೂರು–18 ಇಲ್ಲಿಗೆ ಖುದ್ದಾಗಿ ಭೇಟಿ ನೀಡಬಹುದು ಎಂದು ಪ್ರಾಚಾರ್ಯರಾದ ಶೈಲಾ ಬಿ.ವಿ. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶೇಷ ಆಯ್ಕೆ ಪ್ರಕ್ರಿಯೆ

ರಾಮನಗರ

2026–27ನೇ ಸಾಲಿಗೆ ಕ್ರೀಡಾ ವಸತಿ ನಿಲಯಕ್ಕೆ ಮತ್ತು ರಾಜ್ಯದ ಇತರೆ ಜಿಲ್ಲೆಗಳಲ್ಲಿರುವ ಎಲ್ಲಾ ಕ್ರೀಡಾ ಶಾಲೆ/ನಿಲಯಗಳಿಗೆ 8ನೇ ತರಗತಿ ಹಾಗೂ ಪ್ರಥಮ ಪಿ.ಯು.ಸಿ ಮಟ್ಟದ ಅರ್ಹ ಕ್ರೀಡಾಪಟುಗಳನ್ನು ಆಯ್ಕೆ ಮಾಡಿ ಪ್ರವೇಶ ಅವಕಾಶವನ್ನು ಕಲ್ಪಿಸುವ ನಿಟ್ಟಿನಲ್ಲಿ ಈಗಾಗಲೇ ಜಿಲ್ಲಾ ವಿಭಾಗ ಹಾಗೂ ರಾಜ್ಯ ಮಟ್ಟದಲ್ಲಿ ಆಯ್ಕೆ ಪ್ರಕ್ರಿಯೆ ನಡೆಸಲಾಗಿರುತ್ತದೆ.

ಆದರೆ ಈ ಆಯ್ಕೆ ಪ್ರಕ್ರಿಯೆಗಳಲ್ಲಿ ವಿವಿಧ ಕಾರಣಗಳಿಂದ ಭಾಗವಹಿಸಲು ಸಾಧ್ಯವಾಗದ ಅಭ್ಯರ್ಥಿಗಳಿಗೆ ಮತ್ತೊಂದು ಅವಕಾಶ ನೀಡುವ ದೃಷ್ಟಿಯಿಂದ ರಾಜ್ಯದ ಕೆಲವು ಸ್ಥಳಗಳಲ್ಲಿ ವಿಶೇಷ ಆಯ್ಕೆ ಪ್ರಕ್ರಿಯೆಗಳನ್ನು ಆಯೋಜಿಸಲು ತೀರ್ಮಾನಿಸಲಾಗಿರುತ್ತದೆ. ವಿಶೇಷ ಆಯ್ಕೆ ಪ್ರಕ್ರಿಯೆಯು ಎರಡು ಹಂತದ ಆಯ್ಕೆ ಪ್ರಕ್ರಿಯೆಗಳನ್ನು ಒಳಗೊಂಡಿರುತ್ತದೆ.

ತರಬೇತುದಾರರಿಂದ ಕ್ರೀಡಾವಾರು ಆಯ್ಕೆ ಪ್ರಕ್ರಿಯೆ, ಕ್ರೀಡಾ ವಿಜ್ಞಾನ ಕೇಂದ್ರದಿಂದ ಕ್ರೀಡಾ ವೈಜ್ಞಾನಿಕ ಪರೀಕ್ಷೆ ಆಯ್ಕೆ ಪ್ರಕ್ರಯೆಗಳನ್ನು ಕೈಗೊಂಡಿದ್ದು, ನೀಡಿರುತ್ತಿರುವ ಸೌಲಭ್ಯವನ್ನು ಸದುಪಯೋಗಪಡೆದುಕೊಳ್ಳಬಹುದು.

ಹಂತ–1ರಲ್ಲಿ ತರಬೇತುದಾರರಿಂದ ಕ್ರೀಡಾವಾರು ಆಯ್ಕೆ ಪ್ರಕ್ರಿಯೆ: ಜೂನ್ 1 ರಂದು ಬೆಳಿಗ್ಗೆ 9 ಗಂಟೆಗೆ ಬೆಳಗಾವಿ ಜಿಲ್ಲಾ ಕ್ರೀಡಾಂಗಣದಲ್ಲಿ ವಾಲಿಬಾಲ್, ಸೈಕ್ಲಿಂಗ್, ಕುಸ್ತಿ, ಜುಡೋ, ತುಮಕೂರಿನ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಅಥ್ಲೆಟಿಕ್ಸ್, ಕಬಡ್ಡಿ, ಜಿಮ್ನಾಸ್ಟಿಕ್ಸ್, ಫುಟ್ಬಾಲ್, ಬೆಂಗಳೂರು ಶ್ರೀ ಕಂಠೀರವ ಕ್ರೀಡಾಂಗಣದಲ್ಲಿ ಬಾಸ್ಕೆಟ್‌ಬಾಲ್, ಅರ್ಚರಿ, ಫೆನ್ಸಿಂಗ್, ಬಾಕ್ಸಿಂಗ್ ಹಾಗೂ ಬೆಂಗಳೂರು ಅಕ್ಕಿತಿಮ್ಮನಹಳ್ಳಿ ಹಾಕಿ ಕ್ರೀಡಾಂಗಣದಲ್ಲಿ ಹಾಕಿಯ ಆಯ್ಕೆ ಪ್ರಕ್ರಿಯೆ ನಡೆಸಲಾಗುವುದು.

ಹಂತ–2ರಲ್ಲಿ ಕ್ರೀಡಾ ವಿಜ್ಞಾನ ಕೇಂದ್ರದಿಂದ ಕ್ರೀಡಾ ವೈಜ್ಞಾನಿಕ ಪರೀಕ್ಷೆ ಆಯ್ಕೆ ಪ್ರಕ್ರಿಯೆ: ಬೆಳಗಾವಿ ಮತ್ತು ತುಮಕೂರು ಜಿಲ್ಲೆಗಳಲ್ಲಿ ಜೂನ್ 1ರಲ್ಲಿ ನಡೆಯುವ ವಿಶೇಷ ಆಯ್ಕೆ ಪ್ರಕ್ರಿಯೆಯಲ್ಲಿ 8ನೇ ತರಗತಿ ಮತ್ತು ಪ್ರಥಮ ಪಿಯುಸಿ ಪ್ರವೇಶಕ್ಕೆ ಆಯ್ಕೆಯಾದ ಕ್ರೀಡಾಪಟುಗಳು ಜೂನ್ 4ರಂದು ಬೆಳಿಗ್ಗೆ 8.30ಕ್ಕೆ ಬೆಂಗಳೂರಿನ ಶ್ರೀ ಕಂಠೀರವ ಕ್ರೀಡಾಂಗಣದ ಸೆಂಟರ್ ಫಾರ್ ಸ್ಪೋರ್ಟ್ಸ್ ಸೈನ್ಸ್ ಗೇಟ್ ನಂ. 7 ಮತ್ತು 8ರಲ್ಲಿ ವರದಿ ಮಾಡಿಕೊಳ್ಳಬೇಕು ಅಥವಾ ಜೂನ್ ಬೆಂಗಳೂರಿನ ಶ್ರೀ ಕಂಠೀರವ ಕ್ರೀಡಾಂಗಣ ಮತ್ತು ಅಕ್ಕಿತಿಮ್ಮನಹಳ್ಳಿ ಹಾಕಿ ಕ್ರೀಡಾಂಗಣದಲ್ಲಿ ಜೂನ್ 1ರಲ್ಲಿ ನಡೆಯುವ ವಿಶೇಷ ಆಯ್ಕೆ ಪ್ರಕ್ರಿಯೆಯಲ್ಲಿ 8ನೇ ತರಗತಿ ಮತ್ತು ಪ್ರಥಮ ಪಿಯುಸಿ ಪ್ರವೇಶಕ್ಕೆ ಆಯ್ಕೆಯಾದ ಕ್ರೀಡಾಪಟುಗಳು ಜೂನ್ 5ರಂದು ಬೆಳಿಗ್ಗೆ 8.30ಕ್ಕೆ ಬೆಂಗಳೂರಿನ ಶ್ರೀ ಕಂಠೀರವ ಕ್ರೀಡಾಂಗಣದ ಸೆಂಟರ್ ಫಾರ್ ಸ್ಪೋರ್ಟ್ಸ್ ಸೈನ್ಸ್ ಗೇಟ್ ನಂ. 7 ಮತ್ತು 8ರಲ್ಲಿ ವರದಿ ಮಾಡಿಕೊಳ್ಳಬೇಕು.

ಸೆಂಟರ್ ಫಾರ್ ಸ್ಪೋರ್ಟ್ಸ್ ಸೈನ್ಸ್ ಕಚೇರಿ ಮೊ.ಸಂ: 9113535733 ಅಥವಾ ಸೆಂಟರ್ ಫಾರ್ ಸ್ಪೋರ್ಟ್ಸ್ ಸೈನ್ಸ್ ಕಚೇರಿಯ ನಯನಾ ಮೊ.ಸಂ: 9606670580.

ಹೆಚ್ಚಿನ ಮಾಹಿತಿಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಂಗಳೂರು ದಕ್ಷಿಣ ಜಿಲ್ಲಾ ಕಚೇರಿಗೆ ಖುದ್ದು ಭೇಟಿ ನೀಡಿ ಅಥವಾ ಅಧೀಕ್ಷಕರು ಮೊ.ಸಂ: 9945533431 ಅನ್ನು ಸಂಪರ್ಕಿಸುವಂತೆ ಬೆಂಗಳೂರು ದಕ್ಷಿಣ ಜಿಲ್ಲೆಯ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉಗಾಂಡ ಮಹಿಳೆಗೆ ಎಬೋಲಾ ನೆಗೆಟಿವ್

ಬೆಂಗಳೂರು

ಎಬೋಲಾ ವೈರಸ್‌ನ ಲಕ್ಷಣಗಳು ಕಂಡುಬಂದಿದ್ದ ಶಂಕಿತ ಉಗಾಂಡಾದ 28 ವರ್ಷದ ಮಹಿಳೆಯ ತಪಾಸಣಾ ವರದಿಯಲ್ಲಿ ಸೋಂಕು ಇಲ್ಲ ಎಂಬುದು ದೃಢಪಟ್ಟಿದೆ. ಹೀಗಾಗಿ, ಜನರು ಆತಂಕಕ್ಕೆ ಒಳಗಾಗುವುದು ಬೇಡ ಎಂದು ಸಚಿವ ದಿನೇಶ್ ಗುಂಡೂರಾವ್ ಬುಧವಾರ ತಿಳಿಸಿದ್ದಾರೆ.

ಅಧಿಕಾರಿಗಳ ಪ್ರಕಾರ, ಎಬೋಲಾ ವೈರಸ್ ಪೀಡಿತ ಪ್ರದೇಶದಿಂದ ಬಂದ ಮಹಿಳೆಯೊಬ್ಬರಿಗೆ ಮಂಗಳವಾರ ದೇಹದ ನೋವಿನಂತಹ ಸೌಮ್ಯ ಲಕ್ಷಣಗಳು ಕಾಣಿಸಿಕೊಂಡಿತ್ತು. ನಂತರ ಅವರನ್ನು ಹೋಟೆಲ್‌ನಿಂದ ಸರ್ಕಾರಿ ಸಾಂಕ್ರಾಮಿಕ ರೋಗಗಳ ಆಸ್ಪತ್ರೆಗೆ ಸ್ಥಳಾಂತರಿಸಲಾಯಿತು.

# ‘ರೈತರ ಜಮೀನು ಬಲವಂತದ ಸ್ವಾಧೀನ ನಿಲ್ಲಲಿ’

ತುಮಕೂರು



ಕೈಗಾರಿಕೆ ಉದ್ದೇಶಕ್ಕಾಗಿ ರಾಜ್ಯ ಸರ್ಕಾರ ರೈತರ ಕೃಷಿ ಜಮೀನನ್ನು ಬಲವಂತವಾಗಿ ಸ್ವಾಧೀನಪಡಿಸಿಕೊಳ್ಳುವುದನ್ನು ನಿಲ್ಲಿಸಬೇಕು. ಕೆಐಎಡಿಬಿಯ ಈ ದಂಧೆ ತಡೆಗೆ ರಾಜ್ಯಪಾಲರು ಮಧ್ಯಪ್ರವೇಶಿಸಬೇಕು ಎಂದು ಸಂಯುಕ್ತ ಜನತಾದಳ ರಾಜ್ಯ ಪ್ರಧಾನ ಕಾರ್ಯದರ್ಶಿ ಕೆ.ಆರ್. ರಂಗನಾಥ್ ಹಾಗೂ ಕಾರ್ಯದರ್ಶಿ ಹೆಚ್.ಸಿ. ಸುರೇಶ್ ಮನವಿ ಮಾಡಿದರು.

ಮಂಗಳವಾರ ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಇವರು, ಸರ್ಕಾರ ಕೃಷಿಯನ್ನು ಕಡೆಗಣಿಸಿ ಕೈಗಾರಿಕೆಗಳ ಸ್ಥಾಪನೆಗೆ ಹೆಚ್ಚು ಒತ್ತು ನೀಡುತ್ತಿರುವುದರ ಹಿಂದ ದುರುದ್ದೇಶವಿದೆ. ಬಡದಿ ಬಳಿ ಕೆಐಎಡಿಬಿ ರೈತರ ಜಮೀನು ಸ್ವಾಧೀನಪಡಿಸುವುದನ್ನು ಕೈಬಿಡಬೇಕು ಎಂದು ಒತ್ತಾಯಿಸಿದರು.

ಹೆಚ್.ಸಿ.ಸುರೇಶ್ ಮಾತನಾಡಿ, ಈಗಿನ ರಾಜಕೀಯ ಪಕ್ಷಗಳಲ್ಲಿ, ಸರ್ಕಾರಗಳಲ್ಲಿ ಮೌಲ್ಯಾಧಾರಿತ ರಾಜಕಾರಣ ಕಾಣುತ್ತಿಲ್ಲ, ಜನರ ಸಮಸ್ಯೆ ಕೇಳುವ ಸೌಜನ್ಯವಿಲ್ಲ, ಜನರ ಅಭಿಪ್ರಾಯಕ್ಕೆ ಮನ್ನಣೆ ಇಲ್ಲ. ಬಿಡದಿ ಬಳಿಯ ರೈತರು ತಮ್ಮ ಜಮೀನು ನೀಡುವುದಿಲ್ಲ ಎಂದು ಹೋರಾಟ ಮಾಡುತ್ತಿದ್ದರೂ ಸರ್ಕಾರ ಬಲವಂತವಾಗಿ ಜಮೀನು ಪಡೆಯಲು ಹೊರಟಿದೆ. ರೈತರನ್ನು ಅಲ್ಲಿಂದ ಗುಳೆ ಎಬ್ಬಿಸುವ ಹುನ್ನಾರ ನಡೆದಿದೆ. ಇದಕ್ಕೆ ಅವಕಾಶ ಮಾಡಬಾರದು, ರಾಜ್ಯಪಾಲರು ಮಧ್ಯಪ್ರವೇಶಿಸಿ ರೈತವಿರೋಧಿ ಸರ್ಕಾರವನ್ನು ವಜಾಗೊಳಿಸಬೇಕು ಎಂದರು.

ರಾಜ್ಯ ಪ್ರಧಾನ ಕಾರ್ಯದರ್ಶಿ ಕೆ.ಆರ್. ರಂಗನಾಥ್ ಮಾತನಾಡಿ, ಸಂಯುಕ್ತ ಜನತಾದಳ ರಾಜ್ಯಾಧ್ಯಕ್ಷ ಮಹಿಮಾ ಪಟೇಲ್ ಅವರು ಸಾಮಾಜಿಕ ಚಿಂತನೆ, ಸಮಾನತೆಯ ತತ್ವ ಆದರ್ಶಗಳೊಂದಿಗೆ ಪಕ್ಷವನ್ನು ಮುನ್ನಡೆಸುತ್ತಿದ್ದಾರೆ.

ಇದೇ ಆಶಯ ಹೊಂದಿರುವ ನಾಯಕರು ಜೆಡಿಯು ಸೇರಲು ಸ್ವಾಗತಿಸುತ್ತೇವೆ. ಪಕ್ಷವನ್ನು ಸಂಘಟನೆ ಮಾಡುತ್ತಾ ಮುಂಬರುವ ಚುನಾವಣೆಗಳಲ್ಲಿ ಜೆಡಿಯು ಸಕ್ರಿಯವಾಗಿ ಪಾಲ್ಗೊಳ್ಳುತ್ತದೆ. ಪಕ್ಷದ ಅಭ್ಯರ್ಥಿಗಳು ಚುನಾವಣೆಯಲ್ಲಿ ಸ್ಪರ್ಧಿಸುತ್ತಾರೆ ಎಂದರು.

ಆಗ್ನೇಯ ಪದವಿಧರ ಕ್ಷೇತ್ರದ ಜೆಡಿಯು ಅಭ್ಯರ್ಥಿಯಾಗಿ ಡಾ.ಕೆ. ನಾಗರಾಜ್ ಅವರನ್ನು ಘೋಷಿಸಿದ್ದು ಅವರು ಕ್ಷೇತ್ರದಾದ್ಯಂತ ಪ್ರಚಾರ ಮಾಡುತ್ತಿದ್ದಾರೆ. ಮತದಾರರ ನೋಂದಣಿಗೂ ಹೆಚ್ಚು ಆಸಕ್ತಿಯಿಂದ ಕೆಲಸ ಮಾಡುತ್ತಿದ್ದಾರೆ. ಪ್ರಬಲ ಅಭ್ಯರ್ಥಿಯಾಗಿ ನಾಗರಾಜು ಸ್ಪರ್ಧೆಯಲ್ಲಿರುತ್ತಾರೆ ಎಂದು ಹೇಳಿದರು.

ರಾಜ್ಯ ಉಪಾಧ್ಯಕ್ಷ ಟಿ.ವಿ. ಶಿವರಾಮು ಮಾತನಾಡಿ, ಮೈಸೂರಿನ ಸೌಂದರರಾಜ್ ಎಂಬಾತ ಬಡ ಮಹಿಳೆಯರಿಂದ ಚಿನ್ನ ಅಡವಿಡಿಸಿಕೊಂಡು ಮಾರಾಟ ಮಾಡಿ ಕೋಟ್ಯಾಂತರ ರೂ. ವಂಚನೆ ಮಾಡಿದ್ದಾನೆ. ಪೊಲೀಸ್ ಇಲಾಖೆ ಆತನ ವಿರುದ್ಧ ಕ್ರಮ ತೆಗೆದುಕೊಳ್ಳುವ ಬಗ್ಗೆ ನಂಬಿಕೆ ಇಲ್ಲ. ಸೌಂದರರಾಜ್ ವಿರುದ್ಧ ಈಗಾಗಲೇ 250ಕ್ಕೂ ಹೆಚ್ಚು ಪ್ರಕರಣ ದಾಖಲಾಗಿವೆ. ಪ್ರಭಾವಿಯಾಗಿರುವ ಆರೋಪಿಯ ಪ್ರಕರಣಗಳು ಮುಚ್ಚಿಹೋಗುವ ಸಾಧ್ಯತೆಗಳಿವೆ. ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ತನಿಖಾ ಸಮಿತಿ ರಚಿಸಿ ತನಿಖೆ ನಡೆಸಬೇಕು. ಚಿನ್ನ ಕಳೆದುಕೊಂಡ ಮಹಿಳೆಯರಿಗೆ ನ್ಯಾಯ ಕೊಡಿಸಬೇಕು ಎಂದು ಗೃಹ ಸಚಿವ ಡಾ.ಜಿ. ಪರಮೇಶ್ವರ್ ಅವರನ್ನು ಒತ್ತಾಯಿಸಿದರು. ನಗರ ಕಾರ್ಯದರ್ಶಿ ಕುದೂರು ಬಸಣ್ಣ ಮತ್ತಿತರರು ಹಾಜರಿದ್ದರು.

# ‘ಸೋಲೇ ಗೆಲುವಿನ ಮೆಟ್ಟಿಲು’

ತುಮಕೂರು



ಶಿಕ್ಷಣವೆಂಬುದು ನಿಮ್ಮನ್ನು ಗುಡಿಸಿಲಿನಿಂದ ಅರಮನೆಗೆ ಕರೆದುಕೊಂಡು ಹೋಗುವ ರಹದಾರಿ. ಸೋಲೇ ಗೆಲುವಿನ ಮೆಟ್ಟಿಲು ಎಂಬಂತೆ, ಕಡಿಮೆ ಅಂಕ ಬಂತೆಂದು ಕುಗ್ಗದೆ, ಆತ್ಮಸ್ಥೈಯದಿಂದ ಮುನ್ನುಗ್ಗಿದ್ದರೆ ಮುಂದೆ ಸಾಧಕರ ಪಟ್ಟಿಯಲ್ಲಿ ನಿಮ್ಮ ಹೆಸರು ಇರುತ್ತದೆ ಎಂದು ಜಾನಪದ ಕಲಾವಿದ ಡಾ.ಅಮ್ಮ ರಾಮಚಂದ್ರ.ಜಿ. ಅಭಿಪ್ರಾಯ ಪಟ್ಟಿದ್ದಾರೆ.

ನಗರದ ರೈಲ್ವೆ ನಿಲ್ದಾಣ ರಸ್ತೆಯಲ್ಲಿರುವ ಸರಕಾರಿ ಪ್ರಥಮ ದರ್ಜೆ ಕಾಲೇಜು ತುಮಕೂರಿನ 2025–26ನೇ ಸಾಲಿನ ಸಾಂಸ್ಕೃತಿಕ, ಕ್ರೀಡೆ, ಎನ್.ಎಸ್.ಎಸ್, ಯುವ ರೆಡ್ ಕ್ರಾಸ್, ಐಕ್ಯೂಎಸಿ ಹಾಗೂ ಪಠ್ಯೇತರ ಚಟುವಟಿಕೆಗಳ ಸಮಾರೋಪ ಸಮಾರಂಭ ಸಂಭ್ರಮ–2026ಗೆ ಚಾಲನೆ ನೀಡಿ ಮಾತನಾಡುತಿದ್ದ ಅವರು, ಎಸ್.ಎಸ್.ಎಲ್.ಸಿಯಲ್ಲಿ ನಾಲ್ಕನೇ ಬಾರಿಗೆ 240 ಅಂಕ ಪಡೆದ ಪಾಸಾದ ನಾನು, ಎಂ.ಎ.ಯಲ್ಲಿ ಚಿನ್ನದ ಪದಕ ಪಡೆದೆ,ಸೂಕ್ತ ಮಾರ್ಗದರ್ಶನ ಮತ್ತು ಪೋಷಕರ ಪ್ರೋತ್ಸಾಹ ದೊರೆತರೆ ದೌರ್ಬಲ್ಯಗಳನ್ನು ಮೆಟ್ಟಿನಿಂತು, ಸಾಧನೆಯ ಕಡೆಗೆ ಹೆಜ್ಜೆ ಹಾಕಲು ಸ್ಫೂರ್ತಿ ದೊರೆಯುತ್ತದೆ.

ಸೋತವರನ್ನು ಸೋಲಿಸುವುದೇ ಸಂಭ್ರಮವಲ್ಲ. ಗೆದ್ದವರನ್ನು ಸೋಲಿಸುವುದು ನಿಜವಾದ ಸಂಭ್ರಮ.ಪೋಷಕರ ಕಣ್ಣಲ್ಲಿ ಆನಂದ ಭಾಷ್ಪ ಬರುವಂತೆ ಮಾಡುವುದೇ ನಮ್ಮ ಗುರಿಯಾಗಬೇಕು ಎಂದರು.

ಶಾಲಾ ಕಾಲೇಜು ದಿನಗಳಲ್ಲಿ ಹಾಡುಗಾರನಾಗಿ, ರಂಗೋಲಿ ಕಲೆಗಾರನಾಗಿ ಎಲ್ಲೆಡೆ ಸ್ಪರ್ಧೆ ಮಾಡುತ್ತಿದೆ. ಇದನ್ನು ಗುರುತಿಸಿದ ಹಿರಿಯರು ನನ್ನ ಬೆನ್ನು ತಟ್ಟಿದರು.ಇದರ ಭಾಗವಾಗಿ ಜಾನಪದ ಹಾಡುಗಾರಿಕೆಯಲ್ಲಿ ಚಿನ್ನಪದಕ ಪಡೆಯುವುದರ ಜೊತೆಗೆ, 9 ವಿದೇಶಗಳಲ್ಲಿ ಹಾಡುಗಾರಿಕೆ ಮಾಡಲು ಅವಕಾಶ ದೊರೆಯಿತು. ಇದಕ್ಕೆ ವೇದಿಕೆ ಕಲ್ಪಿಸಿದ್ದು ಯುವಜನೋತ್ಸವ. ಕಾಲೇಜಿನ ಇಂತಹ ಸಾಂಸ್ಕೃತಿಕ ವೇದಿಕೆಗಳು, ಯುವ ಜನೋತ್ಸವಗಳನ್ನು ಎಂದಿಗೂ ತಪ್ಪಿಸಿಕೊಳ್ಳಬೇಡಿ, ಅವುಗಳಿಂದ ನಿಮ್ಮ ಜೀವನವೇ ಬದಲಾಗಲಿದೆ ಎಂದು ತಮ್ಮ ಬದುಕನ್ನೇ ಉದಾಹರಿಸಿ, ವಿವರಿಸಿದ ಡಾ.ಅಮ್ಮ ರಾಮಚಂದ್ರ ಜೀ, ಚಲನಚಿತ್ರ, ಭಾವಚಿತ್ರ, ತತ್ವಪದ ಗಾಯನ ಮಾಡಿ ಯುವಜನರನ್ನು ರಂಜಿಸಿದರು.

ಅಂತರರಾಷ್ಟ್ರೀಯ ಅಥ್ಲೇಟ್ ಶ್ರೀಮತಿ ತೇಜಶ್ವಿನಿ ಮಾತನಾಡಿ, ಕ್ರೀಡೆ ಸೋಲು ಗೆಲುವನ್ನು ಸಮಾನವಾಗಿ ಸ್ವೀಕರಿಸುವ ಗುಣ ಕಲಿಸುವುದರ ಜೊತೆಗೆ,ಗೆಲುವಿನ ದಾರಿಯನ್ನು ಸುಲಭ ಮಾಡುತ್ತದೆ. ಕ್ರೀಡಾಪಟುಗಳಿಗೆ ಹೆಚ್ಚಿನ ಅವಕಾಶಗಳಿದ್ದು, ಎಲ್ಲಾ ಇಲಾಖೆಗಳ ಉದ್ಯೋಗದಲ್ಲಿ ಶೇ2ರ ಮೀಸಲಾತಿ ಕಲ್ಪಿಸಲಾಗಿದೆ. ಯುವಜನರು ಇದರ ಸದುಪಯೋಗ ಪಡೆದುಕೊಂಡು, ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳುವಂತೆ ಸಲಹೆ ನೀಡಿದರು.

# ಧರಣಿ ಸಮೃದ್ಧಿ ಸಮಾರೋಪ ಸಮಾರಂಭ

ವಿಜಯಪುರ


ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬಾಗಲಕೋಟೆ, ತೋಟಗಾರಿಕಾ ಮಹಾವಿದ್ಯಾಲಯ ಬೆಂಗಳೂರು, ಕೃಷಿ ತೋಟಗಾರಿಕೆ ಹಾಗೂ ಇತರೆ ಅಭಿವೃದ್ಧಿ ಇಲಾಖೆಗಳ ಸಹಯೋಗದೊಂದಿಗೆ ಬಿಸ್ಸಿ ತೋಟಗಾರಿಕೆ ಅಂತಿಮ ವರ್ಷದ ವಿದ್ಯಾರ್ಥಿಗಳ, ಗ್ರಾಮೀಣ ತೋಟಗಾರಿಕೆ ಕಾರ್ಯಾನುಭವ ಕಾರ್ಯಕ್ರಮ 2025–26 ‘ಧರಣಿ ಸಮೃದ್ಧಿ’ ಸಮಾರೋಪ ಸಮಾರಂಭ ಮತ್ತು ತೋಟಗಾರಿಕೆ ವಸ್ತು ಪ್ರದರ್ಶನವನ್ನು ಮೇ.28 ರಂದು ಬೆಳಿಗ್ಗೆ 11 ಗಂಟೆಗೆ ಹೋಬಳಿಯ ಬಿಜ್ಜವಾರ ಸರಕಾರಿ ಪ್ರೌಢಶಾಲೆಯ ಆವರಣದಲ್ಲಿ ಆಯೋಜನೆ ಮಾಡಲಾಗಿದೆ ಎಂದು ಸಂಯೋಜಕ ಡಾ.ಇಟಗಿ ಪ್ರಭಾಕರ್ ತಿಳಿಸಿದ್ದಾರೆ.

ಈ ಕುರಿತು ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ಸಮಾರೋಪ ಸಮಾರಂಭವನ್ನು ಆದಿ ಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಶ್ರೀ ಡಾ.ನಿರ್ಮಲನಂದನಾಥ ಸ್ವಾಮೀಜಿ ಅವರು ದಿವ್ಯ ಸಾನಿಧ್ಯ ವಹಿಸುವರು, ಮಂಗಳನಾಥ ಸ್ವಾಮೀಜಿ ಇರಲಿದ್ದಾರೆ. ಬೆಳೆ ಪ್ರಾತ್ಯಕ್ಷಿಕೆ ಮತ್ತು ಮಳಿಗೆಗಳ ಸಮುಚ್ಚಯಗಳ ಉದ್ಘಾಟನೆಯನ್ನು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬಾಗಲಕೋಟೆಯ ಕುಲಪತಿ ಡಾ.ವಿಷ್ಣುವರ್ಧನ, ಐ.ಆರ್.ಎಸ್.ಆಯುಕ್ತ ಡಾ.ಕೊಟ್ರಸ್ವಾಮಿ.ಎಂ, ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕ ಜೆ.ಗುಣವಂತ, ಕೃಷಿ ಇಲಾಖೆ ಜಂಟಿ ನಿರ್ದೇಶಕಿ ಕಲಾವತಿ, ಪಶು ಪಾಲನಾ ಇಲಾಖೆಯ ಉಪನಿರ್ದೇಶಕ ಡಾ.ಜಗದೀಶ್ ಕುಮಾರ್, ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಲಿದ್ದಾರೆ.

ಸುತ್ತಮುತ್ತಲಿನ ಗ್ರಾಮಗಳ ರೈತರಿಗೆ ಉಚಿತ ಪ್ರವೇಶವಿರಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ರೈತರು, ಭಾಗವಹಿಸಿ, ಮಳಿಗೆಗಳನ್ನು ವೀಕ್ಷಿಸುವುದರ ಜೊತೆಗೆ ಇಲ್ಲಿ ಸಿಗುವಂತಹ ಮಾಹಿತಿಗಳನ್ನು ಸಂಗ್ರಹಿಸಿಕೊಂಡು, ಕೃಷಿ ಮತ್ತು ತೋಟಗಾರಿಕೆಗಳಲ್ಲಿ ತೊಡಗಿಸಿಕೊಳ್ಳುವ ಮೂಲಕ ಆರ್ಥಿಕವಾಗಿ ಸ್ವಾವಲಂಬಿಗಳಾಗಬೇಕು ಎಂದರು.

# *ಮಾವಿನ ಸೀಜನ್‌ನಲ್ಲೂ ದ್ರಾಕ್ಷಿಗೆ ಉತ್ತಮ ಬೇಡಿಕೆ*

ವಿಜಯಪುರ



*ರಾಜ್ಯಾದ್ಯಂತ ಹಣ್ಣಿನ ಮಾರುಕಟ್ಟೆಯಲ್ಲಿ ತರಹವಾರಿ ಮಾವಿನ ಫಸಲು ಕಾಲಿಟ್ಟಿದೆ. ಮಾರುಕಟ್ಟೆಗಳಲ್ಲಿ ಮಾವು ವಿಜೃಂಭಿಸುತ್ತಿರುವುದರ ಪೈಪೋಟಿಯ ನಡುವೆಯೂ, ಗ್ರಾಮೀಣ ಭಾಗದಲ್ಲಿ, ರೈತರು ಬೆಳೆದಿರುವ ವಿವಿಧ ತಳಿಯ ದ್ರಾಕ್ಷಿ ಬೆಳೆಯ ಬೆಲೆ ಸುಧಾರಣೆಯಲ್ಲಿರುವುದು ರೈತಾಪಿ ವರ್ಗದಲ್ಲಿ ನಿರಾಳತೆ ಮೂಡಿಸಿದೆ.*

*ಸಹಜವಾಗಿ, ಬೇಸಿಗೆಯಲ್ಲಿ ಆರಂಭವಾಗುವ ಮಾವಿನ ಸೀಜನ್ ನಲ್ಲಿ, ದ್ರಾಕ್ಷಿಗೆ ಬೇಡಿಕೆ ಕುಸಿಯುತ್ತಿತ್ತು. ಇದರಿಂದ ದ್ರಾಕ್ಷಿ ಬೆಳೆಗಾರರು ವ್ಯಾಪಾರಿಗಳ ಬಳಿಗೆ ಹೋಗಿ, ಅಂಗಲಾಚಿಕೊಂಡು, ಬೆಳೆ ಖರೀದಿಸುವಂತೆ ದುಂಬಾಲು ಬೀಳಬೇಕಾಗಿತ್ತು. ಆದರೆ, ಈ ಬಾರಿ, ದ್ರಾಕ್ಷಿ ಬೆಳೆಗಾರರಿಗೆ ಅಂತಹ ಹೊಡೆತ ಬಿದ್ದಿಲ್ಲವೆಂಬುದು ಕೊಂಚ ಸಮಾಧಾನ ತರಿಸಿದೆ.*

*ಈ ಬಾರಿ ಕಡಿಮೆ ಪ್ರಮಾಣದಲ್ಲಿ ಮಳೆಯಾಗಿರುವುದರಿಂದ ಉತ್ತಮ ಗುಣಮಟ್ಟದಲ್ಲಿ ಬೆಳೆಯಾಗಿರುವುದು, ರೋಗಗಳು ನಿಯಂತ್ರಣದಲ್ಲಿರುವುದು, ಮತ್ತು ಬೇಸಿಗೆಯಲ್ಲಿ ಬಿಸಿಲಿನ ತಾಪಮಾನದಿಂದಾಗಿ ತೋಟಗಳಲ್ಲಿ ಬೆಳೆ ಕಚ್ಚದಿದ್ದ ಕಾರಣದಿಂದಲೂ ದ್ರಾಕ್ಷಿಗೆ ಹೆಚ್ಚಿನ ಬೇಡಿಕೆ ಬಂದಿದೆ.*

*ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಹೆಚ್ಚಾಗಿ ಬೆಳೆಯುವಂತಹ ಬೆಂಗಳೂರು ಬ್ಲೂ ದ್ರಾಕ್ಷಿ ಕೆ.ಜಿ.45 ರೂಪಾಯಿ, ದಿಲ್ ಖುಶ್ 50, ರೆಡ್ ಗ್ಲೋಬ್ 120, ಶರತ್ 80 ರೂಪಾಯಿಗೆ ಮಾರಾಟವಾಗುತ್ತಿರುವುದು ರೈತರ ಮುಖದಲ್ಲಿ ಮಂದಹಾಸ ಮೂಡಿಸಿದೆ.*

*ಬೇಸಿಗೆಯ ತಾಪಮಾನ ಹೆಚ್ಚಾಗಿರುವ ಕಾರಣ, ಕೊಳವೆಬಾವಿಗಳಲ್ಲಿ ನೀರಿನ ಇಳುವರಿ ಕಡಿಮೆಯಾಗಿರುವ ಕಾರಣ, ಟ್ಯಾಂಕರುಗಳ ಮೂಲಕ ತೋಟಗಳಿಗೆ ನೀರು ಹಾಯಿಸಿ, ಕಷ್ಟಪಟ್ಟು ಬೆಳೆದಿರುವ ದ್ರಾಕ್ಷಿ ಬೆಳೆಗೆ ಈ ಬಾರಿ ಸಮಾಧಾನಕರವಾದ ಬೆಲೆಯಿರುವುದರಿಂದ ರೈತರು, ಹೂಡಿಕೆ ಮಾಡಿರುವ ಬಂಡವಾಳವನ್ನು ಮಾಡಿಕೊಳ್ಳುವುದರಲ್ಲಿ ಅನುಮಾನವಿಲ್ಲ. ಲಾಭಾಂಶವಿಲ್ಲದಿದ್ದರೂ ಸಾಲಗಾರರಾಗದಷ್ಟರ ಮಟ್ಟಿಗೆ ಬೆಲೆ ಸುಧಾರಣೆಯಲ್ಲಿದೆ ಎಂದು ಕೆಲ ರೈತರು ಸಮಾಧಾನ ಪಟ್ಟುಕೊಳ್ಳುತ್ತಿದ್ದಾರೆ.*

*ಈಗ ಮಳೆಗಾಲ ಆರಂಭವಾಗುವ ಕಾರಣ, ಬೇಸಿಗೆಯಲ್ಲಿ ನೀರಿಗಾಗಿ ಪಟ್ಟಂತಹ ಶ್ರಮ ಪಡದಿದ್ದರೂ, ಲಭ್ಯವಿರುವ ನೀರಿನಲ್ಲೆ ಬೆಳೆ ಬೆಳೆಯಬಹುದು, ಆದರೆ, ಮಳೆಗಾಲದಲ್ಲಿ ರೋಗಗಳನ್ನು ನಿಯಂತ್ರಣ ಮಾಡಿಕೊಂಡು, ಬೆಳೆ ಬೆಳೆಯುವುದು ಸ್ವಲ್ಪ ದುಬಾರಿಯಾಗುತ್ತದೆ ಎಂದು ರೈತರು ಹೇಳುತ್ತಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ, 1220 ಹೆಕ್ಟೇರ್ ಪ್ರದೇಶದಲ್ಲಿ, ಸುಮಾರು 1700 ಮಂದಿ ರೈತರು, ವಿವಿಧ ತಳಿಯ ದ್ರಾಕ್ಷಿ ಬೆಳೆಗಳನ್ನು ಬೆಳೆಯುತ್ತಿದ್ದು, ರೈತರಿಗೆ ಅಗತ್ಯವಾಗಿರುವ ಸಲಹೆ ಸೂಚನೆಗಳನ್ನು ನೀಡಲಾಗುತ್ತಿದೆ ಎಂದು ತೋಟಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕ ಆದರ್ಶ್ ತಿಳಿಸಿದರು.*

# ಪ.ಬಂಗಾಳದಲ್ಲಿ ತೈಲನಿಕ್ಷೇಪ ಪತ್ತೆ

ಕೋಲ್ಕತ್ತಾ

ಏಳೆಂಟು ವರ್ಷದ ಹಿಂದೆ ಪಶ್ಚಿಮ ಬಂಗಾಳದಲ್ಲಿ ಪತ್ತೆಯಾಗಿದ್ದ ತೈಲ ನಿಕ್ಷೇಪವೊಂದಕ್ಕೆ ಕೊನೆಗೂ ಒಂದು ಮುಕ್ತಿ ಸಿಕ್ಕಿದೆ. ಉತ್ತರ 24 ಪರಗಣ ಜಿಲ್ಲೆಯಲ್ಲಿರುವ ಅಶೋಕನಗರ್ ಆಯಿಲ್ ಫೀಲ್ಡ್‌ನಲ್ಲಿ ತೈಲ ತೆಗೆಯುವ ಕಾರ್ಯಕ್ಕೆ ಸಿದ್ಧತೆ ಆರಂಭವಾಗಿದೆ.

ಅತಿ ಶೀಘ್ರದಲ್ಲೇ ಇಲ್ಲಿ ತೈಲ ಉತ್ಪಾದನೆ ಶುರುವಾಗಬಹುದು ಎನ್ನಲಾಗಿದೆ. ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬರುತ್ತಲೇ ಈ ಯೋಜನೆಗೆ ಬಲ ಸಿಕ್ಕಿದಂತಾಗಿರುವುದು ಕಾಕತಾಳೀಯವಲ್ಲ.

ರಾಜಕೀಯ ಇಚ್ಛಾ ಶಕ್ತಿ ಕೊರತೆ, ಸ್ಥಳೀಯರ ಗಲಾಟೆಗಳ ಮಧ್ಯೆ ತೈಲ ಉತ್ಪಾದನೆ ಬಹುತೇಕ ನೆನೆಗುದಿಯಲ್ಲಿ ಬಿದ್ದಂತಾಗಿತ್ತು. ಈಗ ಒಎನ್‌ಜಿಸಿ ಸಂಸ್ಥೆಯಿಂದ ತೈಲ ಹೊರಬಗೆಯುವ ಕೆಲಸ ಸುಗಮವಾಗಲಿದೆ. ಇದರೊಂದಿಗೆ ಭಾರತದ ಇಂಧನ ಭದ್ರತೆ ಮತ್ತಷ್ಟು ಹೆಚ್ಚುವ ಸಂಭವ ಇದೆ.

# ಭಾರತವನ್ನು ನಾಲ್ಕನೇ ಆರ್ಥಿಕ ಶಕ್ತಿಯಾಗಿ ಮಾಡಿದ ಮೋದಿಜೀ: ಬಿ.ವೈ.ವಿಜಯೇಂದ್ರ ಅಭಿನಂದನೆ

ಶಿವಮೊಗ್ಗ

ನರೇಂದ್ರ ಮೋದಿಜೀ ಅವರು ಅತಿ ದೀರ್ಘ ಕಾಲದಿಂದ ದೇಶಸೇವೆ ಮಾಡುತ್ತಿರುವ ಚುನಾಯಿತ ಪ್ರಧಾನಮಂತ್ರಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಇಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಯುವಜನತೆ ಈ ದೇಶದ ಬಗ್ಗೆ ವಿಶ್ವಾಸವನ್ನೇ ಕಳಕೊಂಡಿದ್ದರು. ಭಾರತದಲ್ಲಿ ಭ್ರಷ್ಟಾಚಾರರಹಿತ ಆಡಳಿತ ನೀಡಲು ಸಾಧ್ಯವಿಲ್ಲ; ಅಭಿವೃದ್ಧಿ ನೋಡಲು ಅಸಾಧ್ಯ ಎಂದು ಜನತೆ ಭ್ರಮನಿರಸನಗೊಂಡಿದ್ದರು. ಅಂಥ ಕ್ಲಿಷ್ಟಕರ ಸಂದರ್ಭದಲ್ಲಿ ಭಾರತಕ್ಕೂ ಒಂದು ಉಜ್ವಲ ಭವಿಷ್ಯವಿದೆ ಎಂದು ದೇಶದ ಜನರಲ್ಲಿ ವಿಶ್ವಾಸ ಗಳಿಸಿ, 12 ವರ್ಷಗಳ ಕಾಲ ನಿರಂತರವಾಗಿ ದೇಶವನ್ನು ಅಭಿವೃದ್ಧಿಪಥದಲ್ಲಿ ತೆಗೆದುಕೊಂಡು ಹೋಗಿದ್ದಾರೆ. ಜೊತೆಗೇ ಭಾರತವನ್ನು ನಾಲ್ಕನೇ ಆರ್ಥಿಕ ಶಕ್ತಿಯಾಗಿ ಮಾಡಿದ್ದಾರೆ ಎಂದು ಮೆಚ್ಚುಗೆ ಸೂಚಿಸಿದರು.

ರಾಷ್ಟ್ರೀಯ ಅಧ್ಯಕ್ಷ ನಿತಿನ್ ನವೀನ್ ಅವರಿಗೆ ಸಂಘಟನೆ ಬಗ್ಗೆ ಅಪಾರ ಅನುಭವ ಇದೆ ಎಂದು ಪ್ರಶ್ನೆಗೆ ಉತ್ತರಿಸಿದರು. ಸಂಘಟನೆ ಬಲಪಡಿಸುವ




ಇಚ್ಛಾಶಕ್ತಿ ಅವರಿಗೆ ಇದೆ ಎಂದರು. ಮುಂಬರುವ ದಿನಗಳಲ್ಲಿ ಕರ್ನಾಟಕವಷ್ಟೇ ಅಲ್ಲ; ಇಡೀ ದೇಶದಲ್ಲಿ ಬಿಜೆಪಿ ಸಂಘಟನೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಬಹಳ ದೊಡ್ಡ ಪಾತ್ರ ವಹಿಸಲಿದ್ದಾರೆ ಎಂದರು.

ಮಳೆ, ಬೆಳೆಹಾನಿ ಕುರಿತು ಪ್ರಶ್ನೆಗೆ ಉತ್ತರಿಸಿದ ಅವರು, 4ರಂದು ರೈತ ಮೋರ್ಚಾ ಪ್ರಮುಖರ ಸಭೆ ಕರೆಯುತ್ತೇನೆ. ರಾಜ್ಯದಲ್ಲಿ ರೈತಾಪಿ ವರ್ಗವು ಬೀದಿಗಿಳಿಯುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ತಿಳಿಸಿದರು.

# ಬೆಗ್ಲಿ ಹೊಸಹಳ್ಳಿ ಶಾಲೆಯಲ್ಲಿ ಗುರುವಂದನಾ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮದ ವೈಭವ

ಕೋಲಾರ



ಬೆಗ್ಲಿ ಹೊಸಹಳ್ಳಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ 2003–2004ನೇ ಸಾಲಿನ ಹಳೆಯ ವಿದ್ಯಾರ್ಥಿಗಳಿಂದ ಗುರುವಂದನಾ, ಸ್ನೇಹ ಸಮ್ಮಿಲನ ಹಾಗೂ “ಸವಿ ನೆನಪು ಫೌಂಡೇಶನ್” ಉದ್ಘಾಟನಾ ಕಾರ್ಯಕ್ರಮ ಅದ್ದೂರಿಯಾಗಿ ನಡೆಯಿತು. ಹಳೆಯ ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಗ್ರಾಮಸ್ಥರ ಸಮ್ಮುಖದಲ್ಲಿ ನಡೆದ ಕಾರ್ಯಕ್ರಮ ಭಾವನಾತ್ಮಕ ಕ್ಷಣಗಳಿಗೆ ಸಾಕ್ಷಿಯಾಯಿತು.

ಕಾರ್ಯಕ್ರಮವನ್ನು ನಿವೃತ್ತ ಮುಖ್ಯ ಶಿಕ್ಷಕಿ ಪ್ರೇಮಲತಾ ಉದ್ಘಾಟಿಸಿದರು. ಶಾಲೆಯ ಮುಖ್ಯೋಪಾಧ್ಯಾಯರಾದ ಪಿ.ವಿ. ಗಾಯತ್ರಿ ಅಧ್ಯಕ್ಷತೆ ವಹಿಸಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಡಿಐಜಿಪಿ ಡಿ. ದೇವರಾಜ್, ಭಾರತೀಯ ಪರಂಪರೆಯಲ್ಲಿ ಗುರುವಿಗೆ ಅತ್ಯುನ್ನತ ಸ್ಥಾನವಿದೆ ಎಂದು ಹೇಳಿದರು. “ಗುರು ಎಂದರೆ ಕೇವಲ ವ್ಯಕ್ತಿಯಲ್ಲ, ಅದು ಒಂದು ಶಕ್ತಿ. ಪ್ರಕೃತಿಯೇ ನಮಗೆ ಗುರುವಾಗಿದ್ದು, ಜೀವನದ ಅರಿವು ಮತ್ತು ಜಾಗೃತಿಯನ್ನು ಕಲಿಸುತ್ತದೆ. ನಿಜವಾದ ಶಿಕ್ಷಣ ಎಂದರೆ ವ್ಯಕ್ತಿಯೊಳಗಿನ ಬೆಳಕನ್ನು ಹೊರ ಜಗತ್ತಿಗೆ ಪರಿಚಯಿಸುವುದು” ಎಂದು ವಿದ್ಯಾರ್ಥಿಗಳಿಗೆ ಪ್ರೇರಣಾದಾಯಕ ಸಂದೇಶ ನೀಡಿದರು. ಜೊತೆಗೆ “ಸವಿ ನೆನಪು ಫೌಂಡೇಶನ್”ಗೆ ಅಗತ್ಯ ಸಹಕಾರ ಮತ್ತು ನೆರವು ನೀಡುವುದಾಗಿ ಭರವಸೆ ನೀಡಿದರು.

ಬೆಗ್ಲಿ ಹೊಸಹಳ್ಳಿ ಸರ್ಕಾರಿ ಪ್ರೌಢಶಾಲೆಯ ನಿವೃತ್ತ ಶಿಕ್ಷಕ ಹಾಗೂ ಗೆಳೆಯರ ಬಳಗದ ಅಧ್ಯಕ್ಷ ಕಲ್ಲಂಡೂರು ನಾರಾಯಣಸ್ವಾಮಿ ಮಾತನಾಡಿ, ಜೀವನದಲ್ಲಿ ಆಸ್ತಿ, ಅಂತಸ್ತು, ಸಂಪತ್ತು ಶಾಶ್ವತವಲ್ಲ; ಆದರೆ ಕಲಿತ ವಿದ್ಯೆ ಮಾತ್ರ ಸದಾ ಜೊತೆಗಿರುತ್ತದೆ ಎಂದು ಹೇಳಿದರು. ಇಂದಿನ ವೇಗದ ಬದುಕಿನಲ್ಲಿ ಜನರು ಹುಟ್ಟಿದ ಊರು, ಶಾಲೆ ಹಾಗೂ ಗುರುಗಳನ್ನು ಮರೆತಿರುವ ಸಂದರ್ಭದಲ್ಲಿ ಇಂತಹ ಸ್ನೇಹ ಸಮ್ಮಿಲನ ಕಾರ್ಯಕ್ರಮಗಳು ಹಳೆಯ ನೆನಪುಗಳನ್ನು ಮತ್ತೆ ಜೀವಂತಗೊಳಿಸುತ್ತವೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಅಂಗವಾಗಿ “ಸವಿ ನೆನಪು ಫೌಂಡೇಶನ್” ವತಿಯಿಂದ ಶಾಲೆಗೆ ಐದು ಸೀಲಿಂಗ್ ಫ್ಯಾನ್‌ಗಳನ್ನು ಕೊಡುಗೆಯಾಗಿ ನೀಡಲಾಯಿತು. ಇದೇ ವೇಳೆ ಕಲ್ಲಂಡೂರು ನಾರಾಯಣಸ್ವಾಮಿ ಅವರು 50 ಸಾವಿರ ಹಾಗೂ ಡಾ. ನೇತ್ರಾವತಿ ಅವರ ಪತಿ ಡಾ. ಸುಧಾಕರ್ 10 ಸಾವಿರ ಸಹಾಯಧನ ನೀಡಿದರು.

ನಿವೃತ್ತ ಮುಖ್ಯ ಶಿಕ್ಷಕಿ ಪ್ರೇಮಲತಾ ಮಾತನಾಡಿ, “ಸವಿ ನೆನಪು ಫೌಂಡೇಶನ್ ಇನ್ನಷ್ಟು ಬೆಳೆಯಲಿ, ಸಮಾಜಕ್ಕೆ ಮಾದರಿಯಾಗಲಿ. ಸ್ನೇಹ ಮತ್ತು ಒಗ್ಗಟ್ಟು ಹೀಗೆ ಮುಂದುವರಿಯಲಿ” ಎಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ಶಿಕ್ಷಕರಾದ ಎಚ್. ವೆಂಕಟಸ್ವಾಮಿ, ಟಿ. ಮುನಿವೆಂಕಟಪ್ಪ, ಎಂ. ಅಕ್ಕೆಮ್ಮ, ಎನ್.ಆರ್. ನಾಗರಾಜ್, ಸಹಾಯಕಿ ಬಿ. ಲಲಿತಮ್ಮ, ಫೌಂಡೇಶನ್ ಸಂಸ್ಥಾಪಕಿ ಡಾ. ನೇತ್ರಾವತಿ ಸೇರಿದಂತೆ ಹಲವರು ಭಾಗವಹಿಸಿದ್ದರು.

ಭಾರತ ಸಾರಥಿ
BHARATHA SARATHI KANNADA DAILY NEWS PAPER
29/05/2026
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ನಾರಾಯಣಸ್ವಾಮಿಗೆ ಸಚಿವ ಸ್ಥಾನ ನೀಡುವಂತೆ ಒತ್ತಾಯ

ಬಂಗಾರಪೇಟೆ

ಸ್ಥಳೀಯ ಕ್ಷೇತ್ರದ ಶಾಸಕ ಎಸ್.ಎನ್.ನಾರಾಯಣಸ್ವಾಮಿ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ಮಾಜಿ ಪೌರಾಧ್ಯಕ್ಷ ಕೆ. ಚಂದ್ರಾರೆಡ್ಡಿ ಅವರು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಒತ್ತಾಯಿಸಿದರು. ನಗರದಲ್ಲಿನ ತಮ್ಮ ಖಾಸಗಿ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಸ್.ಎನ್. ನಾರಾಯಣಸ್ವಾಮಿ ಅವರು ಮೂರು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದು, ಪಕ್ಷದ ಸಂಘಟನೆಗೆ ಅಪಾರ ಶ್ರಮವಹಿಸಿರುವ ನಾಯಕರು ಎಂದು ಹೇಳಿದರು.

ಕಷ್ಟಕರ ಸಂದರ್ಭಗಳಲ್ಲಿ ಕಾಂಗ್ರೆಸ್ ಪಕ್ಷವನ್ನು ಬಲಪಡಿಸಿ ಬೆಳೆಸಿದ ಕೀರ್ತಿ ನಾರಾಯಣಸ್ವಾಮಿ ಅವರಿಗೆ ಸಲ್ಲುತ್ತದೆ. ಬಂಗಾರಪೇಟೆ ಕ್ಷೇತ್ರವನ್ನು ಕಾಂಗ್ರೆಸ್ ಪಕ್ಷದ ಭದ್ರಕೋಟೆಯಾಗಿ ರೂಪಿಸುವಲ್ಲಿ ಅವರ ಪಾತ್ರ ಮಹತ್ವದ್ದಾಗಿದೆ ಎಂದು ಚಂದ್ರಾರೆಡ್ಡಿ ಅಭಿಪ್ರಾಯಪಟ್ಟರು. ಸ್ಥಳೀಯ ಸಂಸ್ಥೆಗಳಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಲು ಶಾಸಕರ ಪರಿಶ್ರಮವೇ ಪ್ರಮುಖ ಕಾರಣವಾಗಿದೆ ಎಂದರು.

ಇಂತಹ ಹಿರಿಯ ಮತ್ತು ನಿಷ್ಠಾವಂತ ನಾಯಕರಿಗೆ ಸಚಿವ ಸ್ಥಾನ ನೀಡಿದರೆ, ರಾಜ್ಯಾದ್ಯಂತ ಕಾಂಗ್ರೆಸ್ ಪಕ್ಷದ ಸಂಘಟನೆಗೆ ಮತ್ತಷ್ಟು ಬಲ ಸಿಗುತ್ತದೆ. ಕಾರ್ಯಕರ್ತರಲ್ಲಿಯೂ ಉತ್ಸಾಹ ಹೆಚ್ಚಾಗಿ ಪಕ್ಷದ ಬೆಳವಣಿಗೆಗೆ ಸಹಕಾರಿಯಾಗುತ್ತದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

## 'ಝೇಂಕಾರ' ಬ್ರ್ಯಾಂಡ್ ಹೆಸರಿನಲ್ಲಿ ಜೇನುತುಪ್ಪ ಮಾರಾಟ ಮಾಡಲು ಅವಕಾಶ

ಬೆಂ.ಗ್ರಾ.ಜಿಲ್ಲೆ

ಜೇನುತುಪ್ಪದ ಬ್ರಾಂಡ್ ಹೆಸರು "ಝೇಂಕಾರ" ಮತ್ತು (ಜೀವನೋಲ್ಲಾಸಕ್ಕೆ ಜೇನು–) ಎಂಬ ಟ್ಯಾಗ್ಲೈನ್ ಹಾಗೂ ಲೋಗೋ ಮತ್ತು ಪ್ಯಾಕೇಜಿಂಗ್ ವಿನ್ಯಾಸಗಳನ್ನು ಅಭಿವೃದ್ಧಿಪಡಿಸಿ ಟ್ರೇಡ್ ಮಾರ್ಕ್ ರಿಜಿಸ್ಟ್ರಿ ಯಿಂದ ಅಧಿಕೃತವಾಗಿ ಅನುಮೋದನೆ ಪಡೆದು ಝೇಂಕಾರ ಜೇನುತುಪ್ಪದ ಬ್ರಾಂಡ್ ಮಾಲೀಕತ್ವವನ್ನು ತೋಟಗಾರಿಕೆ ಇಲಾಖೆ ಪಡೆದಿದೆ.

ಜೇನುತುಪ್ಪ ಉತ್ಪಾದಕರು ಮತ್ತು ಸಂಗ್ರಾಹಕರರು ಷರತ್ತು ಮತ್ತು ನಿಬಂಧನೆಗಳೊಂದಿಗೆ ಈ ಬ್ರಾಂಡ್ ಹೆಸರು ಮತ್ತು ಲೋಗೋವನ್ನು ಬಳಸಿಕೊಂಡು ಜೇನುತುಪ್ಪ ಮಾರಾಟ ಮಾಡಲು ಅವಕಾಶ ಕಲ್ಪಿಸಲಾಗಿದೆ.

ಗ್ರಾಹಕರಿಗೆ ಉತ್ತಮ ಗುಣಮಟ್ಟದ ಜೇನುತುಪ್ಪ ದೊರಕುವಂತೆ ಮಾಡಲು ಹಾಗೂ ಜೇನು ಕೃಷಿಕರ ಆರ್ಥಿಕ ಮಟ್ಟ ಹೆಚ್ಚಿಸಲು ರಾಜ್ಯದಲ್ಲಿ ಉತ್ಪಾದನೆಯಾಗುತ್ತಿರುವ ಜೇನುತುಪ್ಪಕ್ಕೆ ತೋಟಗಾರಿಕೆ ಇಲಾಖೆಯು ಬ್ರಾಂಡ್ ಹೆಸರು, ಲೋಗೋವನ್ನು ಬಿಡುಗಡೆ ಮಾಡಿದೆ.

ಹೆಚ್ಚಿನ ಮಾಹಿತಿಗಾಗಿ: ದೇವನಹಳ್ಳಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಮಲಿಕಾರ್ಜುನ ಬಾಬು ದೂ. ಸಂಖ್ಯೆ: 9448825101, ಹೊಸಕೋಟೆ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಎಂ.ಎಸ್ ದೀಪಾ ದೂ. ಸಂಖ್ಯೆ: 9880210892, ದೊಡ್ಡಬಳ್ಳಾಪುರ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕಿ ಶಶಿಕಲಾ ಟಿ.ಆರ್ ದೂ. ಸಂಖ್ಯೆ: 9482129648, ನೆಲಮಂಗಲ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಹರೀಶ್ ದೂ. ಸಂಖ್ಯೆ: 9880461607 ಅನ್ನು ಸಂಪರ್ಕಿಸಲು ಬೆಂಗಳೂರು ಗ್ರಾಮಾಂತರ ಜಿಲ್ಲಾ ತೋಟಗಾರಿಕೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿಪ್ಲೊಮಾ ಇನ್ ಕೋ ಆಪರೇಟಿವ್ ಮ್ಯಾನೇಜ್‌ಮೆಂಟ್‌ಪ್ರವೇಶಕ್ಕೆ ಅರ್ಜಿಆಹ್ವಾನ

ಬೆಂ.ಗ್ರಾ.ಜಿಲ್ಲೆ

ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜ್ ಮೆಂಟ್, ಸಹಕಾರ ತರಬೇತಿ ಸಂಸ್ಥೆಯು ಜುಲೈ 01 ರಿಂದ 6 ತಿಂಗಳ ಅವಧಿಯ ಡಿಪ್ಲೊಮಾ ಇನ್ ಕೋ ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿಯನ್ನು ಪ್ರಾರಂಭಿಸಿದೆ.

ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ತುಮಕೂರು, ಚಿಕ್ಕಬಳ್ಳಾಪುರ, ಕೋಲಾರ, ಮತ್ತು ಬೆಂಗಳೂರು ದಕ್ಷಿಣ ಜಿಲ್ಲೆಗಳ ಖಾಸಗಿ ಅಭ್ಯರ್ಥಿಗಳಿಂದ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿ ಅಭ್ಯರ್ಥಿಗಳು ಮತ್ತು ವಿವಿಧ ಸಹಕಾರ ಸಂಘ/ಬ್ಯಾಂಕ್‌ಗಳ ಉದ್ಯೋಗಿಗಳು ಅರ್ಜಿ ಸಲ್ಲಿಸಬಹುದು.

ತರಬೇತಿ ಪಡೆಯಲು ಕನಿಷ್ಠ ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಖಾಸಗಿ ಅಭ್ಯರ್ಥಿಗಳಿಗೂ ಸಹ ಪ್ರವೇಶ ಪಡೆಯಲು ಅವಕಾಶವಿರುತ್ತದೆ. ವಯೋಮಿತಿ 16 ವರ್ಷ ದಾಟಿದವರಾಗಿರಬೇಕು.

ಅರ್ಜಿಯನ್ನು ಮೇ 30 ರ ಒಳಗಾಗಿ ಸಲ್ಲಿಸಬೇಕು. ತರಬೇತಿ ಪಡೆಯುವ ಎಲ್ಲಾ ಅಭ್ಯರ್ಥಿಗಳಿಗೆ ಮಾಸಿಕ ರೂ. 500/– ಶಿಷ್ಯ ವೇತನ ನೀಡಲಾಗುವುದು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿ ಅಭ್ಯರ್ಥಿಗಳಿಗೆ ಮಾಸಿಕ ರೂ. 600/– ಶಿಷ್ಯ ವೇತನ ನೀಡಲಾಗುವುದು.

ಹೆಚ್ಚಿನ ವಿವರಗಳಿಗೆ ದೂ. ಸಂಖ್ಯೆ: 080–35541407 ಅಥವಾ ಮೊ. ಸಂಖ್ಯೆ: 90362 59781 ಸಂಪರ್ಕಿಸಬಹುದು, ಅಥವಾ ಸಂಸ್ಥೆಯ ಕಚೇರಿ ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ ಆಪರೇಟಿವ್ ಮ್ಯಾನೇಜ್‌ಮೆಂಟ್, ಸಹಕಾರ ಭವನ, #1/3, 2ನೇ ಮಹಡಿ, 3ನೇ ಮುಖ್ಯ ರಸ್ತೆ, ಕನ್ನಡ ಸಾಹಿತ್ಯ ಪರಿಷತ್ ಹಿಂಭಾಗ, ಚಾಮರಾಜಪೇಟೆ, ಬೆಂಗಳೂರು–18 ಇಲ್ಲಿಗೆ ಭೇಟಿ ನೀಡಬಹುದು ಎಂದು ಪ್ರಾಚಾರ್ಯರಾದ ಶೈಲಾ ಬಿ.ವಿ. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಂಗಾರಪೇಟೆಯಲ್ಲಿ ಗ್ಯಾರಂಟಿ ಯೋಜನೆಗಳ ಪರಿಶೀಲನಾ ಸಭೆ



ಬಂಗಾರಪೇಟೆ

ಗೃಹಲಕ್ಷ್ಮಿ ಮತ್ತು ಗೃಹಜ್ಯೋತಿ ಯೋಜನೆಗಳ ಸಮಗ್ರ ಪರಿಷ್ಕರಣೆ ನಡೆಸಿ, ಅನರ್ಹರು ಸೌಲಭ್ಯ ಪಡೆಯುತ್ತಿರುವುದನ್ನು ತಡೆಗಟ್ಟಿ, ಕೇವಲ ಅರ್ಹ ಫಲಾನುಭವಿಗಳಿಗೆ ಮಾತ್ರ ಯೋಜನೆಗಳ ಸೌಲಭ್ಯ ತಲುಪುವಂತೆ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು ಎಂದು ಗ್ಯಾರಂಟಿ ಯೋಜನೆಗಳ ಸಮಿತಿಯ ಅಧ್ಯಕ್ಷ ಪಾರ್ಥಸಾರಥಿ ಹೇಳಿದರು.

ಮಂಗಳವಾರ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಬಡವರ ಅಭಿವೃದ್ಧಿಗಾಗಿ ಸರ್ಕಾರ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದ್ದು, ಅವುಗಳನ್ನು ಅರ್ಹರಿಗೆ ತಲುಪಿಸುವಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಸಮರ್ಪಕವಾಗಿ ಕೆಲಸ ಮಾಡಬೇಕು ಎಂದು ಸೂಚಿಸಿದರು.

ಅನ್ನಭಾಗ್ಯ ಯೋಜನೆಯಡಿ ಅಂತ್ಯೋದಯ, ಬಿಪಿಎಲ್ ಹಾಗೂ ಎಪಿಎಲ್ ಕಾರ್ಡ್‌ದಾರರಿಗೆ ನಿಯಮಾನುಸಾರ ಆಹಾರಧಾನ್ಯ ವಿತರಣೆ ನಡೆಯುತ್ತಿದೆ. ಗೃಹಲಕ್ಷ್ಮಿ ಯೋಜನೆಯಡಿ ಅರ್ಹ ಮಹಿಳಾ ಫಲಾನುಭವಿಗಳ ಖಾತೆಗೆ ಪ್ರತಿ ತಿಂಗಳು ಎರಡು ಸಾವಿರ ರೂಪಾಯಿ ಜಮಾ ಮಾಡಲಾಗುತ್ತಿದೆ ಎಂದು ಹೇಳಿದರು.

ತಾಲ್ಲೂಕು ಮಾರ್ಗಗಳಲ್ಲಿ ಸಂಚರಿಸುವ ಬಸ್‌ಗಳು ನಿಗದಿತ ಸಮಯಕ್ಕೆ ಸರಿಯಾಗಿ ಸಂಚಾರ ಮಾಡಬೇಕು. ಒಂದೇ ಸಮಯದಲ್ಲಿ ಎರಡು ಬಸ್‌ಗಳು ಬರುವಂತಹ ಸಮಸ್ಯೆಗಳನ್ನು ಸರಿಪಡಿಸಿ, ನಿತ್ಯ ಪ್ರಯಾಣಿಸುವ ಸಾರ್ವಜನಿಕರು ಹಾಗೂ ಶಾಲೆ–ಕಾಲೇಜು ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

# ಅಭಿವೃದ್ಧಿಯಲ್ಲಿ ನಿರ್ಲಕ್ಷ್ಯ: ಪ್ರತಿಭಟನೆ



ಪಾವಗಡ

ಪಾವಗಡ ವಿಧಾನಸಭಾ ಕ್ಷೇತ್ರದ ಅಭಿವೃದ್ಧಿಯಲ್ಲಿ ರಾಜ್ಯ ಸರ್ಕಾರದ ನಿರ್ಲಕ್ಷ್ಯ ಹಾಗೂ ಸ್ಥಳೀಯ ಶಾಸಕರ ವೈಫಲ್ಯವನ್ನು ಖಂಡಿಸಿ ತಾಲೂಕು ಜೆಡಿಎಸ್ ಘಟಕದ ವತಿಯಿಂದ ಸೋಮವಾರ ಬೃಹತ್ ಪ್ರತಿಭಟನೆ ನಡೆಸಿ ತಹಶೀಲ್ದಾರ್ ಕಚೇರಿ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಯಿತು.

ಪಟ್ಟಣದ ಎಸ್‌ಎಸ್‌ಕೆ ರಂಗಮಂದಿರದ ಬಳಿ ಸುಮಾರು ಒಂದು ಸಾವಿರಕ್ಕೂ ಹೆಚ್ಚು ಕಾರ್ಯಕರ್ತರೊಂದಿಗೆ ಪ್ರತಿಭಟನೆಗೆ ಮಾಜಿ ಶಾಸಕ ಕೆ.ಎಂ. ತಿಮ್ಮರಾಯಪ್ಪ ಚಾಲನೆ ನೀಡಿದರು. ಶನಿಮಹಾತ್ಮ ದೇವಸ್ಥಾನ ವೃತ್ತ, ಕುವೆಂಪು ರಸ್ತೆ, ಬಳ್ಳಾರಿ ರಸ್ತೆ ಮೂಲಕ ಟೋಲ್‌ಗೇಟ್ ಬಳಿಯ ಡಾ. ಬಿ.ಆರ್. ಅಂಬೇಡ್ಕರ್ ಪ್ರತಿಮೆವರೆಗೆ ಮೆರವಣಿಗೆ ಸಾಗಿದ ಪ್ರತಿಭಟನಾಕಾರರು, ನಂತರ ತಾಲೂಕು ಕಚೇರಿ ಮುಂದೆ ಜಮಾಯಿಸಿ ರಾಜ್ಯ ಸರ್ಕಾರ ಹಾಗೂ ಸ್ಥಳೀಯ ಶಾಸಕರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಮಾಜಿ ಶಾಸಕ ಕೆ.ಎಂ. ತಿಮ್ಮರಾಯಪ್ಪ ಮಾತನಾಡಿ, ತಾಲ್ಲೂಕಿನಲ್ಲಿ ಬರ ತಾಂಡವಾಡುತ್ತಿದೆ, ಅಭಿವೃದ್ಧಿ ಕಾರ್ಯಗಳು ಮರೀಚಿಕೆಯಾಗಿವೆ. ರಾಜ್ಯ ಸರ್ಕಾರದ ಬೇಕಾಬಿಟ್ಟಿ ಆಡಳಿತದಿಂದ ಜನತೆ ಬೇಸತ್ತಿದ್ದಾರೆ. ಜ್ವಲಂತ ಸಮಸ್ಯೆಗಳ ಬಗ್ಗೆ ಸ್ಥಳೀಯ ಶಾಸಕರು ಧ್ವನಿ ಎತ್ತುವುದನ್ನೇ ಮರೆತಿದ್ದಾರೆ. ನೆರೆಯ ಆಂಧ್ರ ಪ್ರದೇಶ ಸರ್ಕಾರದೊಂದಿಗೆ ಚರ್ಚಿಸಿ ನಾಗಲಮಡಿಕೆಗೆ ನೀರು ತರಿಸಲು ಸಹ ಮೀನಮೇಷ ಎಣಿಸುತ್ತಿರುವುದು ಖಂಡನೀಯ ಎಂದು ಹೇಳಿದರು.

ಜೆಡಿಎಸ್ ಮಹಾ ಪ್ರಧಾನ ಕಾರ್ಯದರ್ಶಿ ಸೊಗಡು ವೆಂಕಟೇಶ್ ಮಾತನಾಡಿ, ಅಭಿವೃದ್ಧಿಗೆ ಗ್ಯಾರಂಟಿ ಯೋಜನೆಗಳನ್ನು ನೆಪವನ್ನಾಗಿ ಮಾಡುತ್ತಿರುವ ಸರ್ಕಾರ, ಕ್ಷೇತ್ರದ ಸಾವಿರಾರು ಜನರ ಪಡಿತರ ಚೀಟಿಗಳನ್ನು ರದ್ದುಗೊಳಿಸಿದೆ. ಚುನಾವಣೆ ವೇಳೆ ನೀಡಿದ ಭರವಸೆಗಳನ್ನು ಈಡೇರಿಸದೆ ಕಾಲಹರಣ ಮಾಡುತ್ತಿರುವುದು ವಿಪರ್ಯಾಸ ಎಂದು ಆರೋಪಿಸಿದರು.

ಮುಖಂಡ ಕೋಟತೂರು ನಾಗೇಶ್ ಮಾತನಾಡಿ, ಬೆಂಗಳೂರಿನಲ್ಲಿ ನೆಲೆಸಿದ್ದು ತಿಂಗಳಿಗೆ ಎರಡು ಮೂರು ಬಾರಿ ಕ್ಷೇತ್ರಕ್ಕೆ ಬರುವ ಶಾಸಕರು ಜನರ ಕಷ್ಟಗಳನ್ನು ಅರಿಯಲು ವಿಫಲರಾಗಿದ್ದಾರೆ. ಕ್ಷೇತ್ರದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದ್ದು ಅನೈತಿಕ ಚಟುವಟಿಕೆಗಳು ಹಾಗೂ ದಬ್ಬಾಳಿಕೆಗಳು ನಿರಂತರವಾಗಿ ನಡೆಯುತ್ತಿವೆ. 2028ರ ಚುನಾವಣೆಯಲ್ಲಿ ಜೆಡಿಎಸ್ ಅಧಿಕಾರಕ್ಕೆ ಬಂದರೆ ಅಭಿವೃದ್ಧಿ ಹೇಗೆ ಮಾಡಬೇಕು ಎಂಬುದನ್ನು ತೋರಿಸಲಿದೆ ಎಂದು ಹೇಳಿದರು.

ಅಧ್ಯಕ್ಷ ಈರಣ್ಣ ಮಾತನಾಡಿ, ಪುರಸಭೆ ವ್ಯಾಪ್ತಿಯಲ್ಲಿ ಮೂಲಭೂತ ಸೌಕರ್ಯಗಳು ಮರೀಚಿಕೆಯಾಗಿವೆ. ಜೆಜೆಎಂ ಕಾಮಗಾರಿಗಳು ನೆಲಕಚ್ಚಿವೆ, ರೈಲ್ವೆ ಕಾಮಗಾರಿ ವಿಳಂಬವಾಗಿದೆ, ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ಇದೆ. ಬಗರ್ ಹುಕ್ಕು ಸಭೆಯೇ ನಡೆದಿಲ್ಲ, ಬಡವರಿಗೆ ಮನೆ ಇಲ್ಲ, ಜನ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ವ್ಯವಸ್ಥೆಯೂ ಇಲ್ಲ ಎಂದು ಆರೋಪಿಸಿದರು.

ಸ್ಥಳೀಯ ಸಂಸ್ಥೆಗಳ ಚುನಾವಣೆಯನ್ನು ನಡೆಸದೆ ಸರ್ಕಾರ ಕಾಲಹರಣ ಮಾಡುತ್ತಿದೆ ಎಂದು ಆರೋಪಿಸಿ, ಸರ್ಕಾರದ ವಿರುದ್ಧ ಕ್ರಮ ಕೈಗೊಂಡು ಕ್ಷೇತ್ರಕ್ಕೆ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಿದರು. ಈ ವೇಳೆ ಜೆಡಿಎಸ್ ಮುಖಂಡರಾದ ಆರ್.ಸಿ. ಅಂಜಿನಪ್ಪ, ಜಿ.ವಿ. ಬಲರಾಮ್, ತಿಮ್ಮಾರೆಡ್ಡಿ, ಈರಣ್ಣ, ಗೋವಿಂದಪ್ಪ, ಶಾಂತಿಮೆಡಿಕಲ್ಸ್ ದೇವರಾಜು, ನಲ್ಲಾನಿ ಸುರೇಂದ್ರ, ಚೌಧರಿ, ಗಂಗಾಧರನಾಯ್ಡು, ಕಾವನಗೇರಿ ರಾಮಾಂಜಿನಪ್ಪ, ಯುನಾಸ್, ಸಾಧಿಕ್, ಬಲರಾಮರೆಡ್ಡಿ, ಅಂಬಿಕಾ, ಶಕುಂತಲಾಬಾಯಿ, ಸುಜಾತ, ಕೃಷ್ಣಮೂರ್ತಿ, ಭರತ್, ಗುಟ್ಟಳ್ಳಿ ಮಣಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## 'ರಾಜ್ಯದಲ್ಲಿ ಅವಧಿಪೂರ್ವ ಚುನಾವಣೆ'

ಶಿವಮೊಗ್ಗ



ಮುಖ್ಯಮಂತ್ರಿಗಳ ಬದಲಾವಣೆ ಮಾಡಬೇಕೆಂದು ನಿರ್ಧರಿಸಿದ ಕಾಂಗ್ರೆಸ್ ಹೈಕಮಾಂಡ್, ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ಕಳೆದ 3 ವರ್ಷಗಳಲ್ಲಿ ಉತ್ತಮ ಆಡಳಿತ ಕೊಡುವುದರಲ್ಲಿ ವಿಫಲವಾಗಿದೆ ಎಂಬುದನ್ನು ಅನುಮೋದಿಸಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ವಿಶ್ಲೇಷಿಸಿದ್ದಾರೆ.

ಇಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನಿನ್ನೆ ದೆಹಲಿಯಲ್ಲಿ ಸುಮಾರು ಐದರಿಂದ ಐದೂವರೆ ಗಂಟೆ ಕಾಲ ಮ್ಯಾರಥಾನ್ ಸಭೆಗಳು ಆದ ನಂತರ ಕೊನೆಗೂ ಮುಖ್ಯಮಂತ್ರಿ ರಾಜೀನಾಮೆ ಪಡೆಯಬೇಕೆಂಬ ನಿರ್ಧಾರ ಮಾಡಿದ್ದಾರೆ. ಕಾಂಗ್ರೆಸ್ ಪಕ್ಷ ಕೊನೆಯ ದಿನಗಳನ್ನು ನೋಡುತ್ತಿದೆ ಎಂಬುದೇ ಇದರ ಅರ್ಥ ಎಂದು ನುಡಿದರು.

ಸಿದ್ದರಾಮಯ್ಯನವರು ರಾಜೀನಾಮೆ ಕೊಟ್ಟು ಯಾರೇ ಸಿಎಂ ಆದರೂ ಅದು ತಾತ್ಕಾಲಿಕ. ಅವಧಿಪೂರ್ವ ಚುನಾವಣೆ ಕರ್ನಾಟಕದಲ್ಲಿ ಬರುವುದನ್ನು ತಡೆಯಲು ಯಾರಿಂದಲೂ ಸಾಧ್ಯವಿಲ್ಲ ಎಂದು ಪ್ರಶ್ನೆಗೆ ಉತ್ತರಿಸಿದರು. ಸಿದ್ದರಾಮಯ್ಯನವರು ರಾಜೀನಾಮೆ ಕೊಟ್ಟು ಯಾರೇ ಸಿಎಂ ಆದರೂ ಯಾವ ಗೊಂದಲ ಆಗಲಿದೆ ಎಂಬುದನ್ನು ನೀವೇನೋಡಿ ಎಂದು ತಿಳಿಸಿದರು. ಹೈಕಮಾಂಡ್ ತೀರ್ಮಾನದ ಕಾರಣ ಸಿದ್ದರಾಮಯ್ಯನವರು ರಾಜೀನಾಮೆ ಕೊಟ್ಟೇ ಕೊಡುತ್ತಾರೆ ಎಂದು ಇನ್ನೊಂದು ಪ್ರಶ್ನೆಗೆ ಉತ್ತರ ನೀಡಿದರು. ಯಾರು ಸಿಎಂ ಆಗುತ್ತಾರೆಂಬುದು ಭಗವಂತನಿಗೇ ಗೊತ್ತು ಎಂದು ತಿಳಿಸಿದರು.

ಕರ್ನಾಟಕದಲ್ಲೂ ಕಾಂಗ್ರೆಸ್ ಅವನತಿಗೆ ಹೋಗುತ್ತಿದೆ ಎಂಬುದು ಸ್ಪಷ್ಟವಾದ ಮುನ್ಸೂಚನೆ ಎಂದರು. ಸಿದ್ದರಾಮಯ್ಯನವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ಕೊಟ್ಟು ಯಾರು ಸಿಎಂ ಆಗುತ್ತಾರೆಂಬುದು ಮುಖ್ಯವಲ್ಲ; ನನಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಬಗ್ಗೆ ವೈಯಕ್ತಿಕ ದ್ವೇಷವಿಲ್ಲ. ಅತಿ ಹೆಚ್ಚು ಅನುಭವ ಇರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು. ಬಹುಶಃ ದಕ್ಷಿಣ ಭಾರತದಲ್ಲೇ ಇತರ ರಾಜ್ಯಗಳನ್ನು ಹೋಲಿಸಿದರೆ 10 ಲಕ್ಷ ಕೋಟಿ ಸಾಲವನ್ನು ಸಿದ್ದರಾಮಯ್ಯನವರು ಮಾಡಿದ್ದಾರೆ ಎಂದು ಗಮನ ಸೆಳೆದರು.

ರಾಜ್ಯವು ಸಾಲದ ಸುಳಿಯಲ್ಲಿ ಸಿಲುಕಿಹಾಕಿದ್ದನ್ನೂ ನಾವು ಅರ್ಥ ಮಾಡಿಕೊಳ್ಳಬೇಕು. ಯಾರು ಮುಖ್ಯಮಂತ್ರಿ ಆಗುವರೆಂಬುದು ಮುಖ್ಯವಲ್ಲ; ರಾಜ್ಯ ಯಾವ ದಿಕ್ಕಿನಲ್ಲಿ ಸಾಗುತ್ತಿದೆ ಎಂಬುದನ್ನು ನಾವೆಲ್ಲ ಆಲೋಚಿಸುವ ದುಸ್ಥಿತಿಗೆ ಬಂದಿದ್ದೇವೆ.

ಆಂತರಿಕ ಕಚ್ಚಾಟದಿಂದ ಆಡಳಿತವೂ ಸಂಪೂರ್ಣ ಕುಸಿದುಹೋಗಿತ್ತು. ವಾಲ್ಮೀಕಿ ನಿಗಮದ ಹಗರಣ, ಮುಡಾ ಹಗರಣದಂಥ ಭ್ರಷ್ಟಾಚಾರ, ರಾಜ್ಯದಲ್ಲಿ ಅಧಿಕಾರಿಗಳು ಆತ್ಮಹತ್ಯೆ ಮಾಡಿಕೊಂಡ ಘಟನೆಗಳು ನಡೆದಿದ್ದರೆ, ಅದು ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಆಡಳಿತದಲ್ಲಿ ನಡೆದಿದೆ ಎಂದು ಟೀಕಿಸಿದರು.

ಸರಕಾರದ ಆಡಳಿತಕ್ಕೆ ಉಪ ಚುನಾವಣೆ ಗೆಲುವು ಮಾನದಂಡ ಆಗಲು ಸಾಧ್ಯವಿಲ್ಲ; ಉಪ ಚುನಾವಣೆ ಗೆಲುವು ಮಾನದಂಡ ಆಗುವುದಾದರೆ ಸಿದ್ದರಾಮಯ್ಯನವರು ರಾಜೀನಾಮೆ ಕೊಡುವ ಪರಿಸ್ಥಿತಿ ಬರುತ್ತಿರಲಿಲ್ಲ ಎಂದು ತಿಳಿಸಿದರು. ರಾಜ್ಯದಲ್ಲಿ ಅಭಿವೃದ್ಧಿ ಇಲ್ಲದೇ ಭ್ರಷ್ಟಾಚಾರದಲ್ಲಿ ಮುಳುಗಿದ್ದ ಕಾಂಗ್ರೆಸ್ ಸರಕಾರವು, ಕೊನೆಗೂ ಸಿಎಂ ಹುದ್ದೆ ಬದಲಾವಣೆಗೆ ಮುಂದಾದುದನ್ನು ಗಮನಿಸಿದ್ದೇವೆ ಎಂದರು.

# ರಾಜ್ಯದ ಹಲವೆಡೆ ಉತ್ತಮ ಮಳೆ

ಬೆಂಗಳೂರು

ನೈಋತ್ಯ ಮುಂಗಾರು ಆರಂಭಕ್ಕೂ ಮುನ್ನ ರಾಜ್ಯದಲ್ಲಿ ಉತ್ತಮ ಮಳೆಯಾಗಿದೆ. ರಾಜಧಾನಿ ಬೆಂಗಳೂರು ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಮಳೆಯಾಗಿದ್ದು, ರಾಜ್ಯದ ಪೂರ್ವ ಭಾಗದ ಜಿಲ್ಲೆಗಳಲ್ಲಿ ಹೆಚ್ಚು ಮಳೆಯಾಗಿದೆ.

ಹವಾಮಾನ ಇಲಾಖೆ ಮುನ್ಸೂಚನೆ ಪ್ರಕಾರ ಜೂನ್ 2ರವರೆಗೂ ಮಳೆ ಮುಂದುವರೆಯಲಿದೆ. ಉತ್ತರ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಇಂದು ಮತ್ತು ನಾಳೆ ಭಾರೀ ಮಳೆಯಾಗುವ ಮುನ್ಸೂಚನೆಗಳಿದ್ದು, ಹವಾಮಾನ ಇಲಾಖೆ ಆರೇಂಜ್ ಅಲರ್ಟ್ ಮಾಡಿದ್ದು, ಮೇ 29 ಮತ್ತು 30ರಂದು ಯೆಲ್ಲೊ ಅಲರ್ಟ್ ನೀಡಿದೆ.

ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಇಂದಿನಿಂದ ಮೇ 30ರವರೆಗೆ ನಾಲ್ಕು ದಿನಗಳ ಕಾಲ ಯೆಲ್ಲೊ ಅಲರ್ಟ್ ನೀಡಿದೆ. ಮೇ 30ರ ನಂತರ ಮಳೆಯ ತೀವ್ರತೆ ಕಡಿಮೆಯಾದರೂ ಚದುರಿದಂತೆ ಅಲ್ಲಲ್ಲಿ ಮಳೆ ಮುಂದುವರೆಯಲಿದೆ.ಮುಂಗಾರು ಆರಂಭಕ್ಕೆ ಪೂರಕವಾದ ವಾತಾವರಣಗಳು ಸೃಷ್ಟಿಯಾಗುತ್ತಿರುವ ಹಿನ್ನೆಲೆಯಲ್ಲಿ ರಾಜ್ಯದ ಹಲವೆಡೆ ಉತ್ತಮ ಮಳೆಯಾಗುತ್ತಿದೆ.

ಕರ್ನಾಟಕ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಮಾಹಿತಿ ಪ್ರಕಾರ ರಾಜ್ಯಾದ್ಯಂತ ಮಳೆ ಮುಂದುವರೆಯಲಿದೆ. ಭಾಗಶಃ ಮೋಡ ಕವಿದ ವಾತಾವರಣ ಕಂಡುಬರಲಿದೆ.

# 'ಕನ್ನಡ ಅನುಷ್ಠಾನದಲ್ಲಿ ನಿರ್ಲಕ್ಷ್ಯ ಸಹಿಸುವುದಿಲ್ಲ'

ಕೋಲಾರ



ಜಿಲ್ಲೆಯಲ್ಲಿ ಕನ್ನಡ ಭಾಷೆಯ ಅನುಷ್ಠಾನದಲ್ಲಿ ನಿರ್ಲಕ್ಷ್ಯ ತೋರುವ ವಾಣಿಜ್ಯ ಮಳಿಗೆಗಳು, ಬ್ಯಾಂಕ್‌ಗಳು ಹಾಗೂ ಕೈಗಾರಿಕೆಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಡಾ. ಎಂ. ಆರ್. ರವಿ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಜಿಲ್ಲಾಡಳಿತ ಭವನದಲ್ಲಿ ನಡೆದ ಜಿಲ್ಲಾ ಕನ್ನಡ ಜಾಗೃತಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಿದ್ದರು.

ಕಳೆದ ಸಭೆಗಳಲ್ಲಿ ನೀಡಿದ ಸೂಚನೆಗಳ ಹೊರತಾಗಿಯೂ ಕನ್ನಡ ಅನುಷ್ಠಾನ ನೂರಕ್ಕೆ ನೂರರಷ್ಟು ಆಗುತ್ತಿಲ್ಲ ಎಂದು ಸಮಿತಿ ಸದಸ್ಯರು ಅಸಮಾಧಾನ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ, ಜಿಲ್ಲಾಧಿಕಾರಿಗಳು ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಈ ಕೆಳಗಿನ ಕಟ್ಟುನಿಟ್ಟಿನ ನಿರ್ದೇಶನಗಳನ್ನು ನೀಡಿದರು.

ಎಲ್ಲಾ ಅಂಗಡಿ ಮುಂಗಟ್ಟುಗಳು ಹಾಗೂ ವಾಣಿಜ್ಯ ಸಂಕೀರ್ಣಗಳ ನಾಮಫಲಕಗಳಲ್ಲಿ ಶೇಕಡಾ 60ರಷ್ಟು ಕನ್ನಡ ಭಾಷೆ ಕಡ್ಡಾಯವಾಗಿ ಇರಬೇಕು. ನಿಯಮ ಉಲ್ಲಂಘಿಸುವ ಉದ್ದಿಮೆಗಳಿಗೆ ಮೊದಲು ಎಚ್ಚರಿಕೆ ನೋಟಿಸ್ ನೀಡಬೇಕು.

ನೋಟಿಸ್ ನೀಡಿದ ಮೇಲೂ ನಾಮಫಲಕ ಬದಲಿಸದಿದ್ದರೆ ಅಂತಹ ಉದ್ದಿಮೆಗಳ ವಾಣಿಜ್ಯ ಪರವಾನಗಿಯನ್ನು ರದ್ದುಪಡಿಸುವಂತೆ ನಗರಸಭೆ, ಪುರಸಭೆ ಹಾಗೂ ಗ್ರಾಮ ಪಂಚಾಯತಿ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಹೆದ್ದಾರಿ ಬದಿಯ ಜಾಹೀರಾತು ಫಲಕಗಳು ಮತ್ತು ಜೈನ್ ಕಾಲೇಜು ಸೇರಿದಂತೆ ವಿವಿಧೆಡೆ ಕೇವಲ ಇಂಗ್ಲಿಷ್ ನಾಮಫಲಕಗಳಿರುವುದನ್ನು ಗಮನಿಸಿದ್ದು, ತಕ್ಷಣ ಅವುಗಳನ್ನು ತೆರವುಗೊಳಿಸಿ ಕನ್ನಡ ಅಳವಡಿಸಲು ಕ್ರಮವಹಿಸುವಂತೆ ಸೂಚಿಸಿದರು.

ಬ್ಯಾಂಕಿಂಗ್ ವಲಯದಲ್ಲಿ ಕನ್ನಡ ಬಳಕೆಯಾಗುತ್ತಿಲ್ಲ ಎಂಬ ದೂರುಗಳ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಅವರು, ಬ್ಯಾಂಕ್ ಚಲನ್‌ಗಳು ಹಾಗೂ ಅರ್ಜಿಗಳು ಕೇವಲ ಹಿಂದಿ ಮತ್ತು ಇಂಗ್ಲಿಷ್‌ನಲ್ಲಿರುವುದನ್ನು ಆಕ್ಷೇಪಿಸಿದರು. ಎಲ್ಲಾ ರಾಷ್ಟ್ರೀಕೃತ ಹಾಗೂ ಖಾಸಗಿ ಬ್ಯಾಂಕ್‌ಗಳಲ್ಲಿ ಕಡ್ಡಾಯವಾಗಿ ಕನ್ನಡದ ಅರ್ಜಿಗಳು ದೊರೆಯುವಂತೆ ಮಾಡಬೇಕು. ಹೊರ ರಾಜ್ಯಗಳಿಂದ ಬಂದಿರುವ ಬ್ಯಾಂಕ್ ಸಿಬ್ಬಂದಿಗೆ, ಗ್ರಾಹಕರೊಂದಿಗೆ ವ್ಯವಹರಿಸಲು ಅನುಕೂಲವಾಗುವಂತೆ ಕನ್ನಡ ಕಲಿಯಲು ತರಬೇತಿ ಶಿಬಿರಗಳನ್ನು ಆಯೋಜಿಸುವಂತೆ ಲೀಡ್ ಬ್ಯಾಂಕ್ ಮ್ಯಾನೇಜರ್‌ಗೆ ಸೂಚನೆ ನೀಡಿದರು.

ಕೈಗಾರಿಕೆಗಳಲ್ಲಿ ಕನ್ನಡಿಗರಿಗೆ ಉದ್ಯೋಗ ನೀಡುವ 'ಸರೋಜಿನಿ ಮಹಿಷಿ ವರದಿ'ಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು. ಸಿ ಮತ್ತು ಡಿ ವೃಂದದ ಹುದ್ದೆಗಳಲ್ಲಿ ಸ್ಥಳೀಯರಿಗೆ ಆದ್ಯತೆ ನೀಡಲಾಗುತ್ತಿದೆಯೇ ಎಂಬುದರ ಬಗ್ಗೆ ತ್ರೈಮಾಸಿಕ ವರದಿ ಪಡೆಯುವಂತೆ ಕಾರ್ಮಿಕ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಕಾರ್ಖಾನೆಗಳ ಆವರಣದಲ್ಲಿ ಮತ್ತು ಕಾರ್ಮಿಕರ ಸಂಪರ್ಕದ ಸೂಚನಾ ಫಲಕಗಳು ಕಡ್ಡಾಯವಾಗಿ ಕನ್ನಡದಲ್ಲಿರಬೇಕು ಎಂದು ತಾಕೀತು ಮಾಡಿದರು.

ಸಿಬಿಎಸ್‌ಇ ಮತ್ತು ಐಸಿಎಸ್‌ಇ ಸೇರಿದಂತೆ ಎಲ್ಲಾ ಖಾಸಗಿ ಹಾಗೂ ಕೇಂದ್ರೀಯ ವಿದ್ಯಾಲಯಗಳಲ್ಲಿ ಕನ್ನಡವನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯಾಗಿ ಕಡ್ಡಾಯವಾಗಿ ಬೋಧಿಸಲೇಬೇಕು. ಎಂದು ಶಿಕ್ಷಣ ಇಲಾಖೆ ಉಪನಿರ್ದೇಶಕರಿಗೆ ಸೂಚಿಸಿದರು.

ಮುಜರಾಯಿ ಇಲಾಖೆಗೆ ಒಳಪಡುವ ದೇವಾಲಯಗಳಲ್ಲಿ ನಡೆಯುವ ಪೂಜಾ ವಿಧಿವಿಧಾನಗಳು ಹಾಗೂ ಮಂತ್ರೋಚ್ಚಾರಣೆಗಳು ಭಕ್ತರಿಗೆ ಅರ್ಥವಾಗುವಂತೆ ಕನ್ನಡದಲ್ಲಿಯೇ ಇರಬೇಕು.

ಅರ್ಚಕರು ಪೂಜೆ ಮಾಡುವಾಗ ಕನ್ನಡ ಭಾಷೆಯನ್ನೇ ಬಳಸುವ ಬಗ್ಗೆ ಮುಜರಾಯಿ ಇಲಾಖೆಯ ಅಧಿಕಾರಿಗಳು ಸುತ್ತೋಲೆ ಹೊರಡಿಸಿ, ತರಬೇತಿ ನೀಡಬೇಕು ಎಂದು ತಿಳಿಸಿದರು.

ಭಾಷೆಯ ವಿಚಾರದಲ್ಲಿ ಯಾರಿಗೂ ದ್ವೇಷ ಬೇಡ, ಆದರೆ ಆಡಳಿತಾತ್ಮಕವಾಗಿ ಕನ್ನಡದ ಜಾರಿ ನಮ್ಮ ಹಕ್ಕು ಮತ್ತು ಕರ್ತವ್ಯವಾಗಿದೆ. ಕನ್ನಡವನ್ನು ಕೀಳರಿಮೆಯಿಂದ ನೋಡುವ ಪ್ರವೃತ್ತಿ ಬಿಡಬೇಕು ಎಂದು ಜಿಲ್ಲಾಧಿಕಾರಿಗಳು ಕಿವಿಮಾತು ಹೇಳಿದರು.

ಉರ್ದು ಶಾಲೆಗಳ ಮಕ್ಕಳಿಗೆ ಕನ್ನಡ ಶಿಕ್ಷಕರನ್ನು ನೇಮಿಸಿದ್ದು, ಅವರಿಗೆ ಕಡ್ಡಾಯವಾಗಿ ಕನ್ನಡವನ್ನು ಒಂದು ಭಾಷೆಯಾಗಿ ಕಲಿಸುವುದು ಅವಶ್ಯವಾಗಿದೆ. ಈ ಕುರಿತು ಅಧಿಕಾರಿಗಳು ಕ್ರಮ ಕೈಗೊಳ್ಳಬೇಕೆಂದರು.

ಸರ್ವರೂ ಕನ್ನಡವನ್ನು ತಮ್ಮ ಮನದಾಳದಿಂದ ಪ್ರೀತಿಸಿ ಗೌರವಿಸಬೇಕು. ಕನ್ನಡವನ್ನೇ ಮಾತನಾಡಬೇಕು. ಇದರಿಂದ ಕನ್ನಡವನ್ನು ಉಳಿಸಿ ಬೆಳಸಬಹುದಾಗಿದೆ ಜೊತೆಗೆ ಕನ್ನಡ ಪ್ರೇಮವೂ ಹೆಚ್ಚುತ್ತದೆ ಎಂದು ಸಮಿತಿಯ ಸದಸ್ಯರು ಅಭಿಪ್ರಾಯಪಟ್ಟರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಪ್ರವೀಣ್. ಪಿ ಬಾಗೇವಾಡಿ, ಅಪರ ಪೊಲೀಸ್ ವರಿಷ್ಠಾಧಿಕಾರಿ ಜಗದೀಶ್, ಕೈಗಾರಿಕೆಗಳ ಇಲಾಖೆ ಉಪನಿರ್ದೇಶಕ ರಫೀಕ್, ನಗರಾಭಿವೃದ್ಧಿ ಇಲಾಖೆ ಯೋಜನಾ ನಿರ್ದೇಶಕಿ ಅಂಬಿಕಾ, ಸಮಿತಿಯ ಸದಸ್ಯರಾದ ಬಾಹ ಶೇಖರಪ್ಪ, ಮಂಜುನಾಥ್, ನೇತ್ರಾವತಿ ಹಾಗೂ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಜೆಡಿಎಸ್ ಪಕ್ಷದ ವತಿಯಿಂದ ಉಚಿತ ಆರೋಗ್ಯ ಶಿಬಿರ

ಕನಕಪುರ



ಗ್ರಾಮೀಣ ಭಾಗದ ಜನರು ತಮ್ಮ ಆರೋಗ್ಯದ ಕಡೆಗೆ ಹೆಚ್ಚಿನ ಗಮನ ಹರಿಸಬೇಕು ಎಂದು ಸಂಸದ ಡಾ. ಮಂಜುನಾಥ್ ಅವರ ಧರ್ಮಪತ್ನಿ ಅನುಸೂಯಮ್ಮ ಹೇಳಿದರು.

ತಾಲ್ಲೂಕಿನ ಸಾತನೂರು ಹೋಬಳಿ ಯಡಮಾರಮಹಳ್ಳಿ ಗ್ರಾಮದಲ್ಲಿ ಜೆಡಿಎಸ್ ಪಕ್ಷದ ವತಿಯಿಂದ ಶಂಕರ ಕಣ್ಣಿನ ಆಸ್ಪತ್ರೆ ಹಾಗೂ ಕಿದ್ವಾಯಿ ಸ್ಮಾರಕ ಸಂಸ್ಥೆಯ ಸಹಯೋಗದಲ್ಲಿ ಆಯೋಜಿಸಿದ್ದ ಉಚಿತ ಆರೋಗ್ಯ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಇಂದು ಆರೋಗ್ಯವೇ ಮನುಷ್ಯನಿಗೆ ಅತ್ಯಂತ ಮುಖ್ಯವಾಗಿದ್ದು, ಗ್ರಾಮೀಣ ಜನತೆ ಆರೋಗ್ಯ ಸೇವೆಯಿಂದ ವಂಚಿತರಾಗಬಾರದು ಎಂಬ ಉದ್ದೇಶದಿಂದ ಪಕ್ಷದ ಮುಖಂಡರು ಈ ರೀತಿಯ ಉತ್ತಮ ಕಾರ್ಯಕ್ರಮಗಳನ್ನು ಆಯೋಜಿಸುತ್ತಿರುವುದು ಶ್ಲಾಘನೀಯ ಎಂದು ಅವರು ಹೇಳಿದರು.

ಶಿಬಿರದಲ್ಲಿ ನುರಿತ ವೈದ್ಯರಿಂದ ಕಣ್ಣಿನ ತಪಾಸಣೆ, ಕಿವಿ, ಮೂಗು, ಗಂಟಲು ಚಿಕಿತ್ಸೆ ಹಾಗೂ ಕ್ಯಾನ್ಸರ್ ತಪಾಸಣೆ ಸೇರಿದಂತೆ ಸಾಮಾನ್ಯ ಆರೋಗ್ಯ ತಪಾಸಣೆಗಳನ್ನು ನಡೆಸಲಾಯಿತು. ಜೊತೆಗೆ ಅಗತ್ಯವಿರುವವರಿಗೆ ಉಚಿತವಾಗಿ ಕನ್ನಡಕಗಳು ಹಾಗೂ ಔಷಧಿಗಳನ್ನು ವಿತರಿಸಲಾಯಿತು.

ಶಂಕರ ಕಣ್ಣಿನ ಆಸ್ಪತ್ರೆಯ ನುರಿತ ತಜ್ಞ ಶಂಕರಪ್ಪ, ಕಿದ್ವಾಯಿ ಸ್ಮಾರಕ ಸಂಸ್ಥೆಯ ವೈದ್ಯರಾದ ಕೀರ್ತನಾ, ಡಾ. ಸುಮೇರಾ, ಕಾವೇರಿ, ಹೇಮಂತ್, ಆಶಿಷ್, ಮಧು, ಬಸವರಾಜ್ ಸೇರಿದಂತೆ ಹಲವು ವೈದ್ಯರು ಹಾಗೂ ಸಿಬ್ಬಂದಿ ಶಿಬಿರದಲ್ಲಿ ಪಾಲ್ಗೊಂಡಿದ್ದರು.

ಕಾರ್ಯಕ್ರಮದಲ್ಲಿ ಜೆಡಿಎಸ್ ಮುಖಂಡರಾದ ಶಿವಕುಮಾರ್, ಬಿ.ಟಿ. ನಾಗರಾಜು, ಕಾಳೇಗೌಡ, ದಿಶಾ ಸಮಿತಿ ಸದಸ್ಯೆ ಶೋಭಾ, ತಾಲ್ಲೂಕು ಜೆಡಿಎಸ್ ಮಹಿಳಾ ಅಧ್ಯಕ್ಷೆ ಪವಿತ್ರ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

## ವಿಶೇಷ ರೀಲ್ಸ್ ಸ್ಪರ್ಧೆ

ತುಮಕೂರು

ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ತುಮಕೂರಿನ ಪ್ರಾದೇಶಿಕ ಕಚೇರಿಯು ಪರಿಸರ ಜಾಗೃತಿ ಹಾಗೂ ಹವಾಮಾನ ಕ್ರಮಗಳಿಗೆ ಸಾರ್ವಜನಿಕರ ಸಕ್ರಿಯ ಪಾಲ್ಗೊಳ್ಳುವಿಕೆಯನ್ನು ಉತ್ತೇಜಿಸುವ ಉದ್ದೇಶದಿಂದ ವಿಶೇಷ ರೀಲ್ಸ್ ಸ್ಪರ್ಧೆಯನ್ನು ಆಯೋಜಿಸಿದೆ.

ಪ್ರಕೃತಿಯಿಂದ ಪ್ರೇರಿತ, ಹವಾಮಾನಕ್ಕಾಗಿ : ನಮ್ಮ ಭವಿಷ್ಯಕ್ಕಾಗಿ ಎಂಬ ಧ್ಯೆಯವಾಕ್ಯದಡಿ ನಡೆಯಲಿರುವ ಈ ಸ್ಪರ್ಧೆಯ ಮೂಲಕ ಪರಿಸರ ಸಂರಕ್ಷಣೆ, ಸುಸ್ಥಿರ ಜೀವನಶೈಲಿ, ಹವಾಮಾನ ಬದಲಾವಣೆ ಬಗ್ಗೆ ಅರಿವು ಹಾಗೂ ನೈಸರ್ಗಿಕ ಸಂಪನ್ಮೂಲಗಳ ಸಂರಕ್ಷಣೆಯ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಉದ್ದೇಶ ಹೊಂದಲಾಗಿದೆ.

ಈ ಸ್ಪರ್ಧೆಯಲ್ಲಿ ಭಾಗವಹಿಸುವವರು ತಮ್ಮ ಸೃಜನಶೀಲತೆಯನ್ನು ಬಳಸಿಕೊಂಡು 30 ಸೆಕೆಂಡುಗಳಿಂದ 120 ಸೆಕೆಂಡುಗಳ ಅವಧಿಯ ಮೂಲಕ ರೀಲ್ಸ್ ವಿಡಿಯೋಗಳನ್ನು ಸಿದ್ಧಪಡಿಸಿ ಸಲ್ಲಿಸಬೇಕು. ಸಲ್ಲಿಕೆಯಾಗುವ ವಿಡಿಯೋಗಳು ಸ್ಪರ್ಧೆಯ ಅಧಿಕೃತ ವಿಷಯ ವಸ್ತುವಿಗೆ ಹೊಂದಿಕೆಯಾಗಿರಬೇಕು. ಅಸಭ್ಯ, ಅಕ್ರಮಣಕಾರಿ, ಮಾನ ಹಾನಿಕಾರಕ ಅಥವಾ ಧಾರ್ಮಿಕವಾಗಿ ಸೂಕ್ಷ್ಮ ವಿಷಯಗಳನ್ನು ಒಳಗೊಂಡಿರಬಾರದು.

ಸ್ಪರ್ಧೆಯಲ್ಲಿ ವಿಜೇತರಿಗಾಗಿ ಆಕರ್ಷಕ ನಗದು ಬಹುಮಾನಗಳನ್ನು ಘೋಷಿಸಲಾಗಿದ್ದು, ಪ್ರಥಮ ಬಹುಮಾನ 10,000 ರೂ., ದ್ವಿತೀಯ ಬಹುಮಾನ 5,000 ರೂ. ಹಾಗೂ ತೃತೀಯ ಬಹುಮಾನ 3,000 ರೂ. ನೀಡಲಾಗುತ್ತದೆ. ಭಾಗವಹಿಸುವವರು ತಾವು ಸಿದ್ಧಪಡಿಸಿದ ರೀಲ್ಸ್‌ಗಳನ್ನು ಇನ್‌ಸ್ಟಾಗ್ರಾಂ ಅಥವಾ ಇತರೆ ಸಾಮಾಜಿಕ ಜಾಲತಾಣಗಳಲ್ಲಿ ರೀಲ್ಸ್ ರೂಪದಲ್ಲೇ ಅಪ್‌ಲೋಡ್ ಮಾಡಬೇಕು. ಸ್ಪರ್ಧೆಯ ಅವಧಿಯಲ್ಲಿ ಖಾತೆಯನ್ನು ಸಾರ್ವಜನಿಕ ಸ್ಥಿತಿಯಲ್ಲಿ ಇರಿಸಬೇಕು. ಬಳಿಕ ಹೆಸರು, ವಯಸ್ಸು, ಸಂಪರ್ಕ ಸಂಖ್ಯೆ ಹಾಗೂ ಸ್ಥಳದ ವಿವರಗಳೊಂದಿಗೆ ರೀಲ್ಸ್ ಲಿಂಕ್ ಅನ್ನು ಸಲ್ಲಿಸಬೇಕು.

ರೀಲ್ಸ್‌ಗಳ ಲಿಂಕ್ tumkur@kspcb.gov.in ಅಥವಾ tumkurkspcb@gmail.com ಇ–ಮೇಲ್ ವಿಳಾಸಗಳಿಗೆ ಕಳುಹಿಸಬಹುದಾಗಿದೆ. ರೀಲ್ಸ್ ಸಲ್ಲಿಕೆಗೆ ಜೂನ್ 2 ಕೊನೆಯ ದಿನವಾಗಿದೆ ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ತುಮಕೂರಿನ ಪ್ರಾದೇಶಿಕ ಕಚೇರಿ ಪರಿಸರ ಅಧಿಕಾರಿ ತಿಳಿಸಿದ್ದಾರೆ.

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಭಾರತ ಸಾರಥಿ
BHARATHA SARATHI KANNADA DAILY NEWS PAPER
29/05/2026


# ‘ಕೃಷಿ ಹೊಂಡಗಳಿಗೆ ಕಡ್ಡಾಯವಾಗಿ ತಂತಿ ಬೇಲಿಯನ್ನು ಅಳವಡಿಸಿ’

ಕೋಲಾರ

ಜಿಲ್ಲೆಯಲ್ಲಿ ಹೆಚ್ಚಿನ ಪ್ರದೇಶವು ಮಳೆಯಾಶ್ರಿತ ಪ್ರದೇಶವಾಗಿದ್ದು, ಬೆಳೆಗಳಿಗೆ ಸಂದಿಗ್ದ ಪರಿಸ್ಥಿತಿಯಲ್ಲಿ ಕೃಷಿಹೊಂಡಗಳಲ್ಲಿ ಶೇಖರಣೆಯಾಗುವ ನೀರನ್ನು ಉಪಯೋಗಿಸಿ ಉತ್ತಮ ಬೆಳೆ ಪಡೆಯಲು ಸಹಾಯವಾಗಿರುತ್ತದೆ. ಕೃಷಿಹೊಂಡಗಳನ್ನು ಕೃಷಿ ಭಾಗ್ಯ ಯೋಜನೆಯಡಿ ಕ್ಷೇತ್ರ ಬದು, ಪಾಲಿಥೀನ್ ಹೊದಿಕೆ, ತಂತಿ ಬೇಲಿ, ಪಂಪ್‌ಸೆಟ್ ಮತ್ತು ಸೂಕ್ಷ್ಮ ನೀರಾವರಿ ಘಟಕಗಳನ್ನು ಪ್ಯಾಕೇಜ್ ಮಾದರಿಯಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.

ಈ ಯೋಜನೆಯಡಿ ರೈತರೆ ಸ್ವತ: ಕೃಷಿಹೊಂಡ ಮತ್ತು ಕ್ಷೇತ್ರಬದು ಕಾಮಗಾರಿ ಪೂರ್ಣಗೊಳಿಸಿದ ನಂತರ ಕೃಷಿಹೊಂಡದ ಸುತ್ತಲೂ ತಂತಿ ಬೇಲಿ ನಿರ್ಮಿಸಿಕೊಳ್ಳುವ ಬಗ್ಗೆ ರೈತರಿಂದ ದೃಢೀಕರಣ ಪತ್ರವನ್ನು ಪಡೆದುಕೊಂಡು ಒಟ್ಟು ಸಹಾಯಧನದ ಶೇ.75 ರಷ್ಟನ್ನು ಮೊದಲ ಕಂತಿನ ಸಹಾಯಧನವಾಗಿ ರೈತರ ಖಾತೆಗೆ ಜಮೆ ಮಾಡಲಾಗಿರುತ್ತದೆ. ಮುಂದುವರೆದು, ರೈತರೆ ಸ್ವತ: ಕೃಷಿಹೊಂಡಗಳಿಗೆ ತಂತಿ ಬೇಲಿಯನ್ನು ಅಳವಡಿಸಿಕೊಳ್ಳಬೇಕಾಗಿದ್ದು, ತಂತಿ ಬೇಲಿಯನ್ನು ಅಳವಡಿಸಿಕೊಂಡ ಸಾಮಾನ್ಯ ವರ್ಗದ ರೈತರಿಗೆ ಶೇ.40 ರಷ್ಟು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ರೈತರಿಗೆ ಶೇ.50 ರಷ್ಟು ಸಹಾಯಧನವನ್ನು ರೈತರ ಖಾತೆಗೆ ನೇರವಾಗಿ ಜಮೆ ಮಾಡಲಾಗುತ್ತಿದೆ. ರೈತರು ಪ್ಯಾಕೇಜ್ ನ ಎಲ್ಲಾ ಘಟಕಗಳನ್ನು ಅಳವಡಿಸಿಕೊಂಡ ನಂತರ ಬಾಕಿ ಇರುವ ಶೇ.25 ರ ಸಹಾಯಧನವನ್ನು ಸಹ ರೈತರ ಖಾತೆಗೆ ನೇರವಾಗಿ ಜಮೆ ಮಾಡಲಾಗುತ್ತಿದೆ.

ಇತ್ತೀಚಿನ ದಿನಗಳಲ್ಲಿ ಕೃಷಿಹೊಂಡಗಳಿಗೆ ಆಕಸ್ಮಿಕವಾಗಿ ಬಿದ್ದು, ಪ್ರಾಣ ಹಾನಿ ಸಂಭವಿಸುತ್ತಿರುವುದರಿಂದ ಜಿಲ್ಲೆಯಲ್ಲಿ ತಂತಿ ಬೇಲಿ ಅಳವಡಿಸಲು ಎಲ್ಲಾ ರೈತರಿಗೂ ಅಧಿಕಾರಿಗಳು ಖುದ್ದಾಗಿ ಭೇಟಿ ನೀಡಿ ತಿಳುವಳಿಕೆ ಪತ್ರವನ್ನು ನೀಡುವುದರೊಂದಿಗೆ ದೊರೆಯುವ ಸಹಾಯಧನ ಮತ್ತು ಸೂಚನಾ ಫಲಕ ಅಳವಡಿಸಲು ತಗಲುವ ವೆಚ್ಚದ ಗರಿಷ್ಠ ನೀಡಲಾಗುವ ರೂ.2000/– ಗಳ ಸಹಾಯಧನದ ಬಗ್ಗೆ ತಿಳಿಸಲಾಗಿರುತ್ತದೆ. ತಂತಿ ಬೇಲಿಯನ್ನು ಅಳವಡಿಸಿಕೊಳ್ಳದಿರುವ ರೈತರೊಂದಿಗೆ ಗ್ರೂಪ್ ಕಾಲ್‌ನಲ್ಲಿ ತಂತಿ ಬೇಲಿಯನ್ನು ಅಳವಡಿಸಿಕೊಳ್ಳುವ ಬಗ್ಗೆ ಎಲ್ಲಾ ರೈತರಿಗೂ ತಿಳುವಳಿಕೆಯನ್ನು ನೀಡುವುದರೊಂದಿಗೆ ಮನಹೊಲಿಸಲು ಪ್ರಯತ್ನಿಸಲಾಗಿರುತ್ತದೆ.

ಮೇ 12 ರಿಂದ ಅಧಿಕಾರಿಗಳ ಸತತ ಪ್ರಯತ್ನದಿಂದಾಗಿ ಇಲ್ಲಿಯವರೆಗೂ 146 ಕೃಷಿಹೊಂಡಗಳಿಗೆ ತಂತಿ ಬೇಲಿಯನ್ನು ಅಳವಡಿಸಿಕೊಂಡಿರುತ್ತಾರೆ ಮತ್ತು 65 ಕೃಷಿಹೊಂಡಗಳಿಗೆ ತಂತಿ ಬೇಲಿ ಅಳವಡಿಸಿಕೊಳ್ಳುವ ಕಾರ್ಯ ಪ್ರಗತಿಯಲ್ಲಿರುತ್ತದೆ. ಉಳಿದ ರೈತರು ತ್ವರಿತವಾಗಿ ತಂತಿ ಬೇಲಿಯನ್ನು ಅಳವಡಿಸಿಕೊಳ್ಳುವುದಾಗಿ ತಿಳಿಸಿರುತ್ತಾರೆ.

ಜಿಲ್ಲೆಯಲ್ಲಿ ಜಂಟಿ ಕೃಷಿ ನಿರ್ದೇಶಕರಾದ ಶ್ರೀಮತಿ. ಜಾವಿದಾ ನಸೀಮಾ ಖಾನಂ ರವರು ಕೃಷಿಹೊಂಡಗಳಲ್ಲಿ ಬಿದ್ದು, ಪ್ರಾಣ ಹಾನಿ ಸಂಭವಿಸುವುದನ್ನು ತಪ್ಪಿಸಲು ಎಲ್ಲಾ ಕೃಷಿ ಭಾಗ್ಯ ಫಲಾನುಭವಿಗಳು ತಂತಿಬೇಲಿಯನ್ನು ಅಳವಡಿಸಿಕೊಳ್ಳುವುದರೊಂದಿಗೆ ಸೂಚನಾ ಫಲಕವನ್ನು ಕಡ್ಡಾಯವಾಗಿ ಎಲ್ಲಾ ರೈತರು ಹಾಕಬೇಕೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿಪ್ಲೊಮಾ ಇನ್ ಕೋ ಆಪರೇಟಿವ್ ಮ್ಯಾನೇಜ್‌ಮೆಂಟ್ ಪ್ರವೇಶಕ್ಕೆ ಅರ್ಜಿಆಹ್ವಾನ

ಕೋಲಾರ

ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜ್ ಮೆಂಟ್, ಸಹಕಾರ ತರಬೇತಿ ಸಂಸ್ಥೆಯು ಜುಲೈ 01 ರಿಂದ 6 ತಿಂಗಳ ಅವಧಿಯ ಡಿಪ್ಲೊಮಾ ಇನ್ ಕೋ ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿಯನ್ನು ಪ್ರಾರಂಭಿಸಿದೆ.

ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ತುಮಕೂರು, ಚಿಕ್ಕಬಳ್ಳಾಪುರ, ಕೋಲಾರ, ಮತ್ತು ಬೆಂಗಳೂರು ದಕ್ಷಿಣ ಜಿಲ್ಲೆಗಳ ಖಾಸಗಿ ಅಭ್ಯರ್ಥಿಗಳಿಂದ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿ ಅಭ್ಯರ್ಥಿಗಳಿಂದ ಮತ್ತು ಎಲ್ಲಾ ವಿವಿಧ ಸಹಕಾರ ಸಂಘ/ಬ್ಯಾಂಕ್‌ಗಳ ಉದ್ಯೋಗಿಗಳು ಅರ್ಜಿ ಸಲ್ಲಿಸಬಹುದು.

ತರಬೇತಿ ಪಡೆಯಲು ಕನಿಷ್ಠ ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಖಾಸಗಿ ಅಭ್ಯರ್ಥಿಗಳಿಗೂ ಸಹ ಪ್ರವೇಶ ಪಡೆಯಲು ಅವಕಾಶವಿರುತ್ತದೆ. ವಯೋಮಿತಿ 16 ವರ್ಷ ದಾಟಿದವರಾಗಿರಬೇಕು. ಅರ್ಜಿಯನ್ನು ಮೇ 30 ರ ಒಳಗಾಗಿ ಸಲ್ಲಿಸಬೇಕು. ತರಬೇತಿ ಪಡೆಯುವ ಎಲ್ಲಾ ಅಭ್ಯರ್ಥಿಗಳಿಗೆ ಮಾಸಿಕ ರೂ. 500/– ಶಿಷ್ಯ ವೇತನ ನೀಡಲಾಗುವುದು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿ ಅಭ್ಯರ್ಥಿಗಳಿಗೆ ಮಾಸಿಕ ರೂ. 600/– ಶಿಷ್ಯ ವೇತನ ನೀಡಲಾಗುವುದು,

ಹೆಚ್ಚಿನ ವಿವರಗಳಿಗೆ ದೂ.080–35541407 ಅಥವಾ ಮೊ.90362 59781 ಸಂಪರ್ಕಿಸಬಹುದು ಅಥವಾ ಸಂಸ್ಥೆಯ ಕಚೇರಿ ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ ಆಪರೇಟಿವ್ ಮ್ಯಾನೇಜ್‌ಮೆಂಟ್ ,ಸಹಕಾರ ಭವನ,#1/3 , 2 ನೇ ಮಹಡಿ,3 ನೇ ಮುಖ್ಯ ರಸ್ತೆ, ಕನ್ನಡ ಸಾಹಿತ್ಯ ಪರಿಷತ್ ಹಿಂಭಾಗ, ಚಾಮರಾಜಪೇಟೆ ,ಬೆಂಗಳೂರು–18 ಇಲ್ಲಿಗೆ ಖುದ್ದಾಗಿ ಭೇಟಿ ನೀಡಬಹುದು ಎಂದು ಪ್ರಾಚಾರ್ಯರಾದ ಶೈಲಾ ಬಿ.ವಿ. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಪಪ್ರಚಾರದಿಂದ ಜನತೆಗೆ ತಪ್ಪು ಸಂದೇಶ

ಕನಕಪುರ

ಗ್ರಾಮದ ಕೆಲವೇ ಬೆರಳೆಣಿಕೆಯ ವ್ಯಕ್ತಿಗಳು ತಪ್ಪು ಮಾಹಿತಿ ಹರಡುವ ಮೂಲಕ ರಾಮನಗರ ಶಾಸಕ ಇಕ್ಬಾಲ್ ಹುಸೇನ್ ಹಾಗೂ ತಮ್ಮ ಬಗ್ಗೆ ಸುಳ್ಳು ಸುದ್ದಿಗಳನ್ನು ಹಬ್ಬಿಸಿದ್ದಾರೆ ಎಂದು ಸಮಾಜ ಸೇವಕ ಹಾಗೂ ಕಾಂಗ್ರೆಸ್ ಮುಖಂಡ ಯದುನಂದನ್ ಗೌಡ ಆರೋಪಿಸಿದ್ದಾರೆ.

ನಗರದಲ್ಲಿನ ತಮ್ಮ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ತಾಲ್ಲೂಕಿನ ಸಾತನೂರು ಹೋಬಳಿ ಹೊಂಗಾಣಿದೊಡ್ಡಿ ಗ್ರಾಮದಲ್ಲಿ ಕಾನೂನುಬದ್ಧವಾಗಿ ನಾವು ಸ್ವಚ್ಛಗೊಳಿಸಿದ ನಮ್ಮ ಜಮೀನಿನ ವಿಚಾರವನ್ನು ತಪ್ಪಾಗಿ ಬಿಂಬಿಸಲಾಗಿದೆ ಎಂದು ಹೇಳಿದರು. ಇದನ್ನು ಸಹಿಸದ ಗ್ರಾಮದ ಕೆಲವರು ಮಾಧ್ಯಮಗಳ ಮೂಲಕ ನಮ್ಮನ್ನು ರೌಡಿಗಳಂತೆ ಚಿತ್ರಿಸಿರುವುದು ವೈಯಕ್ತಿಕವಾಗಿ ನೋವು ತಂದಿದೆ ಎಂದು ಅವರು ಹೇಳಿದರು.

ಅಚ್ಚಲು ನವಾಬ ಸಾಹೇಬರ ಅಧೀನದಲ್ಲಿದ್ದ ಸುಮಾರು ಹತ್ತೊಂಬತ್ತು ಸರ್ವೆ ನಂಬರ್‌ಗಳ 140 ಎಕರೆ ಜಮೀನನ್ನು 1987ರ ಆದೇಶದಂತೆ ಎಲ್.ಆರ್.ಎಫ್. ಕಾಯ್ದೆಯಡಿ ಸರ್ವೆ ನಂಬರ್ 269, 271, 274, 348, 349ರಲ್ಲಿ ಸರ್ಕಾರದ ಆದೇಶದಂತೆ 36 ಎಕರೆ ಜಾಗವನ್ನು ಗ್ರಾಮದ 28 ನಿವಾಸಿಗಳಿಗೆ ಮಾಜಿ ಸಂಸದ ಡಿ.ಕೆ. ಸುರೇಶ್ ಅವರ ಸಲಹೆ ಸೂಚನೆಯಂತೆ ಒಂದು ರೂಪಾಯಿಯೂ ಪಡೆಯದೇ ಹಂಚಿಕೆ ಮಾಡಲಾಗಿದೆ. ಹಕ್ಕುಪತ್ರ ನೀಡುವುದು ಮಾತ್ರ ಬಾಕಿಯಿದೆ ಎಂದು ಅವರು ಮಾಹಿತಿ ನೀಡಿದರು.

ಈ ಜಮೀನಿನ ವಿಷಯವಾಗಿ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ಪ್ರಕರಣ ಬಾಕಿಯಿದೆ ಎಂದು ಸುಳ್ಳು ಹೇಳಿಕೆ ನೀಡಲಾಗಿದೆ ಎಂದು ಅವರು ಅಚ್ಚರಿ ವ್ಯಕ್ತಪಡಿಸಿದರು. ನಾವು ಸ್ವಚ್ಛಗೊಳಿಸಿರುವ ಜಮೀನಿಗೂ ಎಲ್.ಆರ್.ಎಫ್. ಜಮೀನಿಗೂ ಯಾವುದೇ ಸಂಬಂಧವಿಲ್ಲ. ಈ ಪ್ರಕರಣ ಈಗಾಗಲೇ ಉಚ್ಚ ನ್ಯಾಯಾಲಯದಲ್ಲಿ ವಜಾ ಆಗಿದ್ದು, ಗ್ರಾಮಸ್ಥರಿಗೆ ಸಹಾಯವಾಗಿ ಆಡಳಿತಾಧಿಕಾರಿ ಹಾಗೂ ಉಪ ಆಯುಕ್ತರ ಮೂಲಕ ನ್ಯಾಯ ಒದಗಿಸಲು ಆದೇಶ ನೀಡಲಾಗಿದೆ ಎಂಬುದನ್ನು ಮರೆಮಾಚಿ ತಪ್ಪು ಮಾಹಿತಿ ಹರಡಲಾಗಿದೆ ಎಂದು ಅವರು ಆರೋಪಿಸಿದರು.

ಎಲ್.ಆರ್.ಎಫ್. ಕಾಯ್ದೆಯಡಿ ಒಂದು ಕುಂಟೆ ಜಮೀನನ್ನೂ ನಾನು ಅಥವಾ ಶಾಸಕ ಇಕ್ಬಾಲ್ ಹುಸೇನ್ ಅವರು ಒತ್ತುವರಿ ಮಾಡಿಕೊಂಡಿಲ್ಲ ಎಂದು ಅವರು ಸ್ಪಷ್ಟಪಡಿಸಿದರು. ಗ್ರಾಮಸ್ಥರ ಒತ್ತಾಯದ ಮೇರೆಗೆ ನವಾಬ್ ಸಾಹೇಬರು ಜಮೀನಿಗೆ ಜಿ.ಪಿ.ಎ ನೀಡಿದ ನಂತರ 1987ರ ಆದೇಶದಂತೆ ಎಲ್.ಆರ್.ಎಫ್. ಅಡಿ 36 ಎಕರೆ ಜಮೀನು ಹಾಗೂ 2024–25ರಲ್ಲಿ ಜಿ.ಪಿ.ಎ ಆಗಿರುವ ಸರ್ವೆ ನಂಬರ್ 66, 68, 70ರಲ್ಲಿ 13.5 ಎಕರೆ ಜಮೀನನ್ನು ಗ್ರಾಮ ರಸ್ತೆ, ದೇವಾಲಯ ಮತ್ತು ಶಾಲೆಗೆ ಬಿಟ್ಟುಕೊಡಲಾಗಿದೆ ಎಂದು ಹೇಳಿದರು.

ಗ್ರಾಮದ ಉಳಿದ ಐದು ಜನರು ಮಾತ್ರ ಹೆಚ್ಚುವರಿ ಜಮೀನು ಬೇಕೆಂದು ಹೋರಾಟ ನಡೆಸುತ್ತಿರುವುದರಿಂದ ಸಮಸ್ಯೆ ಉಂಟಾಗಿದೆ ಎಂದು ಅವರು ಹೇಳಿದರು. ಎಲ್.ಆರ್.ಎಫ್. ಜಮೀನಿಗೂ ನಾವು ಸ್ವಚ್ಛಗೊಳಿಸಿರುವ ಜಮೀನಿಗೂ ಯಾವುದೇ ಸಂಬಂಧವಿಲ್ಲ. ಸುಖಾಸುಮ್ಮನೆ ನಮ್ಮ ಮೇಲೆ ಆರೋಪ ಹೊರಿಸಿ ತೇಜೋವಧೆ ಮಾಡಲಾಗುತ್ತಿದೆ ಎಂದು ಅವರು ಆರೋಪಿಸಿದರು.

ಈ ಸಂದರ್ಭದಲ್ಲಿ ಗ್ರಾಮಸ್ಥರಾದ ಜವರೇಗೌಡ, ಶಿವಣ್ಣ, ಕನಕರಾಜು, ಪ್ರಕಾಶ್, ನಂಜೇಗೌಡ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ದೊಡ್ಡತಿಮ್ಮನಹಳ್ಳಿಯಲ್ಲಿ ಸಪ್ಪಲಮ್ಮ ದೇವಿ ಜಾತ್ರಾ ಮಹೋತ್ಸವ: ಮೂಲಭೂತ ಸೌಕರ್ಯಗಳ ಕೊರತೆ





ದೊಡ್ಡಬಳ್ಳಾಪುರ

ತಾಲ್ಲೂಕಿನ ತೂಬಗೆರೆ ಹೋಬಳಿಯ ದೊಡ್ಡತಿಮ್ಮನಹಳ್ಳಿಯ ಶ್ರೀ ಸಪ್ಪಲಮ್ಮ ದೇವಿಯ ನೂರಾರು ಗ್ರಾಮಗಳ ಆರಾಧ್ಯ ದೇವತೆ ಜಾತ್ರಾ ಮಹೋತ್ಸವವು ಮೇ 27ರಂದು ಅತ್ಯಂತ ಭಕ್ತಿ, ಸಡಗರ ಹಾಗೂ ಸಾಂಪ್ರದಾಯಿಕವಾಗಿ ಆಚರಿಸಲಾಯಿತು.

ಜಾತ್ರೆಯ ಸಂದರ್ಭದಲ್ಲಿ ದೇವಸ್ಥಾನವನ್ನು ವಿಶೇಷ ವಿದ್ಯುತ್ ದೀಪಾಲಂಕಾರದಿಂದ ಅಲಂಕರಿಸಲಾಗುತ್ತದೆ. ಮಹಿಳೆಯರು ತಂಬಿಟ್ಟಿನ ಆರತಿ ಬೆಳಗಿ ದೇವರಿಗೆ ವಿಶೇಷ ಪೂಜೆ ಸಲ್ಲಿಸಿ ತಮ್ಮ ಇಷ್ಟಾರ್ಥ ಸಿದ್ಧಿಗಾಗಿ ಪ್ರಾರ್ಥನೆ ಸಲ್ಲಿಸುವುದು ಈ ಜಾತ್ರೆಯ ವಿಶೇಷತೆಯಾಗಿದೆ. ಸಾವಿರಾರು ಭಕ್ತರು ದೂರದ ಊರುಗಳಿಂದ ಆಗಮಿಸಿ ತಂಬಿಟ್ಟಿನ ಆರತಿ ಅರ್ಪಿಸುತ್ತಾರೆ.

ಆದರೆ ಈ ಕ್ಷೇತ್ರದಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಸ್ಪಷ್ಟವಾಗಿ ಕಂಡುಬರುತ್ತಿದೆ. ದೇವಸ್ಥಾನಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಹಲವು ಕಿಲೋಮೀಟರ್‌ಗಳವರೆಗೆ ಗುಂಡಿ ಹಾಗೂ ಕಲ್ಲುಗಳಿಂದ ಕೂಡಿದ್ದು, ಸಂಚಾರಕ್ಕೆ ಭಕ್ತರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಗ್ರಾಮ ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿ ಈ ಬಗ್ಗೆ ಗಮನಹರಿಸದಿರುವುದು ಭಕ್ತರ ಆಕ್ರೋಶಕ್ಕೆ ಕಾರಣವಾಗಿದೆ.

ತೂಬಗೆರೆ ಹೋಬಳಿ ಎಡಬಿಡಂಗಿ ಪ್ರದೇಶವಾಗಿದ್ದು ದೇವನಹಳ್ಳಿ ಹಾಗೂ ದೊಡ್ಡಬಳ್ಳಾಪುರ ಎರಡರ ನಡುವಿನ ಅಭಿವೃದ್ಧಿಯಿಂದ ವಂಚಿತವಾಗಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ.

ಸುರೇಶ್, ಮಾಜಿ ಅಧ್ಯಕ್ಷರು, ತೂಬಗೆರೆ ಗ್ರಾಮ ಪಂಚಾಯಿತಿ ಅವರು ಮಾತನಾಡಿ, “ಈ ಪ್ರಸಿದ್ಧ ಧಾರ್ಮಿಕ ಕ್ಷೇತ್ರದ ಅಭಿವೃದ್ಧಿಗೆ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ವಿಶೇಷ ಗಮನ ಹರಿಸಿ ರಸ್ತೆ ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸಬೇಕಿತ್ತು. ಆದರೆ ತಪ್ಪು ಮಾಹಿತಿ ನೀಡಲಾಗುತ್ತಿರುವುದರಿಂದ ಅಭಿವೃದ್ಧಿ ಕುಂಠಿತವಾಗಿದೆ. ಭಕ್ತರಿಗೆ ಅನುಕೂಲವಾಗುವಂತೆ ತಕ್ಷಣ ಕ್ರಮ ಕೈಗೊಳ್ಳಬೇಕು” ಎಂದು ಆಗ್ರಹಿಸಿದರು.

ಉದಯ ಆರಾಧ್ಯ ಟಿ.ಎಸ್., ತೂಬಗೆರೆ ಹಿತರಕ್ಷಣಾ ಸಮಿತಿ ಮುಖಂಡರು ಮಾತನಾಡಿ, “ಸಪ್ಪಲಮ್ಮ ದೇವಾಲಯವು ಸಾವಿರಾರು ಭಕ್ತರ ಆರಾಧನಾ ಕೇಂದ್ರವಾಗಿದ್ದು, ಮೂಲಭೂತ ಸೌಲಭ್ಯಗಳ ಕೊರತೆ ಬಹಳ ದಿನಗಳಿಂದ ಇದೆ” ಎಂದು ಹೇಳಿದರು.

ವಾಸುದೇವ್, ಗ್ರಾಮ ಪಂಚಾಯಿತಿ ಮಾಜಿ ಸದಸ್ಯರು ಹೇಳಿದಂತೆ, ದೇವಾಲಯಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಹಲವು ವರ್ಷಗಳಿಂದ ಹದಗೆಟ್ಟಿದ್ದು, ಮಳೆಗಾಲದಲ್ಲಿ ಪರಿಸ್ಥಿತಿ ಇನ್ನಷ್ಟು ಹದಗೆಡುತ್ತದೆ.

ಕುಡಿಯುವ ನೀರು, ಶೌಚಾಲಯ, ವಿಶ್ರಾಂತಿ ಕೊಠಡಿ ಸೇರಿದಂತೆ ಯಾವುದೇ ಸೌಲಭ್ಯಗಳಿಲ್ಲ. ಹಲವು ಬಾರಿ ಮನವಿ ಹಾಗೂ ಪ್ರತಿಭಟನೆ ಮಾಡಿದರೂ ಪ್ರಯೋಜನವಾಗಿಲ್ಲ ಎಂದು ಅವರು ಆರೋಪಿಸಿದರು.

ಎಸ್. ಎಸ್. ಘಾಟಿ ಅವರು ಹೇಳಿದಂತೆ, ಈ ರಸ್ತೆ ತಾಲ್ಲೂಕಿನ ಪ್ರಮುಖ ಸಂಪರ್ಕ ಮಾರ್ಗವಾಗಿದ್ದು ಹಲವು ವರ್ಷಗಳಿಂದ ಡಾಂಬರೀಕರಣವಾಗಿಲ್ಲ. ಸಚಿವರ ಗಮನಕ್ಕೆ ತರಲಾಗಿದ್ದು, ಮುಂದಿನ ದಿನಗಳಲ್ಲಿ ರಸ್ತೆ ಡಾಂಬರೀಕರಣ ಹಾಗೂ ದೇವಸ್ಥಾನದ ಸುತ್ತ ಕಾಂಕ್ರೀಟ್ ವ್ಯವಸ್ಥೆ ಮಾಡಲಾಗುವುದು ಎಂದು ತಿಳಿಸಿದ್ದಾರೆ.

ಡಾ. ಸೌಮ್ಯ, ಕಾಂಗ್ರೆಸ್ ಮುಖಂಡರು ದೊಡ್ಡತಿಮ್ಮನಹಳ್ಳಿ ಅವರು ಮಾತನಾಡಿ, ದೇವಸ್ಥಾನಕ್ಕೆ ಸಂಪರ್ಕ ರಸ್ತೆ ಹಾಗೂ ಮೂಲಭೂತ ಸೌಲಭ್ಯಗಳನ್ನು ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

# ಎಐ ಆಧಾರಿತ ಜಲ ಆಡಳಿತಕ್ಕೆ ಕರ್ನಾಟಕದ ಒತ್ತು: ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್

ಬೆಂಗಳೂರು



ಹವಾಮಾನ ಬದಲಾವಣೆ, ನಗರೀಕರಣ, ಅಂತರ್ಜಲ ಕುಸಿತ ಹಾಗೂ ಮೂಲಸೌಕರ್ಯಗಳ ಮೇಲಿನ ಹೆಚ್ಚುತ್ತಿರುವ ಒತ್ತಡದಂತಹ ಭವಿಷ್ಯದ ಸವಾಲುಗಳನ್ನು ಸಮರ್ಥವಾಗಿ ಎದುರಿಸಲು ಕೃತಕ ಬುದ್ಧಿಮತ್ತೆ (ಎಐ) ಮತ್ತು ಡಿಜಿಟಲ್ ತಂತ್ರಜ್ಞಾನಗಳು ಪ್ರಮುಖ ಪಾತ್ರ ವಹಿಸುತ್ತಿವೆ ಎಂದು ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಎಲೆಟ್ಸ್ ಮತ್ತು ಕೆಪಿಎಂಜಿ ಸಹಯೋಗದಲ್ಲಿ ಬೆಂಗಳೂರು ಜಲಮಂಡಳಿ ಆಯೋಜಿಸಿದ್ದ ‘ರಾಷ್ಟ್ರೀಯ ಎಐ ಮತ್ತು ಡಿಜಿಟಲ್ ವಾಟರ್ ಶೃಂಗಸಭೆ 2026’ನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬೆಂಗಳೂರು, ಮೈಸೂರು, ಮಂಗಳೂರು, ಧಾರವಾಡ ಮತ್ತು ಬೆಳಗಾವಿಯಂತಹ ನಗರಗಳ ಮೇಲೆ ನೀರಿನ ಒತ್ತಡ ಹೆಚ್ಚಾಗುತ್ತಿದೆ. ದಕ್ಷ, ಪಾರದರ್ಶಕ ಮತ್ತು ಜವಾಬ್ದಾರಿಯುತ ಸಾರ್ವಜನಿಕ ಸೇವೆಗಳನ್ನು ಖಚಿತಪಡಿಸಲು ತಂತ್ರಜ್ಞಾನ ಆಧಾರಿತ ಬುದ್ಧಿವಂತ ಆಡಳಿತ ವ್ಯವಸ್ಥೆಗಳು ಅತ್ಯಗತ್ಯವಾಗಿವೆ ಎಂದು ಅವರು ಹೇಳಿದರು.

ನಗರ ಜಲ ಸರಬರಾಜು ವ್ಯವಸ್ಥೆಗಳಲ್ಲಿ ಎಐ ಮತ್ತು ಡಿಜಿಟಲ್ ಬುದ್ಧಿಮತ್ತೆ ಈಗ ಐಚ್ಛಿಕ ಸಾಧನಗಳಲ್ಲ, ಅವು ಅಗತ್ಯವಾಗಿದೆ. ನೈಜ ಕಾಲ ಮೇಲ್ವಿಚಾರಣೆ, ಮುನ್ಸೂಚನಾ ವಿಶ್ಲೇಷಣೆ, ನೀರಿನ ಬೇಡಿಕೆಯ ಅಂದಾಜು ಹಾಗೂ ದತ್ತಾಂಶ ಆಧಾರಿತ ಆಡಳಿತವು ಭವಿಷ್ಯದ ಜಲ ನಿರ್ವಹಣೆಯನ್ನು ನಿರ್ಧರಿಸಲಿದೆ ಎಂದು ಅವರು ಅಭಿಪ್ರಾಯಪಟ್ಟರು.

ಕರ್ನಾಟಕ ಈಗಾಗಲೇ ಎಐ ಉತ್ಕೃಷ್ಟತಾ ಕೇಂದ್ರಗಳನ್ನು ಸ್ಥಾಪಿಸಿದ್ದು, ಡಿಜಿಟಲ್ ದತ್ತಾಂಶ ಸಂಗ್ರಹಣೆ, ಹಂಚಿಕೆ ಹಾಗೂ ಕಾರ್ಯಕ್ಷಮತೆ ಆಧಾರಿತ ಆಡಳಿತ ವ್ಯವಸ್ಥೆಗಳಿಗೆ ನೀತಿ ಚೌಕಟ್ಟುಗಳನ್ನು ರೂಪಿಸಿದೆ ಎಂದು ಅವರು ಉಲ್ಲೇಖಿಸಿದರು. ಡಿಜಿಟಲ್ ಪರಿವರ್ತನೆಯೊಂದಿಗೆ ಹೊಣೆಗಾರಿಕೆಗೆ ಆದ್ಯತೆ ನೀಡಬೇಕೆಂದು ಅವರು ಕರೆ ನೀಡಿದರು.

ದತ್ತಾಂಶವು ಅಂತಿಮವಾಗಿ ಅಳೆಯಬಹುದಾದ ಆಡಳಿತ ಫಲಿತಾಂಶಗಳಿಗೆ ಕಾರಣವಾಗಬೇಕು. ತಂತ್ರಜ್ಞಾನವು ಸಾರ್ವಜನಿಕರ ವಿಶ್ವಾಸ ಹಾಗೂ ಸಂಸ್ಥೆಗಳ ದಕ್ಷತೆಯನ್ನು ಹೆಚ್ಚಿಸಬೇಕು ಎಂದು ಅವರು ಹೇಳಿದರು.

ಬೆಂಗಳೂರು ಜಲಮಂಡಳಿ ಅಧ್ಯಕ್ಷ ಡಾ. ರಾಮ್ ಪ್ರಸಾತ್ ಮನೋಹರ್ ಮಾತನಾಡಿ, ಬೆಂಗಳೂರಿನ ವೇಗದ ವಿಸ್ತರಣೆ ಹಾಗೂ ಸಂಕೀರ್ಣತೆ ಪರಂಪರ ನಿರ್ವಹಣೆಯಿಂದ ಮುನ್ಸೂಚಕ ಹಾಗೂ ಬುದ್ಧಿವಂತ ನಿರ್ವಹಣೆಯತ್ತ ಬದಲಾವಣೆಯನ್ನು ಅಗತ್ಯಗೊಳಿಸಿದೆ ಎಂದು ಹೇಳಿದರು.

ಬೆಂಗಳೂರು ಜಲಮಂಡಳಿ ಈಗ 14 ದಶಲಕ್ಷಕ್ಕೂ ಹೆಚ್ಚು ಜನರಿಗೆ ಸೇವೆ ನೀಡುತ್ತಿದೆ. ನಗರ ಜಲ ನಿರ್ವಹಣೆಗೆ ಬುದ್ಧಿವಂತ ವ್ಯವಸ್ಥೆಗಳ ಅಗತ್ಯ ಹೆಚ್ಚಾಗಿದೆ.

ಡಿಜಿಟಲ್ ಪರಿವರ್ತನೆಯ ಭಾಗವಾಗಿ ಏಷ್ಯಾದ ಅತಿದೊಡ್ಡ ನಗರಮಟ್ಟದ ಎಸ್‌ಸಿಎಡಿಎ ವ್ಯವಸ್ಥೆ, ಜಿಐಎಸ್ ಆಧಾರಿತ ನಕ್ಷೆಗೊಳಿಸುವಿಕೆ, ಐಒಟಿ ಮೇಲ್ವಿಚಾರಣೆ, ಸ್ವಯಂಚಾಲಿತ ಸೋರಿಕೆ ಪತ್ತೆ ಹಾಗೂ ಸ್ಮಾರ್ಟ್ ಮೀಟರಿಂಗ್ ಯೋಜನೆಗಳನ್ನು ಅಳವಡಿಸಲಾಗಿದೆ ಎಂದು ಅವರು ತಿಳಿಸಿದರು.

ಈ ತಂತ್ರಜ್ಞಾನಗಳ ಮೂಲಕ ನಾನ್ ರೆವಿನ್ಯೂ ವಾಟರ್ ಪ್ರಮಾಣವನ್ನು ಶೇ. 50ರಿಂದ ಶೇ. 26.5ಕ್ಕೆ ಇಳಿಸಲಾಗಿದ್ದು, ಪ್ರತಿದಿನ ಸುಮಾರು 200 ದಶಲಕ್ಷ ಲೀಟರ್ ನೀರು ಉಳಿಸಲಾಗುತ್ತಿದೆ ಎಂದು ಅವರು ಹೇಳಿದರು. ಜೊತೆಗೆ ಎಐ ಆಧಾರಿತ ವಿದ್ಯುತ್ ಆಪ್ಟಿಮೈಸೇಶನ್ ಮೂಲಕ ವಾರ್ಷಿಕವಾಗಿ ಸುಮಾರು ನಲವತ್ತೆರಡು ಕೋಟಿ ರೂಪಾಯಿ ಉಳಿತಾಯವಾಗಿದೆ ಎಂದು ಅವರು ಮಾಹಿತಿ ನೀಡಿದರು.

ಮುಂದಿನ ಐದು ವರ್ಷಗಳಲ್ಲಿ ನಗರಾದ್ಯಂತ ಸ್ಮಾರ್ಟ್ ಮೀಟರಿಂಗ್ ವಿಸ್ತರಣೆ, ನೀರಿನ ನಷ್ಟ ಮತ್ತಷ್ಟು ಕಡಿತ ಹಾಗೂ ಬುದ್ಧಿವಂತ ನಗರ ಯುಟಿಲಿಟಿಗಳ ರಾಷ್ಟ್ರೀಯ ಮಾದರಿಯಾಗಿ ಬೆಂಗಳೂರು ಹೊರಹೊಮ್ಮುವ ಗುರಿ ಹೊಂದಲಾಗಿದೆ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ಎಫ್‌ಕೆಸಿಸಿಐ ಅಧ್ಯಕ್ಷೆ ಉಮಾರೆಡ್ಡಿ, ಎಲೆಟ್ಸ್ ಸಂಸ್ಥಾಪಕ ರವಿಗುಪ್ತಾ, ಕೆಪಿಎಂಜಿ ಪ್ರತಿನಿಧಿ ನಿಲಾಚಲ್ ಮಿಶ್ರಾ ಸೇರಿದಂತೆ ದೇಶ ವಿದೇಶಗಳ ಜಲ ತಜ್ಞರು, ಎಐ ಪರಿಣಿತರು, ನೀತಿ ನಿರೂಪಕರು ಹಾಗೂ ಸ್ಟಾರ್ಟ್‌ಅಪ್ ಪ್ರತಿನಿಧಿಗಳು ಭಾಗವಹಿಸಿದ್ದರು.

# ರಸ್ತೆ ಕಾಮಗಾರಿ ವೇಳೆ ಪೈಪ್ ಲೈನ್‌ಗೆ ಹಾನಿ, ಜನರು ಸಹಕರಿಸುವಂತೆ ಮನವಿ



ವಿಜಯಪುರ

ಪಟ್ಟಣದ ಚಿಕ್ಕಬಳ್ಳಾಪುರ ಮುಖ್ಯರಸ್ತೆಯಲ್ಲಿ, ರಸ್ತೆ ಅಗಲೀಕರಣ ಕಾಮಗಾರಿ ಪ್ರಗತಿಯಲ್ಲಿರುವ ಕಾರಣ, ನೀರು ಸರಬರಾಜು ಮಾಡುತ್ತಿರುವ ಪೈಪ್ ಲೈನ್ ಗಳಿಗೆ ಹಾನಿಯಾಗುತ್ತಿದೆ. ಇದರಿಂದ ಪಟ್ಟಣದ ಕೆಲ ವಾರ್ಡುಗಳಿಗೆ ನೀರಿನ ಸರಬರಾಜಿನಲ್ಲಿ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕಾರ ನೀಡಬೇಕು ಎಂದು ಪರಿಸರ ಎಂಜಿನಿಯರ್ ಶೇಖರ್ ರೆಡ್ಡಿ ಮನವಿ ಮಾಡಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಪಟ್ಟಣದ ಶಿವಗಣೇಶ ಸರ್ಕಲ್ ನಿಂದ ಕೆರೆಕೋಡಿಯವರೆಗೆ ರಸ್ತೆ ಅಗಲೀಕರಣ ಕಾಮಗಾರಿ ಪ್ರಗತಿಯಲ್ಲಿದೆ. ವಿಜಯಪುರ ಅಮಾನಿಕೆರೆಯಲ್ಲಿ ಕೊರೆಯಿಸಿರುವ ಕೊಳವೆಬಾವಿಗಳಿಂದ ನೀರಿನ ಸಂಪುಗಳಿಗೆ ನೀರು ಹಾಯಿಸಲು, ಪೈಪ್ ಲೈನ್ ಸಂಪರ್ಕ ಮಾಡಿದ್ದು, ರಸ್ತೆ ಅಗಲೀಕರಣದ ವೇಳೆ, ತೆರವುಗೊಳಿಸಿರುವ ಮರಗಳ ಬುಡಗಳನ್ನು ತೆರವುಗೊಳಿಸುವಾಗ, ಈ ಜಾಗಗಳಲ್ಲಿ ಹಾದುಹೋಗಿರುವ ಪೈಪ್ ಲೈನ್ ಗಳಿಗೆ ಹಾನಿಯಾಗುತ್ತಿದ್ದು, ಅವುಗಳನ್ನು ದುರಸ್ಥಿಗೊಳಿಸುವುದು ಸ್ವಲ್ಪ ವಿಳಂಬವಾಗುವ ಕಾರಣದಿಂದಾಗಿ, ನಿಗದಿತ ಸಮಯದಲ್ಲಿ ನೀರು ಸರಬರಾಜು ಮಾಡಲು ಕಷ್ಟವಾಗುತ್ತಿದೆ. ಆದ್ದರಿಂದ ನಾಗರಿಕರು ಸಹಕಾರ ನೀಡಬೇಕು ಎಂದರು.

# ಬಕ್ರೀದ್ ಹಬ್ಬ: ಒಂಟೆ, ಗೋವುಗಳ ಹತ್ಯೆ ನಿಷೇಧ

ತುಮಕೂರು

ಬಕ್ರೀದ್ ಹಬ್ಬದ ನಿಮಿತ್ತ ತುಮಕೂರು ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಒಂಟೆ ಗೋವುಗಳ ಹತ್ಯೆ ಹಾಗೂ ಅನಧಿಕೃತ ಸಾಗಾಣಿಕೆಯನ್ನು ನಿಷೇಧಿಸಲಾಗಿದೆ ಎಂದು ಮಹಾನಗರಪಾಲಿಕೆ ಸಹಾಯಕ ಕಾರ್ಯಪಾಲಕ ಅಭಿಯಂತರರು ತಿಳಿಸಿದ್ದಾರೆ.

ತುಮಕೂರು ಮಹಾನಗರಪಾಲಿಕೆಯ ಸಾರ್ವಜನಿಕರಿಗೆ/ ಮಾಂಸ ಮಾರಾಟ ಮಾಲೀಕರುಗಳು ಹಾಗೂ ಎಲ್ಲಾ ಕಸಾಯಿಖಾನೆ ಮಾಲೀಕರುಗಳು ಬಕ್ರೀದ್ ಹಬ್ಬದ ಸಂದರ್ಭದಲ್ಲಿ ಅಕ್ರಮವಾಗಿ ಒಂಟೆ ಗೋವುಗಳ ಹತ್ಯೆ ಹಾಗೂ ಅನಧಿಕೃತ ಸಾಗಾಣಿಕೆಯನ್ನು ಮಾಡುವುದು ಕಾನೂನು ರೀತಿಯ ಶಿಕ್ಷಾರ್ಹ ಅಪರಾಧವಾಗಿದ್ದು, ಸರ್ಕಾರದ ಆದೇಶದಂತೆ ಮೇ 28ರಂದು ಬಕ್ರೀದ್ ಹಬ್ಬದ ಸಂದರ್ಭದಲ್ಲಿ ಅಕ್ರಮವಾಗಿ ಒಂಟೆ ಗೋವುಗಳ ಹತ್ಯೆ ಹಾಗೂ ಅನಧಿಕೃತ ಸಾಗಾಣಿಕೆಯನ್ನು ತಡೆಗಟ್ಟುವ ಬಗ್ಗೆ Prevention of Cruelty to animals Act-1960ರ ರೀತ್ಯಾ ಕ್ರಮಕೈಗೊಳ್ಳಲಾಗುವುದು.

ಈ ಆದೇಶವನ್ನು ಉಲ್ಲಂಘನೆ ಮಾಡಿ ಕಾನೂನು ಬಾಹಿರವಾಗಿ ಪ್ರಾಣಿಗಳ ಸಾಗಾಣಿಕೆ ಅಥವಾ ಹತ್ಯೆ ಮಾಡುವುದು ಕಂಡುಬಂದಲ್ಲಿ ಈ ಬಗ್ಗೆ ಸೂಕ್ತ ಕಾನೂನು ರೀತಿಯ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದ್ದಾರೆ.

# ರೈಲ್ವೆ ವಿಭಾಗದ ವಿಶೇಷ ಅಭಿಯಾನ

ಬೆಂಗಳೂರು

ಅನಧಿಕೃತ ಮಾರಾಟ ಹಾಗೂ ಟಿಕೆಟ್ ರಹಿತ ಪ್ರಯಾಣವನ್ನು ತಡೆಯುವ ಉದ್ದೇಶದಿಂದ ಬೆಂಗಳೂರು ರೈಲ್ವೆ ವಿಭಾಗವು ಮೇ 11ರಿಂದ ಮೇ 26ರವರೆಗೆ ವಿಶೇಷ ತಪಾಸಣಾ ಅಭಿಯಾನ ನಡೆಸಿದ್ದು, ಈ ವೇಳೆ ನೂರಾರು ಪ್ರಕರಣಗಳು ಪತ್ತೆಯಾಗಿವೆ.

ವಿಭಾಗದ ವಿವಿಧ ರೈಲುಗಳು ಹಾಗೂ ರೈಲು ನಿಲ್ದಾಣಗಳಲ್ಲಿ ರೈಲ್ವೆ ಅಧಿಕಾರಿಗಳು ತೀವ್ರ ತಪಾಸಣೆ ಮತ್ತು ಪರಿಶೀಲನಾ ಕಾರ್ಯಾಚರಣೆ ಕೈಗೊಂಡಿದ್ದರು.

ಅಭಿಯಾನದ ವೇಳೆ ಅನಧಿಕೃತ ಮಾರಾಟಕ್ಕೆ ಸಂಬಂಧಿಸಿದ ಒಟ್ಟು 122 ಪ್ರಕರಣಗಳು ಪತ್ತೆಯಾಗಿದ್ದು, ತಪ್ಪಿತಸ್ಥರಿಗೆ ಒಟ್ಟು ರೂ.1,52,000 ದಂಡ ವಿಧಿಸಲಾಗಿದೆ.

ಇದೇ ಅವಧಿಯಲ್ಲಿ ಟಿಕೆಟ್ ರಹಿತ ಪ್ರಯಾಣ ತಡೆಯಲು ವಿಶೇಷ ಟಿಕೆಟ್ ತಪಾಸಣೆಯನ್ನೂ ನಡೆಸಲಾಗಿದ್ದು, 416 ಪ್ರಕರಣಗಳು ಪತ್ತೆಯಾಗಿವೆ. ಈ ಪ್ರಕರಣಗಳಲ್ಲಿ ತಪ್ಪಿತಸ್ಥರಿಂದ ರೂ.3,31,180 ದಂಡ ವಸೂಲಿ ಮಾಡಲಾಗಿದೆ.

ಒಟ್ಟಾರೆ ಅಭಿಯಾನದ ಅವಧಿಯಲ್ಲಿ 538 ಪ್ರಕರಣಗಳು ಪತ್ತೆಯಾಗಿದ್ದು, ರೂ.4,83,180 ಮೊತ್ತದ ದಂಡ ಸಂಗ್ರಹಿಸಲಾಗಿದೆ.

# ‘ಸಚಿವರು ಹೇಳಿದರೆ ಏನು ಬೇಕಾದರೂ ಮಾಡುತ್ತೀರಾ’

ಚಿಂತಾಮಣಿ

ಸಚಿವರು ಹೇಳಿದರೆ ಏನು ಬೇಕಾದರೂ ಮಾಡುತ್ತೀರಾ, ಕಾನೂನು ಕಟ್ಟಳೆ ಏನೂ ಇಲ್ವಾ, ಬಡವರಿಗೊಂದು ನ್ಯಾಯ, ಶ್ರೀಮಂತರಿಗೊಂದು ನ್ಯಾಯವೇ ಎಂದು ಮಾಜಿ ಶಾಸಕ ಜೆಕೆ ಕೃಷ್ಣಾರೆಡ್ಡಿ ಅಧಿಕಾರಿಗಳ ಕಾರ್ಯವೈಖರಿಯನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡರು.

ಚಿಂತಾಮಣಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಾಲಿ ಸಚಿವರ ಅಕ್ರಮಗಳ ಕುರಿತು ಕಿಡಿಕಾರಿದ ಅವರು, ಬಡವರು ಯಾವುದೇ ಕೆಲಸಕ್ಕಾಗಿ ಅರ್ಜಿ ಸಲ್ಲಿಸಿದರೆ ವರ್ಷಗಟ್ಟಲೆ ಅಲೆದಾಡಿಸುತ್ತೀರಿ. ಆದರೆ ಸಚಿವರಿಗೆ ಸಂಬಂಧಿಸಿದ ವಿಷಯ ಬಂದರೆ ಒಂದೇ ವಾರದಲ್ಲಿ ಜಮೀನು ಮಂಜೂರು ಮಾಡುತ್ತೀರಾ ಎಂದು ಪ್ರಶ್ನಿಸಿದರು. ಗ್ರಾಮಲೆಕ್ಕಿಗರಿಂದ ಹಿಡಿದು ತಹಶೀಲ್ದಾರ್, ಸಹಾಯಕ ಆಯುಕ್ತರು, ಜಿಲ್ಲಾಧಿಕಾರಿವರೆಗೆ ಎಲ್ಲರ ವರದಿಗಳು ಶೀಘ್ರವಾಗಿ ಪೂರ್ಣಗೊಳ್ಳುವುದು ಹೇಗೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಅದೇ ಬಡ ಜನರು ಸಲ್ಲಿಸುವ ಅರ್ಜಿಗಳಿಗೆ ವರ್ಷಗಳಾದರೂ ಗಮನ ನೀಡದ ಅಧಿಕಾರಿಗಳು, ಸಚಿವರ ಒತ್ತಡ ಬಂದರೆ ಕಾನೂನು ಬಾಹಿರವಾಗಿ ಬೇಕಾದರೂ ಕೆಲಸ ಮಾಡುತ್ತಾರೆ ಎಂದು ಅವರು ಆರೋಪಿಸಿದರು.



ಸಮ ಸಮಾಜದ ಗುರಿಯನ್ನು ಹೊಂದಿದ್ದ ಡಾ. ಬಿ.ಆರ್. ಅಂಬೇಡ್ಕರ್ ಅವರ ಭವನವನ್ನು ನಗರ ಮಧ್ಯದಲ್ಲಿ ತಮ್ಮ ಅವಧಿಯಲ್ಲಿ ನಿರ್ಮಿಸಿರುವುದನ್ನು ಒಪ್ಪಿಕೊಂಡು ಅದನ್ನು ಇನ್ನಷ್ಟು ಅಭಿವೃದ್ಧಿಪಡಿಸಲಿ, ಅದರಲ್ಲಿ ತಮ್ಮ ವಿರೋಧವಿಲ್ಲ ಎಂದು ಅವರು ಹೇಳಿದರು. ಆದರೆ ಸಚಿವರು ತಮ್ಮ ಸ್ವಾರ್ಥದ ಸಿದ್ಧಾಂತದಿಂದ ಕೆಲಸ ಮಾಡುತ್ತಿದ್ದಾರೆ ಎಂದು ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ್ ವಿರುದ್ಧ ಟೀಕಿಸಿದರು.

ಸಚಿವರು ಸ್ವಾರ್ಥ ಮತ್ತು ಲಾಭವಿಲ್ಲದೆ ಯಾವುದೇ ಕೆಲಸ ಮಾಡುವುದಿಲ್ಲ ಎಂದು ಈ ಹಿಂದಿನಿಂದಲೇ ಹೇಳುತ್ತಾ ಬಂದಿದ್ದೇನೆ ಎಂದು ಅವರು ಆರೋಪಿಸಿದರು.

ಇತ್ತೀಚೆಗೆ ಸಚಿವರು ತಮ್ಮ ಬಗ್ಗೆ ಮಾತನಾಡಿ ತಾವು ವ್ಯಾಪಾರ ಮಾಡುತ್ತಿದ್ದೇನೆಂದು ಹೇಳಿದ್ದನ್ನು ಉಲ್ಲೇಖಿಸಿದ ಅವರು, ಚಿಂತಾಮಣಿ ನಗರದಲ್ಲಿ ಬಡಾವಣೆಗಳನ್ನು ನಿರ್ಮಿಸಿ ವ್ಯಾಪಾರ ಮಾಡುತ್ತಿರುವವರು ಯಾರು ಎಂದು ಪ್ರಶ್ನಿಸಿದರು.

ಅಧಿಕಾರಿಗಳನ್ನು ಪ್ರಶ್ನಿಸಿದರೆ ಸಚಿವರ ಒತ್ತಡ ಇದೆ ಎಂದು ಹೇಳುತ್ತಾರೆ ಎಂದು ಆರೋಪಿಸಿದ ಅವರು, ಅಧಿಕಾರಿಗಳು ಎಚ್ಚರಗೊಳ್ಳಬೇಕು ಎಂದು ಎಚ್ಚರಿಸಿದರು. ಕಾನೂನಿನ ಚೌಕಟ್ಟಿನಲ್ಲಿ ಕೆಲಸ ಮಾಡಬೇಕು, ಸಚಿವರ ಹೇಳಿದಂತೆ ಕಾನೂನು ಬಾಹಿರವಾಗಿ ಕೆಲಸ ಮಾಡಿದರೆ ಸಹಿಸಲಾಗುವುದಿಲ್ಲ ಎಂದು ಹೇಳಿದರು.

ಈಗಾಗಲೇ ಜಿಲ್ಲಾಧಿಕಾರಿಗಳು ಹಾಗೂ ಪ್ರಾದೇಶಿಕ ಅಧಿಕಾರಿಗಳ ಗಮನಕ್ಕೆ ತಂದಿದ್ದೇನೆ ಎಂದು ಅವರು ತಿಳಿಸಿದರು.

ತಮ್ಮ ಕರ್ಮಭೂಮಿ ಚಿಂತಾಮಣಿ ಎಂದು ಹೇಳಿದ ಅವರು, ಜನರ ಪರವಾಗಿ ಕೆಲಸ ಮುಂದುವರಿಸುತ್ತೇನೆ, ಸೋಲು–ಗೆಲುವು ಸಾಮಾನ್ಯ ಎಂದು ಹೇಳಿದರು. ಸಚಿವರ ಅಕ್ರಮಗಳಿಗೆ ಕಡಿವಾಣ ಹಾಕುವುದು ತಮ್ಮ ಹೋರಾಟವಾಗಿದ್ದು, ಅಭಿವೃದ್ಧಿ ಕಾರ್ಯಗಳಿಗೆ ಅಡ್ಡಿ ಮಾಡುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಖಾಸಗಿ ಸಹಭಾಗಿತ್ವದಲ್ಲಿ ವೈದ್ಯಕೀಯ ಕಾಲೇಜು ಸ್ಥಾಪನೆಗೆ ನಗರದಿಂದ ಕನಿಷ್ಠ 10 ಕಿಲೋಮೀಟರ್ ದೂರದಲ್ಲಿ 28 ಎಕರೆ ಜಮೀನು ಅಗತ್ಯವಿದೆ. ಆದರೆ ನಗರ ಭಾಗಕ್ಕೆ ಹತ್ತಿರದಲ್ಲಿ ಜಮೀನು ನೀಡಲು ಸಾಧ್ಯವಿಲ್ಲ ಎಂದು ಅವರು ಹೇಳಿದರು. ಅಧಿಕಾರಿಗಳು ಸಚಿವರ ಒತ್ತಡಕ್ಕೆ ಮಣಿದು ಜಮೀನು ಮಂಜೂರು ಮಾಡಲು ಮುಂದಾದರೆ ಪರಿಸ್ಥಿತಿ ಸರಿಯಾಗುವುದಿಲ್ಲ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಹಿರಿಯ ಮುಖಂಡರಾದ ಅಬ್ಬುಗುಂಡು ಶ್ರೀನಿವಾಸರೆಡ್ಡಿ, ದೇವಳಂ ಶಂಕರ್, ಕೌನ್ಸಿಲರ್ ವೆಂಕಟೇಶ್, ರೆಡ್ಡಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದರು.

29/05/2026

# ಭಾರತ ಸಾರಥಿ

BHARATHA SARATHI KANNADA DAILY NEWS PAPER

ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಮಕ್ಕಳ ದಾಖಲಾತಿ

### ಆಂದೋಲನಕ್ಕೆ ಸಿಇಒ ಸೂಚನೆ

ತುಮಕೂರು

ವರ್ಷಾರಂಭದಲ್ಲೇ ದಾಖಲಾತಿ ಆಂದೋಲನಾ ಹಮ್ಮಿಕೊಳ್ಳುವಂತೆ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಬಿ.ವಿ.ಅಶ್ವಿಜ ತಿಳಿಸಿದ್ದಾರೆ.

ತುಮಕೂರು ದಕ್ಷಿಣ ಶೈಕ್ಷಣಿಕ ಜಿಲ್ಲೆಯ ಎಲ್ಲಾ ಪ್ರೌಢಶಾಲಾ ಮುಖ್ಯ ಶಿಕ್ಷಕರಿಗೆ ಮಂಗಳವಾರ ನಗರದ ಬಾಲ ಭವನದಲ್ಲಿ ಹಮ್ಮಿಕೊಂಡಿದ್ದ 2026–27ನೇ ಸಾಲಿನ ಶೈಕ್ಷಣಿಕ ವರ್ಷವನ್ನು ಪ್ರಾರಂಭ ಮಾಡುವ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರಸಕ್ತ ಶೈಕ್ಷಣಿಕ ವರ್ಷವನ್ನು ಅತ್ಯಂತ ಸಡಗರದಿಂದ ಪ್ರಾರಂಭಿಸಬೇಕು. ಯಾವೊಂದು ಮಗುವೂ ಶಿಕ್ಷಣದಿಂದ ವಂಚಿತವಾಗದಂತೆ ವರ್ಷಾರಂಭದಲ್ಲೇ ದಾಖಲಾತಿ ಆಂದೋಲನ ಹಮ್ಮಿಕೊಳ್ಳುವಂತೆ ಅವರು ಸೂಚಿಸಿದರು.

ಕಳೆದ ಸಾಲಿನ ಎಸ್ಎಸ್ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿರುವುದಕ್ಕಾಗಿ ಎಲ್ಲ ಮುಖ್ಯ ಶಿಕ್ಷಕರನ್ನು ಹಾಗೂ ಅಧಿಕಾರಿಗಳನ್ನು ಅಭಿನಂದಿಸಿದ ಅವರು, ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ ಎಂಟನೇ ತರಗತಿಯಿಂದಲೇ ವಿಶೇಷ ಆದ್ಯತೆ ನೀಡಿ ಬೋಧನೆ ಮಾಡಬೇಕು. ವರ್ಷದ ಎರಡು ಅವಧಿಗೆ ಪ್ರತ್ಯೇಕವಾದ ಶೈಕ್ಷಣಿಕ ಪಾಠ ಬೋಧನಾ ಯೋಜನೆಯನ್ನು ರೂಪಿಸಿಕೊಳ್ಳಬೇಕು. ಅದರ ಪ್ರಕಾರ ಮೊದಲ ಐದು ದಿನ ಪಾಠ ಬೋಧನೆ ನಡೆಸಿ ಪ್ರತಿ ಶನಿವಾರ ಪುನರಾವರ್ತನೆ ನಡೆಸಬೇಕು. ಪ್ರತಿ ಸೋಮವಾರ ಪ್ರತಿ ವಿಷಯದಲ್ಲಿ ಎಂಸಿಕ್ಯೂ ಒಳಗೊಂಡ ಕಿರುಪರೀಕ್ಷೆಯೊಂದನ್ನು ಕಡ್ಡಾಯವಾಗಿ ನಡೆಸಬೇಕು. ತಿಂಗಳಿಗೆ ಒಂದು ಕಿರುಪರೀಕ್ಷೆಯನ್ನು ನಡೆಸಬೇಕು. ಇದರ ಜೊತೆಗೆ ಅನುಭವಾತ್ಮಕ ಕಲಿಕೆಗೆ ಒತ್ತು ಕೊಟ್ಟು ಮಕ್ಕಳಿಗೆ ಕ್ಷೇತ್ರ ಭೇಟಿ ಮಾಡಿಸಬೇಕು. ಶಾಲಾ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಶೌಚಾಲಯ ನಿರ್ವಹಣೆಗೆ ಸ್ಥಳೀಯ ಸರ್ಕಾರದ ಹಾಗೂ ಎಸ್ಡಿಎಂಸಿ ಸಹಕಾರ ಪಡೆದುಕೊಂಡು ಉತ್ತಮವಾಗಿ ನಿರ್ವಹಿಸಬೇಕು ಎಂದು ತಿಳಿಸಿದರು.

ಶಾಲಾ ಶಿಕ್ಷಣ ಇಲಾಖೆಯ ಜಿಲ್ಲಾ ಮಟ್ಟದ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು. ನಂತರ ತುಮಕೂರು ಡಯಟ್‌ಗೆ ಭೇಟಿ ನೀಡಿ ಅಲ್ಲಿ ನಡೆಯುತ್ತಿದ್ದ ಉರ್ದು ಶಿಕ್ಷಕರ ತರಬೇತಿ ಕಾರ್ಯಗಾರದಲ್ಲಿ

## ದೇಶಕ್ಕೆ ನೆಹರು ಕೊಡುಗೆ ಅನನ್ಯ: ಕೆಎಚ್ಎಂ

ಬೆಂಗಳೂರು

ಕ್ವೀನ್ಸ್ ರಸ್ತೆಯ ಕೆಪಿಸಿಸಿ ಕಚೇರಿಯಲ್ಲಿ ನಡೆದ ಭಾರತದ ಮೊದಲ ಪ್ರಧಾನಿ ದಿವಂಗತ ಪಂಡಿತ್ ಜವಾಹರಲಾಲ್ ನೆಹರು ಅವರ ಪುಣ್ಯ ಸ್ಮರಣೆ ಕಾರ್ಯಕ್ರಮದಲ್ಲಿ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಕೆ.ಎಚ್. ಮುನಿಯಪ್ಪ ಅವರು ಭಾಗವಹಿಸಿ, ನೆಹರು ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು.

ನಂತರ ಮಾತನಾಡಿದ ಸಚಿವರು, ಮಹಾತ್ಮ ಗಾಂಧಿಯವರ ಅನುಯಾಯಿಯಾಗಿ ದೀರ್ಘಕಾಲ ಜೈಲು ವಾಸ ಅನುಭವಿಸಿದ ನೆಹರು ಅವರು ಸ್ವಾತಂತ್ರ್ಯ ನಂತರ ದೇಶದ ಮೊದಲ ಪ್ರಧಾನಿಯಾಗಿ ಸೇವೆ ಸಲ್ಲಿಸಿದರು. ದೇಶದ ಸರ್ವಾಂಗೀಣ ಅಭಿವೃದ್ಧಿಗಾಗಿ ಪಂಚವಾರ್ಷಿಕ ಯೋಜನೆಗಳನ್ನು ಜಾರಿಗೆ ತಂದರು ಎಂದು ಹೇಳಿದರು.

ದೇಶದ ಸುಮಾರು ಶೇ.75ರಷ್ಟು ಜನರು ಕೃಷಿಯನ್ನು ಅವಲಂಬಿಸಿರುವ ಹಿನ್ನೆಲೆಯಲ್ಲಿ ಅವರ ಹಿತ ಕಾಪಾಡುವುದರ ಜೊತೆಗೆ ಕೈಗಾರಿಕಾ ಅಭಿವೃದ್ಧಿಗೆ ಒತ್ತು ನೀಡಿದ ನೆಹರು ಅವರು, ಜರ್ಮನಿ ಮತ್ತು ಜಪಾನ್ ದೇಶಗಳ ಸಹಕಾರದೊಂದಿಗೆ ಹಲವು ಕೈಗಾರಿಕೆಗಳ ಸ್ಥಾಪನೆಗೆ ಕಾರಣರಾದರು ಎಂದು ಅವರು ಸ್ಮರಿಸಿದರು.

ದಕ್ಷಿಣ ಭಾರತದ ರಾಜ್ಯಗಳಲ್ಲಿ, ವಿಶೇಷವಾಗಿ ಕರ್ನಾಟಕದ ಹೃದಯ ಭಾಗವಾದ ಬೆಂಗಳೂರಿನಲ್ಲಿ



ಬಿಎಚ್ಇಎಲ್, ಬಿಇಎಂಎಲ್, ಬಿಇಎಲ್, ಐಟಿಐ ಸೇರಿದಂತೆ ಹಲವು ಕೈಗಾರಿಕೆಗಳ ಸ್ಥಾಪನೆಯ ಮೂಲಕ ಕೈಗಾರಿಕಾ ಬೆಳವಣಿಗೆಗೆ ಅವರು ಸಹಕಾರಿ ಯಾಗಿದ್ದರು. ಇದರಿಂದ ಇಂದು ಬೆಂಗಳೂರು ಸಿಲಿಕಾನ್ ಸಿಟಿಯಾಗಿ ಬೆಳೆಯಲು ಸಾಧ್ಯವಾಯಿತು ಎಂದು ಹೇಳಿದರು.

ಪಂಚವಾರ್ಷಿಕ ಯೋಜನೆಗಳು ದೇಶದ ಸರ್ವಾಂಗೀಣ ಅಭಿವೃದ್ಧಿಗೆ ಮಾದರಿಯಾಗಿದ್ದು, ಅವರ ಕೊಡುಗೆಗಳನ್ನು ಪ್ರತಿಯೊಬ್ಬರೂ ಸ್ಮರಿಸಬೇಕು ಎಂದು ಸಚಿವರು ಹೇಳಿದರು.

ಕಾರ್ಯಕ್ರಮದಲ್ಲಿ ಉಸ್ತುವಾರಿ ಗೋಪಿನಾಥ್ ಪಲನಿಯಪ್ಪನ್, ಮಾಜಿ ಸಚಿವರಾದ ಎಚ್. ಆಂಜನೇಯ, ಎಚ್. ಎಂ. ರೇವಣ್ಣ, ಮಾಜಿ ಸಂಸದರಾದ ಉಗ್ರಪ್ಪ, ಚಂದ್ರಪ್ಪ, ಕೆಪಿಸಿಸಿ ಎಸ್‌ಸಿ ಘಟಕದ ಅಧ್ಯಕ್ಷ ಧರ್ಮಸೇನ್, ಕೆಪಿಸಿಸಿ ಕಾರ್ಯಾಧ್ಯಕ್ಷ ಮಂಜುನಾಥ್ ಬಂಡಾರಿ, ವಿಧಾನ ಪರಿಷತ್ ಮುಖ್ಯ ಸಚೇತಕ ಸಲೀಂ ಅಹ್ಮದ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ರಾಜ್ಯ ಮಟ್ಟದಲ್ಲಿ ಆಯ್ಕೆ ಪ್ರಕ್ರಿಯೆ

ಚಿಕ್ಕಬಳ್ಳಾಪುರ

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ 2026–27ನೇ ಸಾಲಿನಲ್ಲಿ ಕ್ರೀಡಾ ವಸತಿ ಶಾಲೆ ಹಾಗೂ ನಿಲಯಗಳಿಗೆ 8ನೇ ತರಗತಿ ಮತ್ತು ಪ್ರಥಮ ಪಿಯುಸಿ ಮಟ್ಟದ ಅರ್ಹ ಕ್ರೀಡಾಪಟುಗಳನ್ನು ಆಯ್ಕೆ ಮಾಡಿ ಪ್ರವೇಶಾವಕಾಶ ಕಲ್ಪಿಸುವ ಉದ್ದೇಶದಿಂದ ಈಗಾಗಲೇ ಜಿಲ್ಲಾ, ವಿಭಾಗ ಹಾಗೂ ರಾಜ್ಯ ಮಟ್ಟದಲ್ಲಿ ಆಯ್ಕೆ ಪ್ರಕ್ರಿಯೆಗಳನ್ನು ನಡೆಸಲಾಗಿದೆ ಎಂದು ತಿಳಿಸಲಾಗಿದೆ.

ಆದರೆ ವಿವಿಧ ಕಾರಣಗಳಿಂದ ಈ ಆಯ್ಕೆ ಪ್ರಕ್ರಿಯೆಗಳಲ್ಲಿ ಭಾಗವಹಿಸಲು ಸಾಧ್ಯವಾಗದ ಅಭ್ಯರ್ಥಿಗಳಿಗೆ ಮತ್ತೊಂದು ಅವಕಾಶ ನೀಡುವ ದೃಷ್ಟಿಯಿಂದ ರಾಜ್ಯದ ಕೆಲವು ಸ್ಥಳಗಳಲ್ಲಿ ವಿಶೇಷ ಆಯ್ಕೆ ಪ್ರಕ್ರಿಯೆಗಳನ್ನು ಆಯೋಜಿಸಲು ಉದ್ದೇಶಿಸಲಾಗಿದೆ ಎಂದು ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

ಈ ವಿಶೇಷ ಆಯ್ಕೆ ಪ್ರಕ್ರಿಯೆ ಎರಡು ಹಂತಗಳಲ್ಲಿ ನಡೆಯಲಿದ್ದು, ಚಿಕ್ಕಬಳ್ಳಾಪುರ ಜಿಲ್ಲೆಯ ಆಸಕ್ತ ಕ್ರೀಡಾಪಟುಗಳು ಇದರ ಸದುಪಯೋಗ ಪಡೆದುಕೊಳ್ಳುವಂತೆ ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಚಿಕ್ಕಬಳ್ಳಾಪುರ ಜಿಲ್ಲಾ ಕಚೇರಿಗೆ ಖುದ್ದು ಭೇಟಿ ನೀಡಬಹುದು ಅಥವಾ ಮೊಬೈಲ್ ಸಂಖ್ಯೆ 7204737892 ಅನ್ನು ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರೇಬೀಸ್ ಬಗ್ಗೆ ನಿರ್ಲಕ್ಷ್ಯ ಬೇಡ: ಎಚ್ಚರಿಕೆ

ಚಿಕ್ಕಬಳ್ಳಾಪುರ

ನಾಯಿ ಕಚ್ಚುವುದು ಸಾಮಾನ್ಯ ಘಟನೆ ಎಂದು ಕಂಡರೂ, ಸರಿಯಾದ ಚಿಕಿತ್ಸೆ ಪಡೆಯದಿದ್ದರೆ ಅದು ಅತ್ಯಂತ ಅಪಾಯಕಾರಿಯಾಗಬಹುದು ಎಂದು ಜಿಲ್ಲಾ ಆರೋಗ್ಯ ಇಲಾಖೆ ಎಚ್ಚರಿಕೆ ನೀಡಿದೆ. ನಾಯಿ ಕಚ್ಚಿದ ತಕ್ಷಣ ಸೂಕ್ತ ಕ್ರಮ ಕೈಗೊಳ್ಳುವುದು ಅತ್ಯಂತ ಅಗತ್ಯವಾಗಿದ್ದು, ನಿರ್ಲಕ್ಷ್ಯ ಮಾಡಿದರೆ ಜೀವಕ್ಕೆ ಅಪಾಯ ಉಂಟಾಗಬಹುದು ಎಂದು ತಿಳಿಸಿದೆ.

ಜಗತ್ತಿನ ಅಪಾಯಕಾರಿ ಕಾಯಿಲೆಗಳಲ್ಲಿ ರೇಬೀಸ್ ಕೂಡ ಒಂದು. ನಾಯಿ ಕಡಿತವೇ ರೇಬೀಸ್‌ಗೆ ಪ್ರಮುಖ ಮೂಲ ಕಾರಣವಾಗಿದ್ದು, ಒಮ್ಮೆ ಸೋಂಕು ತಗುಲಿದರೆ ಚಿಕಿತ್ಸೆ ಮೂಲಕ ಗುಣಪಡಿಸಲು ಸಾಧ್ಯವಿಲ್ಲ ಎಂದು ವೈದ್ಯಕೀಯ ತಜ್ಞರು ತಿಳಿಸಿದ್ದಾರೆ. ಭಾರತದಲ್ಲಿ ನಾಯಿ ಕಡಿತ ಪ್ರಕರಣಗಳು ದಿನೇ ದಿನೇ ಹೆಚ್ಚುತ್ತಿದ್ದು, ಮಕ್ಕಳು, ವೃದ್ಧರು ಹಾಗೂ ವಯಸ್ಕರು ಎನ್ನದೇ ಎಲ್ಲರೂ ಬೀದಿ ನಾಯಿಗಳ ದಾಳಿಗೆ ಒಳಗಾಗಿ ಆಸ್ಪತ್ರೆ ಸೇರುತ್ತಿದ್ದಾರೆ. ರೇಬೀಸ್‌ನಿಂದ ಸಂಭವಿಸುವ ಸಾವುಗಳ ಸಂಖ್ಯೆಯೂ ಹೆಚ್ಚುತ್ತಿರುವುದು ಆತಂಕಕ್ಕೆ ಕಾರಣವಾಗಿದೆ.

ರೇಬೀಸ್ ರೋಗದ ಲಕ್ಷಣಗಳು ತಕ್ಷಣವೇ ಕಾಣಿಸಿಕೊಳ್ಳುವುದಿಲ್ಲ. ವೈರಸ್ ಮೆದುಳಿಗೆ ತಲುಪಲು ಕೆಲವು ವಾರಗಳಿಂದ ತಿಂಗಳುಗಳವರೆಗೆ ಸಮಯ ತೆಗೆದುಕೊಳ್ಳಬಹುದು ಎಂದು ತಿಳಿಸಲಾಗಿದೆ.

ಆರಂಭಿಕ ಹಂತದಲ್ಲಿ ಜ್ವರ, ತಲೆನೋವು, ಕಚ್ಚಿದ ಸ್ಥಳದಲ್ಲಿ ತೀವ್ರ ನೋವು, ತುರಿಕೆ ಅಥವಾ ಜುಮ್ಮೆನಿಸುವಿಕೆ, ಸುಸ್ತು, ವಾಕರಿಕೆ, ಗಂಟಲು ನೋವು ಮತ್ತು ನಿದ್ರಾಹೀನತೆ ಕಾಣಿಸಿಕೊಳ್ಳಬಹುದು.

ರೋಗ ಉಲ್ಬಣಗೊಂಡ ಹಂತದಲ್ಲಿ ಜಲಭಯ (ನೀರು ಕಂಡಾಗ ಅಥವಾ ಕುಡಿಯಲು ಪ್ರಯತ್ನಿಸಿದಾಗ ಗಂಟಲಿನಲ್ಲಿ ಸೆಳೆತ), ಗಾಳಿಯ ಭಯ, ತೀವ್ರ ಆತಂಕ, ಕೋಪ, ಭ್ರಮೆಗಳು, ಅತಿಯಾದ ಜೊಲ್ಲು ಸುರಿಯುವುದು, ನುಂಗಲು ಕಷ್ಟವಾಗುವುದು ಹಾಗೂ ಸ್ನಾಯು ಸೆಳೆತ ಮತ್ತು ಪಾರ್ಶ್ವವಾಯು ಲಕ್ಷಣಗಳು ಕಂಡುಬರುತ್ತವೆ ಎಂದು ವಿವರಿಸಲಾಗಿದೆ.

ನಾಯಿ ಕಚ್ಚಿದ ತಕ್ಷಣ ಗಾಯವನ್ನು ಸಾಬೂನು ಮತ್ತು ಹರಿಯುವ ನೀರಿನಿಂದ ಕನಿಷ್ಠ ಹದಿನೈದು ನಿಮಿಷಗಳ ಕಾಲ ತೊಳೆಯಬೇಕು. ನಂತರ ಆಂಟಿಸೆಪ್ಟಿಕ್ ದ್ರಾವಣ ಬಳಸಿ ಸ್ವಚ್ಛಗೊಳಿಸಬೇಕು.

ತಕ್ಷಣವೇ ಹತ್ತಿರದ ಆಸ್ಪತ್ರೆ ಅಥವಾ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ವೈದ್ಯರ ಸಲಹೆಯಂತೆ ರೇಬೀಸ್ ಲಸಿಕೆ ಹಾಗೂ ಅಗತ್ಯ ಚಿಕಿತ್ಸೆ ಪಡೆಯಬೇಕು ಎಂದು ಸೂಚಿಸಲಾಗಿದೆ. ಮನೆ ಮದ್ದಿನ ಮೇಲೆ ಅವಲಂಬಿಸದೆ ವೈದ್ಯಕೀಯ ಚಿಕಿತ್ಸೆ ಪಡೆಯುವುದು ಅತ್ಯಂತ ಮುಖ್ಯ ಎಂದು ತಿಳಿಸಲಾಗಿದೆ.

ನಾಯಿಗಳಿಂದ ತಪ್ಪಿಸಿಕೊಳ್ಳಲು ಬೀದಿ ನಾಯಿಗಳನ್ನು ಕೆಣಕಬಾರದು, ತಿನ್ನುವಾಗ ಅಥವಾ ಮಲಗಿರುವ ನಾಯಿಗಳ ಹತ್ತಿರ ಹೋಗಬಾರದು, ಮಕ್ಕಳಿಗೆ ಸುರಕ್ಷಿತ ವರ್ತನೆ ಕಲಿಸಬೇಕು ಹಾಗೂ ಸಾಕು ನಾಯಿಗಳಿಗೆ ನಿಯಮಿತವಾಗಿ ರೇಬೀಸ್ ಲಸಿಕೆ ಹಾಕಿಸಬೇಕು ಎಂದು ಸಲಹೆ ನೀಡಲಾಗಿದೆ.

"ನಾಯಿ ಕಚ್ಚಿದರೆ ನಿರ್ಲಕ್ಷ್ಯ ಬೇಡ ತಕ್ಷಣ ಚಿಕಿತ್ಸೆ ಪಡೆಯಿರಿ, ರೇಬೀಸ್‌ನಿಂದ ಜೀವ ಉಳಿಸಿ" ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಮಹೇಶ್ ಕುಮಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮತ್ತೊಂದು ಆಧಾರ್ ಸೇವಾ ಕೇಂದ್ರ ಉದ್ಘಾಟನೆ

ಬಳ್ಳಾರಿ

ಭಾರತೀಯ ವಿಶಿಷ್ಟ ಗುರುತಿನ ಪ್ರಾಧಿಕಾರ (ಯುಐಡಿಎಐ) ಬಳ್ಳಾರಿಯಲ್ಲಿ ಹೊಸ ಆಧಾರ್ ಸೇವಾ ಕೇಂದ್ರವನ್ನು ಆರಂಭಿಸಿದ್ದು, ನಗರದಲ್ಲಿ ನಾಗರಿಕ ಸ್ನೇಹಿ ಆಧಾರ್ ಸೇವೆಗಳನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆ ಇಟ್ಟಿದೆ.

ಹೊಸ ಯುಐಡಿಎಐ ಆಧಾರ್ ಸೇವಾ ಕೇಂದ್ರವನ್ನು ಬಳ್ಳಾರಿಯ ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಜುಬೇರ್ ಎನ್ ಉದ್ಘಾಟಿಸಿದರು.

'ಮಾಡೆಲ್–ಸಿ' ಮಾದರಿಯ ಈ ಕೇಂದ್ರದಲ್ಲಿ ನಾಲ್ಕು ಕಾರ್ಯಾಚರಣಾ ಕಿಟ್‌ಗಳನ್ನು ಅಳವಡಿಸಲಾಗಿದ್ದು, ನಾಗರಿಕರಿಗೆ ವೇಗವಾಗಿ ಮತ್ತು ಸುಲಭವಾಗಿ ಸೇವೆ ಒದಗಿಸಲು ವ್ಯವಸ್ಥೆ ಮಾಡಲಾಗಿದೆ. ಇಲ್ಲಿ ಹೊಸ ಆಧಾರ್ ನೋಂದಣಿ, ಜನಸಾಂಖ್ಯಿಕ ವಿವರ ಹಾಗೂ ಬಯೋಮೆಟ್ರಿಕ್ ನವೀಕರಣ, ದೋಷ ತಿದ್ದುಪಡಿ ಮತ್ತು ಕುಂದುಕೊರತೆ ನಿವಾರಣೆ ಸೇರಿದಂತೆ ಹಲವು ಸೇವೆಗಳು ಒಂದೇ ಸೂರಿನಡಿ ಲಭ್ಯವಾಗಲಿವೆ.

ಸರ್ಕಾರಿ ರಜಾದಿನಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ದಿನಗಳಲ್ಲಿ ಕೇಂದ್ರ ಕಾರ್ಯನಿರ್ವಹಿಸಲಿದ್ದು, ನಾಗರಿಕರಿಗೆ ಹೆಚ್ಚಿನ ಅನುಕೂಲತೆ



ಮತ್ತು ಸುಗಮ ಸೇವಾ ಅನುಭವ ದೊರೆಯಲಿದೆ.

ಉದ್ಘಾಟನಾ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಜುಬೇರ್ ಎನ್ ಅವರು ಕೇಂದ್ರಕ್ಕೆ ಭೇಟಿ ನೀಡಿ, ಸಿಬ್ಬಂದಿ ಹಾಗೂ ನಾಗರಿಕರೊಂದಿಗೆ ಸಂವಾದ ನಡೆಸಿದರು. ಆಧಾರ್ ನೋಂದಣಿ ಮತ್ತು ನವೀಕರಣ ಪ್ರಕ್ರಿಯೆಗಳ ಕುರಿತು ಮಾಹಿತಿ ಪಡೆದು, ಸೇವೆಗಳನ್ನು ಪರಿಣಾಮಕಾರಿಯಾಗಿ ಒದಗಿಸುವ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ವೇಳೆ ಮಾತನಾಡಿದ ಬೆಂಗಳೂರಿನ ಯುಐಡಿಎಐ ಪ್ರಾದೇಶಿಕ ಕಚೇರಿಯ ಉಪ ನಿರ್ದೇಶಕ ಗುಲ್ಶನ್ ಕುಮಾರ್ ಸಿಂಗ್, "ವಿಜಯಪುರ ಮತ್ತು ಬೀದರಿನಲ್ಲಿ ಕಳೆದ ವಾರ ಆರಂಭಗೊಂಡ ಎರಡು ಹೊಸ ಕೇಂದ್ರಗಳೊಂದಿಗೆ ಕರ್ನಾಟಕದಲ್ಲಿ ಈಗಾಗಲೇ ಏಳು ಆಧಾರ್ ಸೇವಾ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದವು. ಬಳ್ಳಾರಿಯ ಹೊಸ ಕೇಂದ್ರದೊಂದಿಗೆ ರಾಜ್ಯದಲ್ಲಿ ಒಟ್ಟು ಎಂಟು ಕೇಂದ್ರಗಳು ಕಾರ್ಯಾರಂಭ ಮಾಡಿದಂತಾಗಿದೆ" ಎಂದು ತಿಳಿಸಿದರು.

ಮುಂದಿನ ಯೋಜನೆಯಾಗಿ ಕರ್ನಾಟಕದಾದ್ಯಂತ ಇನ್ನೂ 16 ಆಧಾರ್ ಸೇವಾ ಕೇಂದ್ರಗಳನ್ನು ಆರಂಭಿಸಲು ಯುಐಡಿಎಐ ಯೋಜನೆ ರೂಪಿಸಿದ್ದು, ಸೆಪ್ಟೆಂಬರ್ 2026ರ ವೇಳೆಗೆ ರಾಜ್ಯದಲ್ಲಿ ಒಟ್ಟು 24 ಆಧಾರ್ ಸೇವಾ ಕೇಂದ್ರಗಳು ಕಾರ್ಯನಿರ್ವಹಿಸಲಿವೆ ಎಂದು ಹೇಳಿದರು.

ಪ್ರತಿ ಆಧಾರ್ ಸೇವಾ ಕೇಂದ್ರವನ್ನು ಯುಐಡಿಎಐ ಎಎಸ್ಕೆ ವ್ಯವಸ್ಥಾಪಕರು ನಿರ್ವಹಿಸಲಿದ್ದು, ನಾಗರಿಕರ ಕುಂದುಕೊರತೆಗಳಿಗೆ ಸಮಯೋಚಿತ ಪರಿಹಾರ ಒದಗಿಸಲಾಗುತ್ತದೆ. ನಾಗರಿಕರು ಯುಐಡಿಎಐ ಆಧಾರ್ ಅಪಾಯಿಂಟ್‌ಮೆಂಟ್ ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ ಅಪಾಯಿಂಟ್‌ಮೆಂಟ್ ಕಾಯ್ದಿರಿಸಬಹುದಾಗಿದೆ.

ಇದಲ್ಲದೆ, 5ರಿಂದ 17 ವರ್ಷದೊಳಗಿನ ಮಕ್ಕಳ ಕಡ್ಡಾಯ ಬಯೋಮೆಟ್ರಿಕ್ ನವೀಕರಣ ಸೇವೆಯನ್ನು ಸೆಪ್ಟೆಂಬರ್ 2026ರವರೆಗೆ ಉಚಿತವಾಗಿ ನೀಡಲಾಗುತ್ತಿದ್ದು, ಈ ಸೌಲಭ್ಯ ಆಧಾರ್ ಸೇವಾ ಕೇಂದ್ರಗಳು ಮತ್ತು ಶಾಲಾ ಶಿಬಿರಗಳಲ್ಲೂ ಲಭ್ಯವಿದೆ.

## ಕೆಳಸೇತುವೆ ಕಾಮಗಾರಿ ತ್ವರಿತ ಪೂರ್ಣಗೊಳಿಸಲು ಸೂಚನೆ



ಬೆಂಗಳೂರು

ಹೆಚ್ಚುವರಿ ಸಿಬ್ಬಂದಿ ಹಾಗೂ ಯಂತ್ರೋಪಕರಣಗಳನ್ನು ಬಳಸಿಕೊಂಡು ವಿಂಡ್ ಟನಲ್ ಕೆಳಸೇತುವೆ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಬೆಂಗಳೂರು ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯ ಹಳೆ ವಿಮಾನ ನಿಲ್ದಾಣ ರಸ್ತೆಯ ಯು.ಆರ್. ರಾವ್ ಉಪಗ್ರಹ ಕೇಂದ್ರದ ಬಳಿ ಇರುವ ವಿಂಡ್ ಟನಲ್ ಜಂಕ್ಷನ್‌ಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಕಾಮಗಾರಿ ಕಾಲಮಿತಿಯೊಳಗೆ ಮುಕ್ತಾಯವಾಗುವಂತೆ ಅಗತ್ಯ ಕ್ರಮ ಕೈಗೊಳ್ಳಲು ನಿರ್ದೇಶಿಸಿದರು.

ಕಾಮಗಾರಿಗೆ ಸಂಬಂಧಿಸಿದ ಜಲಮಂಡಳಿ ಪೈಪ್‌ಲೈನ್, ಒಳಚರಂಡಿ, ಬೆಸ್ಕಾಂ ಕೇಬಲ್‌ಗಳು, ಓಎಫ್‌ಸಿ ಕೇಬಲ್‌ಗಳು ಸೇರಿದಂತೆ ಇತರೆ ಯುಟಿಲಿಟಿಗಳ ಸ್ಥಳಾಂತರ ಕಾರ್ಯ ಪ್ರಗತಿಯಲ್ಲಿದ್ದು, ಮುಂದಿನ ಹತ್ತು ದಿನಗಳೊಳಗೆ ಅವುಗಳನ್ನು ಪೂರ್ಣಗೊಳಿಸಿ ತಡೆಗೋಡೆ ನಿರ್ಮಾಣ ಕಾಮಗಾರಿ ಆರಂಭಿಸಬೇಕು ಎಂದು ಅವರು ಸೂಚಿಸಿದರು.

ವಾಹನ ಸಂಚಾರಕ್ಕೆ ಅಡಚಣೆ ಆಗದಂತೆ ಜಂಕ್ಷನ್‌ನ ಎರಡೂ ಬದಿಗಳಲ್ಲಿರುವ ರಕ್ಷಣಾ ಸಂಸ್ಥೆಗಳು, ಇಸ್ರೋ, ಎನ್ಎಎಲ್ ಹಾಗೂ ಖಾಸಗಿ ಜಾಗಗಳಲ್ಲಿ ತಾತ್ಕಾಲಿಕ ರಸ್ತೆಗಳನ್ನು ನಿರ್ಮಿಸಿ ಸಂಚಾರಕ್ಕೆ ಅವಕಾಶ ಕಲ್ಪಿಸಬೇಕು. ಕಾಮಗಾರಿ ವೇಳೆ ಸಂಚಾರ ದಟ್ಟಣೆ ಉಂಟಾಗದಂತೆ ಸೂಕ್ತ ಸಂಚಾರ ನಿರ್ವಹಣೆ ಹಾಗೂ ಎಲ್ಲಾ ಸುರಕ್ಷತಾ ಕ್ರಮಗಳನ್ನು ಪಾಲಿಸಬೇಕು ಎಂದು ಅವರು ಹೇಳಿದರು.

ಕಾಮಗಾರಿ ಸ್ಥಿತಿ ಬಗ್ಗೆ ಮಾಹಿತಿ ನೀಡಿದ ಅಧಿಕಾರಿಗಳು, ವಿಂಡ್ ಟನಲ್ ಜಂಕ್ಷನ್‌ನಲ್ಲಿ 19 ಕೋಟಿ ರೂಪಾಯಿ ವೆಚ್ಚದಲ್ಲಿ 300 ಮೀಟರ್ ಉದ್ದದ ಕೆಳಸೇತುವೆ ನಿರ್ಮಾಣ ಕೈಗೆತ್ತಿಕೊಳ್ಳಲಾಗಿದ್ದು, ಎರಡೂ ಬದಿಗಳಲ್ಲಿ 7.5 ಮೀಟರ್ ಅಗಲದ ಆರು ಪಥಗಳ ಕೆಳಸೇತುವೆ ನಿರ್ಮಿಸಲಾಗುತ್ತಿದೆ ಎಂದು ತಿಳಿಸಿದರು. ಪ್ರಸ್ತುತ ಶೇ. 70ರಷ್ಟು ಕಾಮಗಾರಿ ಪೂರ್ಣಗೊಂಡಿದೆ.

ಮುಂದಿನ ಹಂತದಲ್ಲಿ ತಡೆಗೋಡೆ ನಿರ್ಮಾಣ, ಮಧ್ಯಭಾಗದ ಬಾಕ್ಸ್‌ಗಳ ಅಳವಡಿಕೆ ಹಾಗೂ ಅಂತಿಮವಾಗಿ ಸರ್ವೀಸ್ ರಸ್ತೆ ನಿರ್ಮಾಣ ಕಾರ್ಯ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ವಿವರಿಸಿದರು.

ಈ ಸಂದರ್ಭದಲ್ಲಿ ಕೇಂದ್ರ ನಗರ ಪಾಲಿಕೆ ಆಯುಕ್ತ ರಾಜೇಂದ್ರ ಚೋಳನ್ ಹಾಗೂ ಕಾರ್ಯಪಾಲಕ ಅಭಿಯಂತರರು ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

## ಪ್ರಯಾಣಿಕರ ಸೌಲಭ್ಯ, ಸುರಕ್ಷತೆ ಹಾಗೂ ನಿಲ್ದಾಣ ಅಭಿವೃದ್ಧಿ ಕುರಿತು ಚರ್ಚೆ




ಹುಬ್ಬಳ್ಳಿ

ಹುಬ್ಬಳ್ಳಿ ರೈಲ್ವೆ ವಿಭಾಗದ ವತಿಯಿಂದ 40ನೇ ವಿಭಾಗೀಯ ರೈಲ್ವೆ ಬಳಕೆದಾರರ ಸಲಹಾ ಸಮಿತಿ (ಡಿಆರ್‌ಯುಸಿಸಿ) ಸಭೆ ಹುಬ್ಬಳ್ಳಿ ರೈಲ್ವೆ ಕಾರ್ಯಾಗಾರದ ಸೆಮಿನಾರ್ ಹಾಲ್‌ನಲ್ಲಿ ನಡೆಯಿತು. ಸಭೆಯಲ್ಲಿ ರೈಲು ನಿಲ್ದಾಣಗಳ ಅಭಿವೃದ್ಧಿ, ಪ್ರಯಾಣಿಕರ ಸುರಕ್ಷತೆ ಹಾಗೂ ರೈಲು ಸೇವೆಗಳ ಸುಧಾರಣೆ ಕುರಿತು ಸಮಗ್ರ ಚರ್ಚೆ ನಡೆಯಿತು.

ಸಭೆಯ ಅಧ್ಯಕ್ಷತೆ ವಹಿಸಿದ್ದ ವಿಭಾಗೀಯ ರೈಲ್ವೆ ವ್ಯವಸ್ಥಾಪಕರಾದ ಶ್ರೀಮತಿ ಬೇಲಾ ಮೀನಾ ಮಾತನಾಡಿ, ಅಮೃತ ಭಾರತ ಯೋಜನೆ ಅಡಿಯಲ್ಲಿ ವಿಭಾಗದ ಹಲವು ರೈಲು ನಿಲ್ದಾಣಗಳನ್ನು ಸ್ಥಳೀಯತೆ, ಐತಿಹಾಸಿಕತೆ ಹಾಗೂ ಪ್ರವಾಸೋದ್ಯಮದ ವೈಶಿಷ್ಟ್ಯಗಳಿಗೆ ಅನುಗುಣವಾಗಿ ಪುನರ್ ಅಭಿವೃದ್ಧಿಪಡಿಸಲಾಗುತ್ತಿದೆ ಎಂದು ತಿಳಿಸಿದರು.

"ಪ್ರಯಾಣಿಕ ಸ್ನೇಹಿ ಸೌಲಭ್ಯಗಳನ್ನು ಒದಗಿಸುವುದು ಇಲಾಖೆಯ ಪ್ರಮುಖ ಉದ್ದೇಶವಾಗಿದೆ. ಅಳ್ನಾವರ, ಬಾದಾಮಿ, ಕೊಪ್ಪಳ ಹಾಗೂ ಹೊಸಪೇಟೆ ರೈಲು ನಿಲ್ದಾಣಗಳ ಪುನರ್ ಅಭಿವೃದ್ಧಿ ಕಾಮಗಾರಿಗಳು ಭರದಿಂದ ಸಾಗುತ್ತಿವೆ. ಜೊತೆಗೆ ವಾಸ್ಕೋ–ಡ–ಗಾಮಾ ಮತ್ತು ಬಳ್ಳಾರಿ ರೈಲು ನಿಲ್ದಾಣಗಳಲ್ಲೂ ಹಂತ ಹಂತವಾಗಿ ಆಧುನೀಕರಣ ಕಾಮಗಾರಿ ಕೈಗೊಳ್ಳಲಾಗುತ್ತಿದೆ" ಎಂದು ಹೇಳಿದರು.

ವಿಭಾಗೀಯ ಹಿರಿಯ ವಾಣಿಜ್ಯ ವ್ಯವಸ್ಥಾಪಕರು ಹಾಗೂ ಡಿಆರ್‌ಯುಸಿಸಿ ಕಾರ್ಯದರ್ಶಿಗಳಾದ ಡಾ. ಕಾರ್ತಿಕ್ ವಿ. ಹೆಗಡೆಕಟ್ಟಿ ಮಾತನಾಡಿ, ರೈಲು ಪ್ರಯಾಣಿಕರ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ ಎಂದು ತಿಳಿಸಿದರು. "ರಾಜ್ಯ ರೈಲ್ವೆ ಪೊಲೀಸ್ ಹಾಗೂ ರೈಲ್ವೆ ರಕ್ಷಣಾ ಪಡೆ ಸಿಬ್ಬಂದಿ ದಕ್ಷತೆಯಿಂದ ಕಾರ್ಯನಿರ್ವಹಿಸುತ್ತಿದ್ದಾರೆ. ಅಗತ್ಯ ಸ್ಥಳಗಳಲ್ಲಿ ಸಿಸಿಟಿವಿ ಮೂಲಕ ನಿಗಾವಹಿಸಲಾಗುತ್ತಿದೆ" ಎಂದು ಹೇಳಿದರು.

ಸಭೆಯಲ್ಲಿ ಸದಸ್ಯರಾದ ಶ್ರೀ ಚಂದ್ರಕಾಂತ ಗವಾಸ್ ಅವರು ರೈಲುಗಳಲ್ಲಿ ಟಿಕೆಟ್ ರಹಿತ ಪ್ರಯಾಣಿಕರ ಸಂಖ್ಯೆ ಹೆಚ್ಚುತ್ತಿರುವ ಕುರಿತು ಆತಂಕ ವ್ಯಕ್ತಪಡಿಸಿ, ಈ ಸಮಸ್ಯೆ ತಡೆಗಟ್ಟಲು ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಸಲಹೆ ನೀಡಿದರು.

ಇನ್ನೋರ್ವ ಸದಸ್ಯರಾದ ವಿ.ಜಿ. ಹಿರೇಗೌಡರ ಅವರು ಗದಗ ಗೂಡ್ಸ್ ಶೆಡ್‌ನಲ್ಲಿ ಸರಕುಗಳ ಲೋಡಿಂಗ್ ಮತ್ತು ಅನ್ಲೋಡಿಂಗ್ ಕಾರ್ಯಗಳಿಗೆ ಅನುಕೂಲವಾಗುವಂತೆ ಮೇಲ್ಛಾವಣಿ ಶೆಡ್ ನಿರ್ಮಿಸಬೇಕೆಂದು ಒತ್ತಾಯಿಸಿದರು.

ಸದಸ್ಯ ಡಿ.ಆರ್. ರಾಟಿ ಅವರು ಹುಬ್ಬಳ್ಳಿ ವಿಜಯಪುರ ನಡುವೆ ಸಂಚರಿಸುವ ಪ್ಯಾಸೆಂಜರ್ ರೈಲುಗಳಿಗೆ ಕಡ್ಲಿಮಟ್ಟಿ, ಸೀತಿಮನಿ ಹಾಗೂ ಕೂಡಲ ಸಂಗಮ ರೋಡ್ ಹಾಲ್ಟ್ ನಿಲ್ದಾಣಗಳಲ್ಲಿ ನಿಲುಗಡೆ ಒದಗಿಸಬೇಕೆಂದು ಮನವಿ ಮಾಡಿದರು.

ಸಭೆಯಲ್ಲಿ ಕರ್ನಾಟಕ ವಾಣಿಜ್ಯೋದ್ಯಮ ಮತ್ತು ಕೈಗಾರಿಕಾ ಸಂಸ್ಥೆ, ಪ್ರಯಾಣಿಕರ ಸಂಘಗಳು, ವ್ಯಾಪಾರಿ ಸಂಘಟನೆಗಳು ಹಾಗೂ ವಿವಿಧ ಕ್ಷೇತ್ರಗಳ ಪ್ರತಿನಿಧಿಗಳಾಗಿ ಕಾರ್ಯನಿರ್ವಹಿಸುತ್ತಿರುವ ಡಿಆರ್‌ಯುಸಿಸಿ ಸದಸ್ಯರು ಭಾಗವಹಿಸಿದ್ದರು.

## ಮಧ್ಯಮ ವರ್ಗದ ಮನೆಮಾತಾಗಲಿರುವ 'ಮಹಾಲಕ್ಷ್ಮೀ ಮದುವೆ'

**ಕಿರುತೆರೆ ಸುದ್ದಿ**

ಮೂಗುತಿ ಮಲ್ಲಿಯಂತಹ ಜನಪ್ರಿಯ ಧಾರಾವಾಹಿಯನ್ನು ಕನ್ನಡಿಗರಿಗೆ ನೀಡಿದ್ದ ಸನ್ ಉದಯ ಟಿವಿ ಇದೀಗ ಮತ್ತೊಂದು ಮನಸೂರೆಗೊಳ್ಳುವ ಕುಟುಂಬ ಕಥಾಹಂದರದೊಂದಿಗೆ ಪ್ರೇಕ್ಷಕರ ಮುಂದೆ ಬರುತ್ತಿದೆ. 'ಮಹಾಲಕ್ಷ್ಮೀ ಮದುವೆ' ಎಂಬ ಹೊಸ ದೈನಂದಿನ ಧಾರಾವಾಹಿ ಜೂನ್ 1ರಿಂದ ಪ್ರಸಾರ ಆರಂಭವಾಗಲಿದ್ದು, ಸೋಮವಾರದಿಂದ ಶನಿವಾರ ಸಂಜೆ 6.30ಕ್ಕೆ ವೀಕ್ಷಕರನ್ನು ರಂಜಿಸಲಿದೆ.

ಮಧ್ಯಮ ವರ್ಗದ ಕುಟುಂಬಗಳ ಬದುಕಿನ ಸುತ್ತ ಸಾಗುವ ಈ ಧಾರಾವಾಹಿ, ಭಾವನೆಗಳು, ಜವಾಬ್ದಾರಿಗಳು ಮತ್ತು ಸಂಬಂಧಗಳ ನೈಜತೆಯನ್ನು ತೆರೆ ಮೇಲೆ ಕಟ್ಟಿಕೊಡಲಿದೆ.

ಕಥೆಯ ನಾಯಕ ಶ್ರೀಹರಿ ಬ್ಯಾಂಕ್ ಉದ್ಯೋಗಿಯಾಗಿದ್ದು, ಅವನ ತಾಯಿ ಮತ್ತು ಅಕ್ಕನ ಕನಸು ಒಳ್ಳೆಯ ವರದಕ್ಷಿಣೆ ಹಾಗೂ ಆಭರಣಗಳನ್ನು ತರುವ ಸೊಸೆ ಮನೆಗೆ ಬರಬೇಕು ಎಂಬುದು. ಅವರ ಆಶಯದಲ್ಲಿ ಸ್ವಾರ್ಥಕ್ಕಿಂತ ಮಗನ ಬದುಕು ಸುಖವಾಗಿರಬೇಕು ಎಂಬ ಭಾವನೆ ಹೆಚ್ಚಾಗಿದೆ.

ಇನ್ನೊಂದೆಡೆ ನಾಯಕಿ ಮಹಾಲಕ್ಷ್ಮೀ ಗಟ್ಟಿತನ ಮತ್ತು ಜವಾಬ್ದಾರಿತನದ ಪ್ರತಿರೂಪ. ತಂದೆಯ ಆಸರೆ ಇಲ್ಲದ ಮನೆಯ ಹೊಣೆ ಹೊತ್ತುಕೊಂಡಿರುವ ಆಕೆ ತಂಗಿಯರ ವಿದ್ಯಾಭ್ಯಾಸ ಮತ್ತು ತಾಯಿಯ ಬದುಕಿಗೆ ಬೆಂಬಲವಾಗಬೇಕು ಎನ್ನುವ ಕನಸು ಹೊಂದಿದ್ದಾಳೆ.

ಮದುವೆಯಾದ ನಂತರವೂ ತನ್ನ ಸಂಬಳವನ್ನು ತಾಯಿಗೆ ನೀಡುತ್ತೇನೆ ಎಂಬುದು ಆಕೆಯ ಸ್ಪಷ್ಟ ಷರತ್ತು. ಒಂದು ಸಣ್ಣ ಸುಳ್ಳಿನ ಆಧಾರದ ಮೇಲೆ ಆರಂಭವಾಗುವ ಶ್ರೀಹರಿ ಮತ್ತು ಮಹಾಲಕ್ಷ್ಮೀ ಮದುವೆ ಮುಂದೇನು ತಿರುವು ಪಡೆಯುತ್ತದೆ ಎಂಬ ಕುತೂಹಲವೇ ಧಾರಾವಾಹಿಯ ಮುಖ್ಯ ಆಕರ್ಷಣೆ. ಧಾರಾವಾಹಿಯಲ್ಲಿ ಮಹಾಲಕ್ಷ್ಮೀ ಪಾತ್ರದಲ್ಲಿ ಖ್ಯಾತ ನಟಿ ಅಮೂಲ್ಯ ಗೌಡ ಅಭಿನಯಿಸುತ್ತಿದ್ದು, ನಾಯಕ ಶ್ರೀಹರಿಯಾಗಿ ಭರತ್ ಶಿವಣ್ಣ ಕಿರುತೆರೆಗೆ



ಪಾದಾರ್ಪಣೆ ಮಾಡುತ್ತಿದ್ದಾರೆ. ಜೊತೆಗೆ ಶಿವಾಜಿರಾವ್ ಜಾಧವ್, ಸೀತಾ ಕೋಟೆ, ಅಮೃತಾ ರಾಮಮೂರ್ತಿ, ಪದ್ಮಿನಿ, ಮಂಜು ಪಾವಗಡ, ಮಾನಸ, ಮೇಘಶ್ರೀ, ಸ್ನೇಹಾ ಭಟ್, ಪ್ರತೀಕ್ಷಾ, ಧನುಷ್ ಗೌಡ ಮತ್ತು ಹರಿಪ್ರಿಯಾ ಸೇರಿದಂತೆ ಹಲವರು ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಲೈಮ್‌ಲೈಟ್ ಪ್ರೊಡಕ್ಷನ್ಸ್ ಬ್ಯಾನರ್ ಅಡಿಯಲ್ಲಿ ನಿರ್ಮಾಣವಾಗುತ್ತಿರುವ ಈ ಧಾರಾವಾಹಿಗೆ ಶಿವಧ್ವಜ್ ಶೆಟ್ಟಿ ಮತ್ತು ಪ್ರಶಾಂತ್ ರೈ ನಿರ್ಮಾಪಕರಾಗಿದ್ದಾರೆ. ಗಾಯತ್ರಿ ಸೆಲ್ವಂ ಕಾರ್ಯಕಾರಿ ನಿರ್ಮಾಪಕರಾಗಿದ್ದು, ಶಿವು ಪೂಜೇನ ಅಗ್ರಹಾರ ನಿರ್ದೇಶನ ಮಾಡುತ್ತಿದ್ದಾರೆ. ಯೋಗೇಶ್ ಗೌಡ ಅವರ ಛಾಯಾಗ್ರಹಣ ಧಾರಾವಾಹಿಗೆ ಮತ್ತಷ್ಟು ಮೆರುಗು ನೀಡಲಿದೆ. ಸಂಬಂಧಗಳ ಸಿಹಿ–ಕಹಿ, ಮಧ್ಯಮ ವರ್ಗದ ಬದುಕಿನ ನೈಜತೆ ಮತ್ತು ಕುಟುಂಬ ಮೌಲ್ಯಗಳ ಮಿಶ್ರಣದೊಂದಿಗೆ 'ಮಹಾಲಕ್ಷ್ಮೀ ಮದುವೆ' ಕನ್ನಡ ಕಿರುತೆರೆ ಪ್ರೇಕ್ಷಕರ ಮನ ಗೆಲ್ಲುವ ನಿರೀಕ್ಷೆ ಮೂಡಿಸಿದೆ.

## ಗ್ರಾಮ ದೇವತೆ ಅಮ್ಮನವರಿಗೆ ಮಾಜಿ ಶಾಸಕರಿಂದ ವಿಶೇಷ ಪೂಜೆ



ಚಿಂತಾಮಣಿ

ನಗರದ ನಾರಸಿಂಹಪೇಟೆಯಲ್ಲಿ ನೆಲೆಸಿರುವ ಚಿಂತಾಮಣಿ ಗ್ರಾಮ ದೇವತೆ ಶ್ರೀ ಗಂಗಾಭವಾನಿ ಅಮ್ಮನವರಿಗೆ ಮಾಜಿ ಶಾಸಕ ಜೆ.ಕೆ. ಕೃಷ್ಣಾರೆಡ್ಡಿ ಅವರು ವಿಶೇಷ ಪೂಜೆ ಸಲ್ಲಿಸಿದರು.

ಶ್ರೀ ಗಂಗಾಭವಾನಿ ಅಮ್ಮನವರ 23ನೇ ವರ್ಷದ ಗಂಗಜಾತ್ರೆ ಮಹೋತ್ಸವದ ಹಿನ್ನೆಲೆಯಲ್ಲಿ ದೇವಾಲಯಕ್ಕೆ ಭೇಟಿ ನೀಡಿದ ಅವರು ಅಮ್ಮನವರ ಆಶೀರ್ವಾದ ಪಡೆದರು. ನಂತರ ಮಾತನಾಡಿದ ಅವರು, ಕ್ಷೇತ್ರದ ಎಲ್ಲಾ ಜನರಿಗೂ ಆರೋಗ್ಯ ಭಾಗ್ಯ ದೊರಕಲಿ, ಉತ್ತಮ ಮಳೆಯಾಗಿ ಸಮೃದ್ಧ ಬೆಳೆ ಬೆಳೆಯಲಿ ಹಾಗೂ ಸಕಲ ಐಶ್ವರ್ಯ ಪ್ರಾಪ್ತಿಯಾಗಿ ಎಲ್ಲ ಜೀವಿಗಳು ಸುಖ, ಶಾಂತಿ ಮತ್ತು ನೆಮ್ಮದಿಯ ಜೀವನ ನಡೆಸಲಿ ಎಂದು ಶ್ರೀ ಗಂಗಾಭವಾನಿ ಅಮ್ಮನವರಲ್ಲಿ ಪ್ರಾರ್ಥಿಸಿದ್ದೇನೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮುಖಂಡರಾದ ಅಬ್ಬುಗುಂಡು ಶ್ರೀನಿವಾಸರೆಡ್ಡಿ, ದೇವಳಂ ಶಂಕರ್, ಎನ್. ವೆಂಕಟೇಶ್, ಆಪ್ತ ಕಾರ್ಯದರ್ಶಿ ವೇಣು ಸೇರಿದಂತೆ ಹಲವರು ಉಪಸ್ಥಿತರಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy